ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 30 ಬುಧವಾರ 2023

₹4

ಸಂಪುಟ: 44 | ಸಂಚಿಕೆ: 135 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಮೈಸೂರು ಮೆಡಿಕಲ್ ಕಾಲೇಜು ಶತಮಾನೋತ್ಸವ ಅದ್ದೂರಿಯಾಗಿ ಆಚರಿಸೋಣ

ಕೆಆರ್ ಆಸ್ಪತ್ರೆಯ ನವೀಕೃತ ಸುಟ್ಟಗಾಯ ವಿಭಾಗದ ಕಟ್ಟಡ, ಎಂಆರ್‌ಐ ಉಪಕರಣ ಉದ್ಘಾಟಿಸಿದ ಬಳಿಕ ಎಂಎಂಸಿ ಆರ್‌ಐ ಶತಮಾನೋತ್ಸವ ಲಾಂಛನ, ವೆಬ್‌ಸೈಟ್ ಅನಾವರಣಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ





ಕೆಆರ್ ಆಸ್ಪತ್ರೆಯ ಸುಟ್ಟಗಾಯ ವಿಭಾಗದ ನವೀಕೃತ ಕಟ್ಟಡ ಹಾಗೂ ರೇಡಿಯಾಲಜಿ ವಿಭಾಗದಲ್ಲಿ ರೋಗಿಗಳ ಅನುಕೂಲಕ್ಕೆ ಸ್ಥಾಪಿಸಿರುವ 9 ಕೋಟಿ ವೆಚ್ಚದ ಎಂಆರ್‌ಐ ಯಂತ್ರೋಪಕರಣ ಘಟಕವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಬಲಚಿತ್ರದಲ್ಲಿ ಎಂಎಂಸಿಆರ್‌ಐ ಆವರಣದ ಗ್ರಂಥಾಲಯ ಕಟ್ಟಡ ಸಭಾಂಗಣದಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ಸಂಸ್ಥೆಯ ಶತಮಾನೋತ್ಸವ ಕಾರ್ಯಕ್ರಮದ ಉದ್ಘಾಟನಾ ಸಂದರ್ಭ.

ಮೈಸೂರು,ಆ.29(ಆರ್‌ಕೆ)– ಮುಂದಿನ ವರ್ಷ ಪ್ರತಿಷ್ಠಿತ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಎಂಎಂಸಿ & ಆರ್‌ಐ)ಯ ಶತಮಾನೋತ್ಸವವನ್ನು ಸಂಭ್ರಮದಿಂದ ಅದ್ದೂರಿಯಾಗಿ ಆಚರಿಸೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕೆಆರ್ ಆಸ್ಪತ್ರೆಯ ಸುಟ್ಟಗಾಯ ವಿಭಾಗದ ನವೀಕೃತ ಕಟ್ಟಡ ಹಾಗೂ ರೇಡಿಯಾಲಜಿ ವಿಭಾಗದಲ್ಲಿ ರೋಗಿಗಳ ಅನುಕೂಲಕ್ಕೆ ಸ್ಥಾಪಿಸಿರುವ 9 ಕೋಟಿ ರೂ. ವೆಚ್ಚದ ಎಂಆರ್‌ಐ ಯಂತ್ರೋಪಕರಣ ಉದ್ಘಾಟಿಸಿದ ಬಳಿಕ ಎಂಎಂಸಿಆರ್‌ಐ ಆವರಣದ ಗ್ರಂಥಾಲಯ ಕಟ್ಟಡ ಸಭಾಂಗಣದಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ಸಂಸ್ಥೆಯ ಶತಮಾನೋತ್ಸವ ಕಾರ್ಯಕ್ರಮಗಳ ಲಾಂಛನ, ವೆಬ್‌ಸೈಟ್ ಅನಾವರಣಗೊಳಿಸಿ, ಕಿರು ಹೊತ್ತಿಗೆ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಮೈಸೂರಿನಲ್ಲಿ ಉನ್ನತ ಶಿಕ್ಷಣ, ವೈದ್ಯಕೀಯ ಶಿಕ್ಷಣ ಸೌಲಭ್ಯವಿರಲಿಲ್ಲ. ಸ್ವಾತಂತ್ರ್ಯ ಪೂರ್ವದ ಬ್ರಿಟಿಷರ ಕಾಲದಲ್ಲಿ ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು 1924ರಲ್ಲಿ ಮೈಸೂರು ಮೆಡಿಕಲ್ ಕಾಲೇಜು ಸ್ಥಾಪಿಸಿದರು. ಅಲ್ಲಿಯವರೆಗೆ ವೈದ್ಯಕೀಯ ಶಿಕ್ಷಣ ಪಡೆಯಬೇಕೆಂದರೆ ಮದ್ರಾಸ್ ಅಥವಾ ಮುಂಬೈಗೆ ಹೋಗಬೇಕಿತ್ತು. ಅಲ್ಲಿ ನಮ್ಮವರಿಗೆ ಸೀಟು ಕೊಡುತ್ತಿರಲಿಲ್ಲ ಎಂದು ಅವರು ನುಡಿದರು.

ನಾಲ್ವಡಿಯವರ ದೂರದೃಷ್ಟಿಯಿಂದ ಆರಂಭವಾದ ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಓದಿದ ಸಾವಿರಾರು ಮಂದಿ ವೈದ್ಯರಾಗಿ, ಪ್ರಾಧ್ಯಾಪಕರಾಗಿ ದೇಶ–ವಿದೇಶಗಳಲ್ಲಿ ಸೇವೆ ಸಲ್ಲಿಸುವಂತಾಗಿದೆ. ಇಂತಹ ಪ್ರತಿಷ್ಠಿತ ಸಂಸ್ಥೆ ನೂರು ವರ್ಷ ಪೂರೈಸಿರುವುದರಿಂದ ಶತಮಾನೋತ್ಸವವನ್ನು ಮುಂದಿನ ವರ್ಷ ಅದ್ದೂರಿಯಾಗಿ ಆಚರಿಸೋಣ ಎಂದು ಸಿದ್ದರಾಮಯ್ಯ ತಿಳಿಸಿದರು.

ಶತಮಾನೋತ್ಸವ ಆಚರಣಾ ಸಮಿತಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪರನ್ನೇ ಅಧ್ಯಕ್ಷರನ್ನಾಗಿ ಮಾಡಿ, ಉಳಿದವರು ಸದಸ್ಯರಾಗಿರಲಿ, ಕಾರ್ಯಕ್ರಮಗಳಿಗೆ ಅಗತ್ಯ ಅನುದಾನ, ಸೌಲಭ್ಯಗಳನ್ನು ಸರ್ಕಾರ ಒದಗಿಸುತ್ತದೆ. ಎಲ್ಲಿಯೂ ಲೋಪವಾಗದಂತೆ ಸಂಭ್ರಮದಿಂದ ಆಚರಿಸೋಣ ಎಂದು ಸಿದ್ದರಾಮಯ್ಯ ಅವರು ಇದೇ ಸಂದರ್ಭ ಪುನರುಚ್ಚರಿಸಿದರು.

ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಸಂದರ್ಭ ಅಧೀನದಲ್ಲಿ ಬರುವ ಕೆಆರ್, ಚೆಲುವಾಂಬ ಹಾಗೂ ಪಿಕೆಟಿಬಿ ಆಸ್ಪತ್ರೆ, ವಿದ್ಯಾರ್ಥಿನಿಲಯಗಳ ಅಭಿವೃದ್ಧಿಗೆ ಸರ್ಕಾರ ಪೂರಕ ಸೌಲಭ್ಯ ಒದಗಿಸಲಿದೆ ಎಂದು ಇದೇ ವೇಳೆ ಭರವಸೆ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಶಾಸಕರಾದ ಕೆ.ಹರೀಶ್ ಗೌಡ, ಅನಿಲ್ ಚಿಕ್ಕಮಾದು, ಡಿ.ರವಿಶಂಕರ್, ವಿಧಾನಪರಿಷತ್ ಸದಸ್ಯರಾದ ಮರಿತಿಬ್ಬೇಗೌಡ, ಡಾ.ಡಿ.ತಿಮ್ಮಯ್ಯ, ಡಾ. ಕೆ.ಗೋವಿಂದರಾಜು, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ವೈದ್ಯಕೀಯ ಶಿಕ್ಷಣ ಇಲಾಖೆ ನಿರ್ದೇಶಕಿ ಡಾ. ಸುಜಾತ ರಾಥೋಡ್, ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕಿ ಡಾ. ಕೆ.ಆರ್.ದಾಕ್ಷಾಯಿಣಿ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ದಕ್ಷಿಣ ವಲಯ ಡಿಐಜಿ ಡಾ.ಬೋರಲಿಂಗಯ್ಯ, ಪ್ರಾಧ್ಯಾಪಕರಾದ ಡಾ.ಎನ್. ನಂಜುಂಡಸ್ವಾಮಿ, ಡಾ.ಮಂಜುನಾಥ್, ಡಾ.ಎಂ.ಎ.ಶೇಖರ್, ಡಾ.ದಿನೇಶ್, ಡಾ. ಚಂದ್ರಶೇಖರ್, ಡಾ.ಸಂಗಮೇಶ್, ಡಾ. ಕೋಮಲ, ಡಾ.ನರೇಂದ್ರ ಹಾಗೂ ಇತರರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಮೆಡಿಕಲ್ ಸೀಟು ಸಿಕ್ಕಿದ್ದರೆ ನಾನು ಸಿಎಂ ಆಗುತ್ತಿರಲಿಲ್ಲ

ಮೈಸೂರು: ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಸೀಟು ಸಿಕ್ಕಿದ್ದರೆ ನಾನು ವೈದ್ಯನಾಗಿ ಸೇವೆ ಸಲ್ಲಿಸುತ್ತಿದ್ದನೇ ಹೊರತು ಮುಖ್ಯಮಂತ್ರಿ ಆಗುತ್ತಿರಲಿಲ್ಲ ಎಂದು ಸಿಎಂ ಸಿದ್ದರಾಮಯ್ಯ ತಮ್ಮ ಲೈಫ್ ಟರ್ನಿಂಗ್ ಪಾಯಿಂಟ್ ಬಗ್ಗೆ ನುಡಿದರು.


ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಗ್ರಂಥಾಲಯದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಸಂಸ್ಥೆಯ ಶತಮಾನೋತ್ಸವ ಕಾರ್ಯಕ್ರಮದ ಲೋಗೋ ವೆಬ್‌ಸೈಟ್ ಅನಾವರಣಗೊಳಿಸಿ ಮಾತನಾಡಿದ ಅವರು, ನಾನು ಹೈಸ್ಕೂಲ್ ಓದುವಾಗ ವಿದ್ಯಾವರ್ಧಕ ಕಾಲೇಜು ಒಂದು ತಟ್ಟಿಗೆಯಲ್ಲಿ ನಡೆಯುತ್ತಿತ್ತು. ಕಟ್ಟಡ ಇರಲಿಲ್ಲ. ಮೆಡಿಕಲ್ ಕಾಲೇಜಿನ ಒಂದು ಮೂಲೆಯಲ್ಲಿದ್ದ ಕ್ಯಾಂಟಿನ್‌ಗೆ ತಿಂಡಿ ತಿನ್ನಲು ಬರುತ್ತಿದ್ದೆವು ಎಂದು ಬಾಲ್ಯದ ನೆನಪು ಮಾಡಿಕೊಂಡರು.

ನಮ್ಮೂರಿನ ನಾರಾಯಣಗೌಡ ಎಂಬುವರು ಮಗನನ್ನು ಮೆಡಿಕಲ್‌ಗೆ ಸೇರಿಸಿದ್ದರು. ಮಗ ಓದುತ್ತಿರುವ ಮೈಸೂರು ಮೆಡಿಕಲ್ ಕಾಲೇಜಿನ ಆವರಣದ, ತರಗತಿ ಕೊಠಡಿಗಳ ಬಗ್ಗೆ ಅವರು ವರ್ಣಿಸುತ್ತಿದ್ದರಿಂದ ಪ್ರೇರೇಪಿತರಾಗಿ ನಮ್ಮಪ್ಪನೂ ನನ್ನನ್ನು ಮೆಡಿಕಲ್ ಓದು ಎಂದು ಹೇಳುತ್ತಿದ್ದ. ಆದರೆ ನನಗೆ ಸೀಟು ಸಿಗಲಿಲ್ಲ. ಬಿಎಸ್ಸಿ ಸೇರಿಕೊಂಡು ಸೆಕೆಂಡ್ ಕ್ಲಾಸ್‌ನಲ್ಲಿ ಪಾಸಾದೆ. ಮುಂದೆ ಬಾಟನಿಯಲ್ಲಿ ಎಂಎಸ್ಸಿ ಮಾಡಬೇಕೆಂದಿದ್ದೆನಾದರೂ ಲಾ ಓದಿದೆ ಎಂದರು.

ಕಾನೂನು ಪದವಿ ಪಡೆದು ನಂತರ ರಾಜಕೀಯಕ್ಕೆ ಬಂದೆ. ಜನರ ಆಶೀರ್ವಾದದಿಂದ ಸಿಎಂ ಆಗಿದ್ದೇನೆ. ನನಗೆ ಅಂದು ಮೆಡಿಕಲ್ ಸೀಟು ಸಿಕ್ಕಿದ್ದರೆ ನಿಮ್ಮಂಗೆ ಡಾಕ್ಟರ್ ಆಗುತ್ತಿದ್ದನೇ ಹೊರತು, ಸಿಎಂ ಆಗಲು ಸಾಧ್ಯವಾಗುತ್ತಿರಲಿಲ್ಲ. ಮನುಷ್ಯನ ಜೀವನದಲ್ಲಿ ತಿರುವು (Turning Point)ಗಳು ಮಹತ್ತರ ಬದಲಾವಣೆಗಳನ್ನು ತರುತ್ತವೆ ಎಂಬುದನ್ನು ಸ್ಮರಿಸಿಕೊಂಡರು.

ಮೆಡಿಕಲ್ ಕಾಲೇಜಿನಲ್ಲಿ ಏಪ್ರಾನ್ ಧರಿಸಿ ಸ್ಟೆಥಾಸ್ಕೋಪ್ ಹಾಕಿಕೊಂಡು ಓಡಾಡುತ್ತಿರುವವರನ್ನು ನೋಡಿ ನನಗೆ ನಿರಾಸೆ ಆಗುತ್ತಿತ್ತು. ಆದರೆ, ನಾನು ಮೆಡಿಕಲ್ ಓದಿದ್ದರೆ ಮುಖ್ಯಮಂತ್ರಿ ಹುದ್ದೆ ಅಲಂಕರಿಸಲು ಸಾಧ್ಯವಾಗುತ್ತಿರಲಿಲ್ಲ ಎಂದು ವಿಚಾರ ಮಾಡಿದಾಗ ಮುಖ್ಯಮಂತ್ರಿಯಾಗುವ ಯೋಗ ಬಂದಿದ್ದಕ್ಕೆ ತೃಪ್ತಿಯಾಗುತ್ತದೆ ಎಂದು ಸಿದ್ದರಾಮಯ್ಯ ನುಡಿದರು.

ಸೆ.3ರಂದು ಬ್ಯಾಂಕಾಕ್‌ನಲ್ಲಿ ವಿದ್ವಾನ್ ಶ್ರೀಧರ್ ಜೈನ್, ಶಿಷ್ಯರಿಂದ ನೃತ್ಯ ಪ್ರದರ್ಶನ





ಶ್ರೀಧರ್ ಜೈನ್ ಸೌಮ್ಯ ಶ್ರೀಧರ್

ಮೈಸೂರು,ಆ.29–ಚಿರಂತನ ಅಕಾಡೆಮಿ ಮತ್ತು ಬ್ಯಾಂಕಾಕ್‌ನ ಥಾಯ್ ಕನ್ನಡ ಬಳಗ, ತಮಿಳು ಅಸೋಸಿಯೇಷನ್ ಮತ್ತು ತೆಲುಗು ಬಳಗದ ಸಂಯುಕ್ತಾಶ್ರಯದಲ್ಲಿ ಸೆ.3ರಂದು ಸಂಜೆ 5.30ಕ್ಕೆ ಥೈಲ್ಯಾಂಡ್‌ನ ರಂಗಮಂಗಲ ಯೂನಿವರ್ಸಿಟಿ ಸಭಾಂಗಣದಲ್ಲಿ ನಡೆಯಲಿರುವ ಇಂಟರ್‌ನ್ಯಾಷನಲ್ ಕಲ್ಚರಲ್ ಫೆಸ್ಟಿವಲ್‌ನಲ್ಲಿ ಮೈಸೂರಿನ 'ಆಪ್ತಮಿತ್ರ' ಖ್ಯಾತಿಯ ಅಂತರರಾಷ್ಟ್ರೀಯ ಕಲಾವಿದರು ಹಾಗೂ ಶ್ರೀ ನಿಮಿಷಾಂಬ ನೃತ್ಯ ಶಾಲೆ ಸಂಸ್ಥಾಪಕರಾದ ವಿದ್ವಾನ್ ಶ್ರೀಧರ್ ಜೈನ್, ಪತ್ನಿ ವಿದುಷಿ ಸೌಮ್ಯ ಶ್ರೀಧರ್ ಮತ್ತು ನೃತ್ಯ ಶಾಲೆಯ 32 ಶಿಷ್ಯರ ಹೆಜ್ಜೆ–ಗೆಜ್ಜೆ ತಂಡದಿಂದ ವೈವಿಧ್ಯಮಯ ಭಾರತೀಯ ನೃತ್ಯಗಳ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಇದೇ ಸಂದರ್ಭದಲ್ಲಿ ವಿದ್ವಾನ್ ಶ್ರೀಧರ್ ಜೈನ್ ಅವರಿಗೆ 'ಗ್ಲೋಬಲ್ ಡ್ಯಾನ್ಸ್ ಐಕಾನ್ ಅವಾರ್ಡ್' ಮತ್ತು ಸಂಗೀತ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ವಿದುಷಿ ಸೌಮ್ಯ ಜೈನ್ ಅವರಿಗೆ 'ಇಂಟರ್‌ನ್ಯಾಷನಲ್ ಆರ್ಟ್ ಸರ್ವೀಸ್ ಎಕ್ಸಲೆನ್ಸ್ ಅವಾರ್ಡ್' ಪ್ರದಾನ ಮಾಡಲಾಗುವುದು. ಉತ್ಸವದಲ್ಲಿ ವಿವಿಧ ಕಲಾ ತಂಡಗಳು ಮತ್ತು ಥಾಯ್ ನೃತ್ಯ ತಂಡಗಳ ನೃತ್ಯ ಪ್ರದರ್ಶನವೂ ಇರುತ್ತದೆ.

ವೈದ್ಯ ವೃತ್ತಿಯಲ್ಲಿ ನಿಷ್ಠೆ, ಶ್ರದ್ಧೆ, ಬದ್ಧತೆ ಇರಲಿ

ಸಿದ್ದರಾಮಯ್ಯ ಕಿವಿಮಾತು

ಮೈಸೂರು,ಆ.29(ಆರ್‌ಕೆ)–ಶ್ರೇಷ್ಠವಾದ ವೈದ್ಯ ವೃತ್ತಿಯಲ್ಲಿ ನಿಷ್ಠೆ ಶ್ರದ್ಧೆ ಹಾಗೂ ಬದ್ಧತೆ ಕಾಪಾಡಿಕೊಳ್ಳಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ನೀಡಿದ್ದಾರೆ.

ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ನಡೆದ ಶತಮಾನೋತ್ಸವ ಲಾಂಛನ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದ ಅವರು, ಯಾವುದೇ ವೃತ್ತಿ ಇರಲಿ ನಿಷ್ಠೆ, ಶ್ರದ್ಧೆ, ಬದ್ಧತೆ ಇದ್ದರೆ ಮಾತ್ರ ನೀವು ಮೇಲೆ ಬರಲು ಸಾಧ್ಯ. ಸಮಾಜ ನಿಮ್ಮನ್ನು ಗುರ್ತಿಸುತ್ತದೆ. ವೃತ್ತಿ ಗೌರವವೂ ಹೆಚ್ಚಾಗುತ್ತದೆ. ಅಲ್ಲಿ ಸಿಗುವ ತೃಪ್ತಿಯೇ ಬೇರೆ. ಅದರಲ್ಲೂ ವೈದ್ಯ ವೃತ್ತಿ ಅತೀ ಶ್ರೇಷ್ಠವಾದುದು ಎಂದರು.

ಪ್ರಾಣ ಉಳಿಸಿದರೆ ಅವರು ತಾವು ಇರುವವರೆಗೂ ನಿಮ್ಮನ್ನು ನೆನಪಿಸಿಕೊಳ್ಳುತ್ತಾರೆ, ಪೂಜಿಸುತ್ತಾರೆ. ರೋಗಿಗಳನ್ನು ಎಷ್ಟೇ ಕಷ್ಟವಾದರೂ ಎಲ್ಲಾ ಪ್ರಯತ್ನ ಮಾಡಿ ಪ್ರಾಣ ಉಳಿಸಿ ಎಂದ ಮುಖ್ಯಮಂತ್ರಿಗಳು, ಬೇರೆಯವರ ಪ್ರಾಣದ ಜೊತೆ ಚೆಲ್ಲಾಟವಾಡಬೇಡಿ. ನಿಮ್ಮ ಬೇಜವಾಬ್ದಾರಿಯಿಂದ ರೋಗಿ ಸಾಯಬಾರದು. ನಿಮ್ಮ ಕೈಲಾದ ಎಲ್ಲಾ ಪ್ರಯತ್ನಗಳನ್ನೂ ಪ್ರಾಮಾಣಿಕವಾಗಿ ಮಾಡಿಯೂ ರೋಗಿ ಸಾವನ್ನಪ್ಪಿದರೆ ನೀವೂ ಏನು ಮಾಡಲು ಸಾಧ್ಯವಾಗುವುದಿಲ್ಲ ಎಂದು ನುಡಿದರು.

ವೈದ್ಯಕೀಯ ಶಿಕ್ಷಣ ಪಡೆದು ವೈದ್ಯರಾದ ಮೇಲೆ ಆ ವೃತ್ತಿ ಬಿಟ್ಟು ಬೇರೆ ಕೆಲಸ ಆಯ್ಕೆ ಮಾಡುವುದೂ ಸರಿಯಲ್ಲ. ಯಾರ್‍ಯಾರದೋ ಶಿಫಾರಸ್ಸು ತಂದು ನನ್ನ ಬಳಿ ಬಂದು ಕೆಲ ವೈದ್ಯರು ಬೇರೆ ಕೆಲಸ ಕೇಳಿಕೊಂಡು ಬರುವವರಿಗೆ ನೀವು ಶ್ರೇಷ್ಠವಾದ ವೈದ್ಯ ವೃತ್ತಿಯನ್ನೇ ಮಾಡಿ ಎಂದು ಸಲಹೆ ನೀಡುತ್ತೇನೆ ಎಂದ ಅವರು, ನಾನು ಲಾ ಓದಿದರೂ ರಾಜಕಾರಣಿಯಾಗಿಲ್ಲವೆ ಎಂದು ನೀವು ಕೇಳಬಹುದು. ಆದರೆ ರಾಜಕಾರಣಿಗೆ ಇಂತಹುದೇ ವಿದ್ಯಾರ್ಹತೆ ಎಂದು ನಿಗದಿಯಾಗಿಲ್ಲ. ಜೊತೆಗೆ ಕಾನೂನು ರಚಿಸುವ ಜನಪ್ರತಿನಿಧಿಗಳಿಗೆ ಕಾನೂನು ತಿಳಿದುಕೊಂಡಿದ್ದರೆ ಉತ್ತಮ ರೀತಿಯಲ್ಲಿ ಆಡಳಿತ ಕೊಡಲು ಸಾಧ್ಯ. ಅದರಿಂದಲೇ ನಾನು ಇಂದು ಮುಖ್ಯಮಂತ್ರಿ ಹುದ್ದೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಾಧ್ಯವಾಗಿದೆ ಎಂದು ಸಮಜಾಯಿಷಿ ನೀಡಿದರು.

ಜನರ ಆರೋಗ್ಯ ಸ್ಥಿತಿ ಚೆನ್ನಾಗಿರಲಿ ಎಂಬ ಉದ್ದೇಶದಿಂದಲೇ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಮೈಸೂರಲ್ಲಿ ಜಿಲ್ಲಾಸ್ಪತ್ರೆ, ಜಯದೇವ ಹೃದ್ರೋಗ ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಟ್ರಾಮಾ ಕೇರ್ ಸೆಂಟರ್ ಕಟ್ಟಡ ನಿರ್ಮಿಸಿದೆ. ಮುಂದೆಯೂ ಮೈಸೂರು ಮೆಡಿಕಲ್ ಕಾಲೇಜು, ಅಧೀನಾಸ್ಪತ್ರೆಗಳ ಉನ್ನತೀಕರಣಕ್ಕೆ ಅಗತ್ಯ ಅನುದಾನ ನೀಡುತ್ತೇನೆ ಎಂದರು.

ರಾಷ್ಟ್ರೀಯ ಕ್ರೀಡಾದಿನ: ವಿವಿಧ ಸ್ಪರ್ಧೆ ಆಯೋಜನೆ



ಮೈಸೂರು,ಆ.29(ಎಂಟಿವೈ)– ಹಾಕಿ ಮಾಂತ್ರಿಕ ಮೇಜರ್ ಧ್ಯಾನ್‌ಚಂದ್ ಅವರ ಜನ್ಮದಿನದ ಅಂಗವಾಗಿ ಆಚರಿಸುವ ರಾಷ್ಟ್ರೀಯ ಕ್ರೀಡಾದಿನದ ಹಿನ್ನೆಲೆಯಲ್ಲಿ ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಅಂತರ ಕಾಲೇಜು ಹಾಕಿ, ಬಾಸ್ಕೆಟ್‌ಬಾಲ್ ಹಾಗೂ ಟಗ್ ಆಫ್ ವಾರ್ ಕ್ರೀಡಾಕೂಟದಲ್ಲಿ ವಿವಿಧ ಕಾಲೇಜುಗಳ ಕ್ರೀಡಾಪಟುಗಳು ಪಾಲ್ಗೊಂಡು ಕ್ರೀಡಾಸ್ಫೂರ್ತಿ ಪ್ರದರ್ಶಿಸಿದರು.

ಜಿಲ್ಲಾಡಳಿತ, ಜಿ.ಪಂ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿಸಿದ್ದ ಪುರುಷ ಹಾಗೂ ಮಹಿಳೆಯರ ವಿಭಾಗದ ಕ್ರೀಡಾಕೂಟಕ್ಕೆ ಶಾಸಕ ತನ್ವೀರ್ ಸೇಠ್ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ರಾಷ್ಟ್ರೀಯ ಹಾಕಿ ಕ್ರೀಡಾಪಟು ಮೇಜರ್ ಧ್ಯಾನ್‌ಚಂದ್ ಅವರು ಹಾಕಿಯಲ್ಲಿ ಮಾಡಿದ ಸಾಧನೆಯು ದೇಶದ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿಯ ಸೆಲೆಯಾಗಿದೆ. ಅವರ ಸಾಧನೆಗೆ ಗೌರವಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಕ್ರೀಡಾದಿನ ಎಂದು ಆಚರಿಸಲಾಗುತ್ತಿದೆ. ಕ್ರೀಡಾದಿನದ ಅಂಗವಾಗಿ ಆಯೋಜಿಸಿರುವ ಕ್ರೀಡಾಕೂಟದಲ್ಲಿ ಪಾಲ್ಗೊಂಡಿರುವ ವಿವಿಧ ಕಾಲೇಜುಗಳ ಕ್ರೀಡಾಪಟುಗಳು ಕ್ರೀಡಾಸ್ಫೂರ್ತಿ ಪ್ರದರ್ಶಿಸಬೇಕು ಎಂದು ಸಲಹೆ ನೀಡಿದರು.

ಯುವ ಆಟಗಾರರು ಧ್ಯಾನ್‌ಚಂದ್ ಅವರನ್ನು ಮಾದರಿಯಾಗಿಸಿಕೊಂಡು ತಾವು ಪ್ರತಿನಿಧಿಸುವ ಕ್ರೀಡೆಯಲ್ಲಿ ಸಾಧನೆ ಮಾಡುವತ್ತ ಗಮನ ಹರಿಸಬೇಕು. ದೇಶದಲ್ಲಿ ಕ್ರೀಡೆಗೆ ಇನ್ನಷ್ಟು ಪ್ರೋತ್ಸಾಹ ನೀಡುವ ಅಗತ್ಯವಿದೆ. ಕ್ರೀಡೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡರೆ ಸಾಧನೆ ಮಾಡಬಹುದು ಎಂದರು. ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್‌ನಾಯಕ್, ರಾಷ್ಟ್ರೀಯ ಹಾಕಿ ಪಟು ಎಸ್.ಎಂ.ಸಹನಾ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಚಾಮುಂಡಿಬೆಟ್ಟಕ್ಕೆ ಸೈಕ್ಲೋಥಾನ್

ಮೈಸೂರು,ಆ.29(ಎಂಟಿವೈ)– ರಾಷ್ಟ್ರೀಯ ಕ್ರೀಡಾ ದಿನದ ಅಂಗವಾಗಿ ಮೈಸೂರು ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ (ಎಂಡಿಸಿಎ) ಮಂಗಳವಾರ ಆಯೋಜಿಸಿದ್ದ ಸೈಕ್ಲೋಥಾನ್‌ನಲ್ಲಿ ವಿವಿಧ ವಯೋಮಾನದ 67 ಸೈಕ್ಲಿಸ್ಟ್‌ಗಳು ಪಾಲ್ಗೊಂಡು ಚಾಮುಂಡಿ ಬೆಟ್ಟಕ್ಕೆ ಸೈಕಲ್ ಯಾನ ನಡೆಸಿದರು.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಚಾಮುಂಡಿವಿಹಾರ ಕ್ರೀಡಾಂಗಣದ ಮುಂಭಾಗದಿಂದ ಆರಂಭವಾದ ಸೈಕ್ಲಥಾನ್‌ಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್‌ನಾಯಕ್ ಚಾಲನೆ ನೀಡಿದರು. ಮೈಸೂರಿನ ವಿವಿಧೆಡೆಯಿಂದ ಆಗಮಿಸಿದ್ದ ಸೈಕ್ಲಿಸ್ಟ್‌ಗಳು ನಜರ್‌ಬಾದ್, ಲಲಿತ ಮಹಲ್ ರಸ್ತೆ, ಕುರುಬಾರಹಳ್ಳಿ ವೃತ್ತದ ಮೂಲಕ ಚಾಮುಂಡಿಬೆಟ್ಟ ತಲುಪಿದರು. ಬಳಿಕ ಮಹಿಷಾಸುರ ಪ್ರತಿಮೆ ಬಳಿ ಸುತ್ತು ಹಾಕಿ ಮತ್ತೆ ಮೈಸೂರಿಗೆ ಪ್ರಯಾಣ ಬೆಳೆಸಿ ಚಾಮುಂಡಿವಿಹಾರ ಕ್ರೀಡಾಂಗಣ ತಲುಪಿ ಸೈಕ್ಲೋಥಾನ್ ಅನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದರು. ಮೈಸೂರು ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಗೌರವಾಧ್ಯಕ್ಷ ರಮೇಶ್ ನರಸಯ್ಯ, ಅಧ್ಯಕ್ಷ ಅರುಣ್ ಪಾಟೀಲ್, ಉಪಾಧ್ಯಕ್ಷ ಬಿ.ಮಂಜುನಾಥ್, ಕೋಚ್ ಫರಿಯಾಲ್ ಇನ್ನಿತರರಿದ್ದರು.



ಕೆ.ಆರ್.ನಗರದಲ್ಲಿ ನಿಧಿ ಆಪ್ಕೆ ನಿಕಟ್ 2.0 ಕಾರ್ಯಕ್ರಮ



ಮೈಸೂರು,ಆ.29–ಇಪಿಎಫ್‌ಓ ಪ್ರಾದೇಶಿಕ ಕಚೇರಿಯಿಂದ ನಿಧಿ ಆಪ್ಕೆ ನಿಕಟ್ 2.0ರ ಅಡಿಯಲ್ಲಿ ಜಿಲ್ಲಾ ವ್ಯಾಪ್ತಿಯ ಕಾರ್ಯಕ್ರಮ ಕೆ.ಆರ್.ನಗರದಲ್ಲಿ ನಡೆಯಿತು.

ಕೆ.ಆರ್.ನಗರ ತಾಲೂಕು ಪಂಚಾಯಿತಿ ಎಎಒ ಲೋಕೇಶ್, ಎಎಒ, ಕೆಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಸತೀಶ್ ಈ ವೇಳೆ ಉಪಸ್ಥಿತರಿದ್ದರು. ಇಪಿಎಫ್‌ಓ, ಪ್ರಾದೇಶಿಕ ಕಚೇರಿಯಿಂದ ಲೆಕ್ಕಾಧಿಕಾರಿ ಎಂ.ಅಶೋಕ್‌ಕುಮಾರ್, ಜಿಲ್ಲಾ ನೋಡಲ್ ಅಧಿಕಾರಿ, ವಿಭಾಗದ ಮೇಲ್ವಿಚಾರಕರು, ಆರ್.ಮಂಜುನಾಥ್, ಎಸ್‌ಎಸ್‌ಎಸ್‌ಎ, ಡಿ.ಮನೋಜ್‌ಕುಮಾರ್, ಎಸ್‌ಎಸ್‌ಎ ಉದ್ಯೋಗದಾತರು, ಉದ್ಯೋಗಿಗಳು ಮತ್ತು ಪಿಂಚಣಿದಾರರು ಕುಂದುಕೊರತೆಗಳ ಪರಿಹಾರ ಮತ್ತು ಸಂದರ್ಭದ ಸರಿಯಾದ ನಿರ್ವಹಣೆಗಾಗಿ ಉಪಸ್ಥಿತರಿದ್ದರು.

ಇಪಿಎಫ್‌ಓ ಉದ್ಯೋಗದಾತರು, ಉದ್ಯೋಗಿಗಳು ಮತ್ತು ಪಿಂಚಣಿದಾರರು ತಮ್ಮ ಪ್ರಶ್ನೆಗಳು ಮತ್ತು ಕುಂದುಕೊರತೆಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿದ್ದರು. ಅವುಗಳನ್ನು ಸ್ಥಳದಲ್ಲೇ ಆಲಿಸಿ ಪರಿಹರಿಸಲಾಯಿತು.

ಉಚಿತ ಲ್ಯಾಪ್‌ಟಾಪ್ ವಿತರಣೆಗೆ ಅರ್ಜಿ ಆಹ್ವಾನ

ಮೈಸೂರು,ಆ.29–ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರ ಮಕ್ಕಳ ಪೈಕಿ 2023–24ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ನೀಡಲಾಗುತ್ತಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿ ನೋಂದಣಿಯಾಗಿರುವ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಸೌಲಭ್ಯವನ್ನು ಪಡೆಯಲು ಇಚ್ಛಿಸಿದ್ದಲ್ಲಿ ಅರ್ಜಿಗಳನ್ನು ತಾಲೂಕಿನ ಕಾರ್ಮಿಕ ನಿರೀಕ್ಷಕರು ಅಥವಾ ಹಿರಿಯ ಕಾರ್ಮಿಕ ನಿರೀಕ್ಷಕರ ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆ.19ರೊಳಗೆ ಅರ್ಜಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂಖ್ಯೆ 0821 2343990 ಮತ್ತು ತಾಲೂಕು ಕಾರ್ಮಿಕ ನಿರೀಕ್ಷಕರು ಅಥವಾ ಹಿರಿಯ ಕಾರ್ಮಿಕ ನಿರೀಕ್ಷಕರ ಕಚೇರಿಯನ್ನು ಸಂಪರ್ಕಿಸಬಹುದು.

ಇಂದು ವಿಶೇಷ ಉಪನ್ಯಾಸ ಕಾರ್ಯಕ್ರಮ

ಮೈಸೂರು, ಆ.29–ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಆ.30ರಂದು ಬೆಳಗ್ಗೆ 11 ಗಂಟೆಗೆ ಮೇಲುಕೋಟೆ ಮತ್ತು ತೊಣ್ಣೂರು ಕೆರೆ ಕುರಿತು ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಪ್ರಾಚೀನ ಇತಿಹಾಸ–ಪುರಾತತ್ವ ಅಧ್ಯಯನ ವಿಭಾಗದ ಮುಖ್ಯಸ್ಥ ಶೆಲ್ವಪಿಳ್ಳೈ ಅಯ್ಯಂಗಾರ್ ಅವರಿಂದ ವಿಶೇಷ ಉಪನ್ಯಾಸವನ್ನು ಆಯೋಜಿಸಲಾಗಿದ್ದು, ಆಸಕ್ತರು ಪಾಲ್ಗೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

30.8.2023 ಬುಧವಾರ, ಮಳೆ ನಕ್ಷತ್ರ: ಮಖ 17.08.2023ರಿಂದ 30.08.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ,
ಶುಕ್ಲ ಪಕ್ಷ, ತಿಥಿ: ಚತುರ್ದಶಿ, ನಕ್ಷತ್ರ: ಧನಿಷ್ಠ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

■ **ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ, ಕೆ.ಆರ್. ವನಂ:** ಯಜುರ್ ಉಪಾಕರ್ಮ, ಯಜ್ಞೋಪವೀತ ಧಾರಣೆ, ಅಧ್ಯಯನ ಹೋಮ, ಸ್ಥಳ: ಶ್ರೀರಾಮ ಮಂದಿರ, ಕೃಷ್ಣಮೂರ್ತಿಪುರಂ, ಬೆಳಗ್ಗೆ 7.30ಕ್ಕೆ.

■ **ಮೈಸೂರು ಜಿಲ್ಲಾ ಶಾತ್ತಾದ ಶ್ರೀ ವೈಷ್ಣವ ಸಂಘ:** ಸಾಮೂಹಿಕ ಯಜುರ್ ಉಪಾಕರ್ಮ, ಗಾಯಿತ್ರಿ ಹೋಮ, ಸ್ಥಳ: ಶ್ರೀ ಮರುಳೇಶ್ವರ ದೇವಸ್ಥಾನ, ಕುವೆಂಪುನಗರ, ಬೆಳಗ್ಗೆ 10 ರಿಂದ.

■ **ಆರ್ಯ ಸಮಾಜ:** ಶ್ರಾವಣೀ ಉಪಾಕರ್ಮದ ಪರ್ವ ಆಚರಣೆ, ಸ್ಥಳ: ಮೈಸೂರು ಆರ್ಯ ಸಮಾಜ, ಕೊತ್ವಾಲ್ ರಾಮಯ್ಯ ಬೀದಿ, ದೇವರಾಜ ಮೊಹಲ್ಲಾ, ಬೆಳಗ್ಗೆ 10ಕ್ಕೆ.

■ **ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗ, ಪ್ರೊ.ಮುಜಾಫರ್ ಅಸ್ಸಾದಿ ಮತ್ತು ಪ್ರೊ.ಜಿ.ಟಿ.ರಾಮಚಂದ್ರಪ್ಪ ಅಭಿನಂದನಾ ಸಮಿತಿ:** ಪ್ರೊ.ಮುಜಾಫರ್ ಅಸ್ಸಾದಿ ಮತ್ತು ಪ್ರೊ.ಜಿ.ಟಿ. ರಾಮಚಂದ್ರಪ್ಪ ಅವರಿಗೆ ಸನ್ಮಾನ ಸಮಾರಂಭ ಮತ್ತು ಗ್ಲೋಬಲೈಸೇಷನ್, ಐಡೆಂಟಿಟಿ ಅಂಡ್ ಡೆಮಾಕ್ರೆಸಿ ಕುರಿತು ವಿಚಾರ ಸಂಕಿರಣ, ಉದ್ಘಾಟನೆ: ಮಾಜಿ ಸಚಿವ ಪ್ರೊ.ಬಿ.ಕೆ.ಚಂದ್ರಶೇಖರ್, ಸಮೃತಿ ಕೃತಿ ಬಿಡುಗಡೆ: ಸುಪ್ರೀಂಕೋರ್ಟ್ ಹಿರಿಯ ವಕೀಲ ಡಾ.ಆದಿತ್ಯಾ ಸೋಂದಿ, ಸ್ನೇಹಾದ್ರಿ ಕೃತಿ ಬಿಡುಗಡೆ: ಬರಹಗಾರ ಡಾ.ಬಂಜಗೆರೆ ಜಯಪ್ರಕಾಶ್, ಪ್ರಾಸ್ತಾವಿಕ ನುಡಿ: ಪ್ರಾಧ್ಯಾಪಕ ಪ್ರೊ.ಹೆಚ್.ಎಂ.ರಾಜಶೇಖರ್, ಮುಖ್ಯ ಅತಿಥಿಗಳು: ರಾಯಚೂರು ಯೂನಿವರ್ಸಿಟಿ ಕುಲಪತಿ ಪ್ರೊ.ಹರೀಶ್ ರಾಮಸ್ವಾಮಿ, ಉಪಸ್ಥಿತರು: ಪ್ರೊ. ಮುಜಾಫರ್ ಅಸ್ಸಾದಿ, ಪ್ರೊ. ಜಿ.ಟಿ.ರಾಮಚಂದ್ರಪ್ಪ, ಅಧ್ಯಕ್ಷತೆ: ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಕೃಷ್ಣ ಹೊಂಬಾಳ್, ಸ್ಥಳ: ಮಾನವಿಕ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀಚಾಮರಾಜೇಶ್ವರಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜನ್ಮೋತ್ಸವ, ಮಹಾ ರಥೋತ್ಸವ ಹಾಗೂ ಶ್ರಾವಣ ಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನ ಆವರಣ, ಡಿ. ಬನುಮಯ್ಯ ರಸ್ತೆ, ಕೆಆರ್ ಮೊಹಲ್ಲಾ, ಬೆಳಗ್ಗೆ

■ **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:** ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ವಿತರಣೆ ಕಾರ್ಯಕ್ರಮ, ಸ್ತ್ರೀ ಸ್ವಾವಲಂಬನೆಯತ್ತ ಒಂದು ದಿಟ್ಟ ಹೆಜ್ಜೆ, ಪ್ರತಿ ಮನೆ ಯಜಮಾನಿಗೆ ಪ್ರತಿ ತಿಂಗಳು ರೂ. 2000 ನೀಡುವ ಕಾರ್ಯಕ್ರಮ, ಉದ್ಘಾಟನೆ: ಎಐಸಿಸಿ ಅಧ್ಯಕ್ಷ ಡಾ.ಮಲ್ಲಿಕಾರ್ಜುನ ಖರ್ಗೆ, ಅಧ್ಯಕ್ಷತೆ: ಮುಖ್ಯಮಂತ್ರಿ ಸಿದ್ದರಾಮಯ್ಯ, ಘನ ಉಪಸ್ಥಿತಿ: ಲೋಕಸಭಾ ಸದಸ್ಯ ರಾಹುಲ್ ಗಾಂಧಿ, ಮುಖ್ಯ ಅತಿಥಿಗಳು: ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ, ಪಶು ಸಂಗೋಪನೆ ಸಚಿವ ಕೆ.ವೆಂಕಟೇಶ್, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಸಹಕಾರ ಸಚಿವ ಕೆ.ಎನ್.ರಾಜಣ್ಣ, ಸಣ್ಣ ನೀರಾವರಿ ಸಚಿವ ಎನ್.ಎಸ್.ಭೋಸರಾಜು, ಮೇಯರ್ ಶಿವಕುಮಾರ್, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸಪ್ರಸಾದ್, ಸುಮಲತಾ ಅಂಬರೀಷ್, ರಾಜ್ಯಸಭಾ ಸದಸ್ಯರಾದ ಕೆ.ಸಿ.ವೇಣುಗೋಪಾಲ, ರಣದೀಪ್ ಸುರ್ಜೆವಾಲ, ಸ್ಥಳ: ಮಹಾರಾಜ ಕಾಲೇಜು ಮೈದಾನ, ಬೆಳಗ್ಗೆ 11.30ಕ್ಕೆ.

■ **ಸಿಎಸ್‌ಐಆರ್–ಸಿಎಫ್‌ಟಿಆರ್‌ಐ ಎಸ್‌ಸಿ, ಎಸ್‌ಟಿ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್:** ಡಾ.ಬಿ.ಆರ್.ಅಂಬೇಡ್ಕರ್‌ರವರ 132ನೇ ಜಯಂತ್ಯುತ್ಸವ, ಉದ್ಘಾಟನೆ: ಉಚ್ಚ ನ್ಯಾಯಾಲಯ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ ದಾಸ್, ಅಧ್ಯಕ್ಷತೆ: ಸಿಎಸ್‌ಐಆರ್–ಸಿಎಫ್‌ಟಿಆರ್‌ಐ ನಿರ್ದೇಶಕ ಡಾ.ಶ್ರೀದೇವಿ ಅನ್ನಪೂರ್ಣಸಿಂಗ್, ಮುಖ್ಯ ಅತಿಥಿಗಳು: ರಂಗಾಯಣ ನಿವೃತ್ತ ನಿರ್ದೇಶಕ ಸಿ.ಬಸವಲಿಂಗಯ್ಯ, ಕನ್ನಡ ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮಾಜಿ ಸಚಿವರಾದ ಶ್ರೀಮತಿ ಬಿ.ಟಿ. ಲಲಿತಾನಾಯಕ್, ಸ್ಥಳ:ಐಎಫ್‌ಟಿಟಿಸಿ ಸಭಾಂಗಣ, ಸಿಎಫ್‌ಟಿಆರ್‌ಐ, ಮಧ್ಯಾಹ್ನ 3ಕ್ಕೆ.

■ **ಮಾನವ ಬಂಧುತ್ವ ವೇದಿಕೆ–ಕರ್ನಾಟಕ:** ಬಸವ ಪಂಚಮಿ ಪ್ರಯುಕ್ತ ಶಾಲಾ ಮಕ್ಕಳಿಗೆ ಹಾಲು, ಹಣ್ಣು ವಿತರಣೆ, ಸ್ಥಳ: ಕುವೆಂಪು ಶತಮಾನೋತ್ಸವ ಸರ್ಕಾರಿ ಪ್ರಾಥಮಿಕ ಶಾಲೆ, ಮೇಟಗಳ್ಳಿ, ಮಧ್ಯಾಹ್ನ 3ರಿಂದ.

■ **ನಂಜನಗೂಡು ಶ್ರೀರಾಘವೇಂದ್ರಸ್ವಾಮಿಗಳವರ ಮಠ :** ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 352ನೇ ಆರಾಧನಾ ಮಹೋತ್ಸವ, ಪೌರ್ಣಿಮೆ ಪ್ರಾರ್ಥನೋತ್ಸವ, ಬೆಳಗ್ಗೆ 6ಕ್ಕೆ ಯಜುರ್ವೇದ ನಿತ್ಯನೂತನ ಉಪಾಕರ್ಮ, ಬೆಳಗ್ಗೆ 10ಕ್ಕೆ ಸಾಮೂಹಿಕ ಸತ್ಯನಾರಾಯಣ ಪೂಜೆ, ಸಂಜೆ 6ಕ್ಕೆ ಪ್ರಾರ್ಥನೋತ್ಸವ, ಗೋಪೂಜೆ, ಧ್ವಜಾರೋಹಣ, ಧಾನ್ಯಪೂಜೆ, ಮಹಾಮಂಗಳಾರತಿ, ಸ್ವಸ್ತಿವಾಚನ, ಸ್ಥಳ: ಶ್ರೀರಾಘವೇಂದ್ರಸ್ವಾಮಿಗಳವರ ಮಠ, ನಾರಾಯಣಶಾಸ್ತ್ರಿ ರಸ್ತೆ.

■ **ದೀಕ್ಷಿತ್ ಆರೋಗ್ಯ ಧಾಮ :** ರಕ್ಷಾ ಬಂಧನ್ ಹುಣ್ಣಿಮೆಯ ವಿಶೇಷ ಮಾಸ ಕಾರ್ಯಕ್ರಮದ ಅಂಗವಾಗಿ ವಿದುಷಿ ಹೇಮಲತಾ ಕುಮಾರಸ್ವಾಮಿ ಅವರಿಂದ ಲಘು ಶಾಸ್ತ್ರೀಯ ಸಂಗೀತ, ವಿದ್ವಾನ್ ಶ್ರೀಕಾಂತ್–ಮೃದಂಗ, ವಿದ್ವಾನ್ ಕೇಶವ ದತ್ತ –ಪಿಟೀಲು ವಾದನ, ಡಾ.ಸಿ.ಎಸ್.ಅನಿಲ್‌ಕುಮಾರ್ ಅವರಿಂದ ಸ್ವಾಸ್ಥ್ಯ ರಕ್ಷಾ ಬಂಧನ ಕುರಿತು ಉಪನ್ಯಾಸ, ಸ್ಥಳ: ದೀಕ್ಷಿತ್ ಆರೋಗ್ಯಧಾಮ, ವಿಜಯನಗರ 3ನೇ ಹಂತ, ಸಂಜೆ 6ಕ್ಕೆ.

■ **ಶ್ರೀ ಸುತ್ತೂರು ಮಠ (ಮೈಸೂರು), ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಜೆಎಸ್‌ಎಸ್ ಮಹಾ ವಿದ್ಯಾಪೀಠ, ಪ್ರಕಟಣ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಅವರಿಂದ ಪ್ರವಚನ, ವಾಚನ–ಕಾರ್ಯಪಾಲಕ ಅಭಿಯಂತರರಾದ ವಿದ್ವಾನ್ ಕೃ.ರಾಮಚಂದ್ರ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ಕ್ಕೆ. ಸಾಮೂಹಿಕ ಪ್ರಾರ್ಥನೆ: ಸಂಜೆ 6 ಗಂಟೆಗೆ.

ಸರಗೂರಿನಲ್ಲಿಂದು

■ **ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ತಾಲೂಕು ಶರಣ ಸಾಹಿತ್ಯ ಪರಿಷತ್ತು, ಲಯನ್ಸ್ ಅಕಾಡೆಮಿ ಪ್ರೌಢಶಾಲೆ** : ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳ 108ನೇ ಜಯಂತಿ ಅಂಗವಾಗಿ ಸಂಸ್ಥಾಪಕರ ದಿನಾಚರಣೆ ಹಾಗೂ ದತ್ತಿ ಉಪನ್ಯಾಸ, ಸಾನ್ನಿಧ್ಯ : ಶ್ರೀ ಗುರುಮಲ್ಲೇಶ್ವರ ಪಟ್ಟದ ಮಠದ ಶ್ರೀ ಷಡಕ್ಷರ ಸ್ವಾಮೀಜಿ, ಅಧ್ಯಕ್ಷತೆ : ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ದಪ್ಪ, ಸಿದ್ದಲಿಂಗಸ್ವಾಮಿ ಅವರಿಂದ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳವರ ಜೀವನ ಸಂದೇಶ ಕುರಿತು ದತ್ತಿ ಉಪನ್ಯಾಸ, ಪ್ರಾಸ್ತಾವಿಕ ನುಡಿ : ಜಿಲ್ಲಾ ಶರಣ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಎಂ. ಚಂದ್ರಶೇಖರ್, ಸ್ಥಳ: ಲಯನ್ಸ್ ಅಕಾಡೆಮಿ ಪ್ರೌಢಶಾಲೆ, ಸರಗೂರು, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಜಿ.ಎಸ್.ಎಸ್.ಯೋಗದ ಮಾತು, ಪ್ರಸ್ತುತಿ–ಡಿ.ಶ್ರೀಹರಿ, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಟಿ.ವಿ.ವೆಂಕಟಾಚಲ ಶಾಸ್ತ್ರಿ, 7.15 ಭಾವಗೀತೆಗಳು–ಪುತ್ತೂರು ನರಸಿಂಹನಾಯಕ, 9.05 ವಸುದೈವ ಕುಟುಂಬಕಂ–ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 9.10 ವೃತ್ತಿಮಾರ್ಗದರ್ಶನ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಪ್ರೊ.ಶರಣಪ್ಪ ವೈಜನಾಥ ಹಲಸೆ ಅವರೊಂದಿಗೆ ಮಾತುಕತೆಯಲ್ಲಿ ಭಾಗವಹಿಸುವವರು ಬೇದ್ರೆ ಮಂಜುನಾಥ್, 9.30 ಚಿತ್ರಗೀತೆ, 10.00 ಹಿಂದೂಸ್ಥಾನಿ ಸಂಗೀತ–ಪಂಡಿತ್ ಎಂ.ವೆಂಕಟೇಶ್‌ಕುಮಾರ್–ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ–ಚಾಮಮ್ಮ ಮತ್ತು ಸಂಗಡಿಗರು, 1.20 ಭಾವಗೀತೆಗಳು–ಹೆಚ್.ಕೆ. ನಾರಾಯಣ, ಎಂ.ಟಿ. ಶೆಲ್ವನಾರಾಯಣ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ–ತಾಳ, ಲಯ ರಸಾಸ್ವಾದ. ವಿಷಯ– ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿಗಳಲ್ಲಿ ಮೃದಂಗದ ಪಾತ್ರವನ್ನು ತಿಳಿಸಿಕೊಡುತ್ತಾರೆ ಸಂಗೀತ ವಿದ್ವಾಂಸರಾದ ಡಾ.ಸುಕನ್ಯಾ ಪ್ರಭಾಕರ್ ಪರಿಕಲ್ಪನೆ ಹಾಗೂ ಪ್ರಸ್ತುತಿ– ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀಚೇತನ–ಭಾಗವಹಿಸುವವರು ಲೇಖಕಿ ಉಷಾನರಸಿಂಹನ್, ಪ್ರಸ್ತುತಿ– ಅಬ್ದುಲ್ ರಶೀದ್, 4.45 ಹಿಂದಿ ಪಾಠ–ವಿದ್ಯಾಕುಮಾರ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಸಾವಯವ ಸಂಪದ, ಸಾವಯವ ಕೃಷಿಯಲ್ಲಿ ಪೋಷಕದ ನಿರ್ವಹಣೆ ಕುರಿತು ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸುವವರು, ಜಿ.ಹೆಚ್.ಯೋಗೇಶ್ ಹಾಗೂ ಜೆ.ಹೆಚ್.ವಿ.ಪ್ರಕಾಶ್, ಪ್ರಸ್ತುತಿ–ಎನ್.ಕೇಶವಮೂರ್ತಿ, 10.00 ಜನಪದ ಸಂಗೀತ–ಮೈಸೂರು ಜಿ. ಗುರುರಾಜ್ ಮತ್ತು ಸಂಗಡಿಗರು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 30 ಬುಧವಾರ 2023

ಸಂಪುಟ: 44 | ಸಂಚಿಕೆ: 135 | ಪುಟಗಳು: 12

₹ 4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಇಂದಿನಿಂದ ಮನೆ ಯಜಮಾನಿಗೆ ₹ 2000

ಮೈಸೂರಲ್ಲಿ 'ಗೃಹಲಕ್ಷ್ಮಿ' ಯೋಜನೆಗೆ ಚಾಲನೆ

● ಮಹಾರಾಜ ಕಾಲೇಜು ಮೈದಾನದಲ್ಲಿ ಬೃಹತ್ ಕಾರ್ಯಕ್ರಮ ಆಯೋಜನೆ ● ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರು, ಶಾಸಕರು ಇತರೆ ಗಣ್ಯರ ಉಪಸ್ಥಿತಿ ● ಲಕ್ಷಾಂತರ ಫಲಾನುಭವಿಗಳ ಸಮ್ಮುಖದಲ್ಲಿ ಐತಿಹಾಸಿಕ ಯೋಜನೆ ಪ್ರಾರಂಭ

1.11 ಕೋಟಿ ಫಲಾನುಭವಿಗಳು




"ಈಗಾಗಲೇ ಗೃಹಲಕ್ಷ್ಮಿ ಯೋಜನೆಯಡಿ ರಾಜ್ಯಾದ್ಯಂತ 1.11 ಕೋಟಿ ಫಲಾನುಭವಿಗಳು ಹೆಸರು ನೋಂದಣಿ ಮಾಡಿದ್ದಾರೆ. ಇವರ ಬ್ಯಾಂಕ್ ಖಾತೆಗೆ ಬುಧವಾರ ಯೋಜನೆಗೆ ಚಾಲನೆ ನೀಡುತ್ತಿದ್ದಂತೆ 2000ರೂ. ಜಮಾ ಆಗಲಿದೆ.



ಮೈಸೂರು, ಆ. 29(ಆರ್‌ಕೆ)– ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾದ ಮನೆಯೊಡತಿಗೆ 2000 ರೂ. ನಗದು ನೀಡುವ ಮಹತ್ವಾಕಾಂಕ್ಷೆಯ 'ಗೃಹಲಕ್ಷ್ಮಿ' ಯೋಜನೆಗೆ ಬುಧವಾರ ಮೈಸೂರಿನಲ್ಲಿ ಚಾಲನೆ ನೀಡಲಾಗುವುದು.

ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯಲಿರುವ ಬೃಹತ್ ಸಮಾರಂಭದಲ್ಲಿ ಮಧ್ಯಾಹ್ನ 11.30 ಗಂಟೆಗೆ ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ರೇಷ್ಮೆ ಸಚಿವ ಕೆ.ವೆಂಕಟೇಶ್, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ● 10ನೇ ಪುಟಕ್ಕೆ

ಲೋಕಸಭಾ ಚುನಾವಣೆಯಲ್ಲಿ ಮಾಜಿ ಪ್ರಧಾನಿ ದೇವೇಗೌಡರು ಹಾಸನ ಇಲ್ಲವೇ ಮಂಡ್ಯದಿಂದ ಸ್ಪರ್ಧೆ



ಬೆಂಗಳೂರು, ಆ.29(ಕೆಎಂಶಿ)– ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು 2024ರಲ್ಲಿ ನಡೆಯುವ ಲೋಕಸಭಾ ಚುನಾವಣೆಯಲ್ಲೂ ಕಣಕ್ಕಿಳಿಯಲಿದ್ದಾರೆ. ವಯೋಸಹಜ ಆರೋಗ್ಯ ಸಮಸ್ಯೆ ಇದ್ದರೂ ಪಕ್ಷ ಸಂಘಟನೆ ದೃಷ್ಟಿಯಿಂದ 91ನೇ ವಯಸ್ಸಿನ ಗೌಡರು ಮಂಡ್ಯ ಇಲ್ಲವೇ ಹಾಸನ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಯುವ ಸಾಧ್ಯತೆ ಹೆಚ್ಚಿದೆ. ಚುನಾವಣಾ ಕಣಕ್ಕಿಳಿಯಲು ಅವರಿಗೆ ಆಸಕ್ತಿ ಇಲ್ಲದಿದ್ದರೂ ಪುತ್ರ ಹೆಚ್.ಡಿ.ರೇವಣ್ಣ ಅವರು, ಗೌಡರನ್ನು ಕಣಕ್ಕಿಳಿಸಿ ಸಂಸತ್ತಿಗೆ ಕಳುಹಿಸಬೇಕು ಎಂಬ ಪಣ ತೊಟ್ಟಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ತುಮಕೂರಿನಿಂದ ಸ್ಪರ್ಧಿಸಿದ್ದ ಗೌಡರು, ಅಲ್ಪಮತಗಳ ಅಂತರದಿಂದ ● 9ನೇ ಪುಟಕ್ಕೆ



ಮೈಸೂರು ದಸರಾ ಮಹೋತ್ಸವ–2023

ಈ ಬಾರಿ ಸಂಗೀತ ನಿರ್ದೇಶಕ ಹಂಸಲೇಖರಿಂದ ಉದ್ಘಾಟನೆ

ಚಾಮುಂಡಿಬೆಟ್ಟದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ

● ಅಕ್ಟೋಬರ್ 15ರಂದು ದಸರಾ ಉತ್ಸವಕ್ಕೆ ಚಾಲನೆ ● ಒಂದೂವರೆ ತಿಂಗಳ ಮೊದಲೇ ದಸರಾ ಉದ್ಘಾಟಕರ ಘೋಷಣೆ ● ಹೊಸ ಸಂಪ್ರದಾಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ನಾಂದಿ



ಮೈಸೂರು, ಆ.29(ಬಿಎಲ್‌ಯು)– ಈ ಬಾರಿಯ ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವವನ್ನು ಖ್ಯಾತ ಚಲನಚಿತ್ರ ಸಂಗೀತ ನಿರ್ದೇಶಕ ಹಂಸಲೇಖ ಉದ್ಘಾಟಿಸಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಚಾಮುಂಡಿಬೆಟ್ಟದಲ್ಲಿ ಮಂಗಳವಾರ ನಾಡದೇವತೆ ತಾಯಿ ಚಾಮುಂಡೇಶ್ವರಿ ದರ್ಶನ ಪಡೆದ ನಂತರ ಪತ್ರಕರ್ತರ ಜೊತೆ ಮಾತನಾಡಿದ ಅವರು, ಅಕ್ಟೋಬರ್ 15 ರಿಂದ ಆರಂಭವಾಗುವ ವಿಶ್ವ ಪ್ರಸಿದ್ಧ ಮೈಸೂರು ದಸರಾ ಮಹೋತ್ಸವವನ್ನು ಹಂಸಲೇಖ ಉದ್ಘಾಟಿಸಲಿದ್ದಾರೆ ಎಂದು ಪ್ರಕಟಿಸಿದರು. ಸಾಮಾನ್ಯವಾಗಿ ಪ್ರತಿ ವರ್ಷ ದಸರಾ ಉದ್ಘಾಟನೆಗೆ ಕೇವಲ ಎರಡು ಮೂರು ದಿನ ಇರುವಾಗ ಉದ್ಘಾಟಕರ ಹೆಸರನ್ನು ಮುಖ್ಯಮಂತ್ರಿಗಳು ಬೆಂಗಳೂರಿನಲ್ಲಿ ಘೋಷಣೆ ಮಾಡುತ್ತಿದ್ದರು. ಈ ಪರಿಪಾಠ ಹಲವು ವರ್ಷಗಳಿಂದ ನಡೆದುಕೊಂಡು ಬಂದಿತ್ತು. ಆದರೆ ಇದೇ ಮೊದಲ ಬಾರಿ ದಸರಾ ಆರಂಭಕ್ಕೆ ಇನ್ನು ಒಂದೂವರೆ ತಿಂಗಳು ಇರುವಾಗ, ಅದೂ ದಸರಾ ಗಜಪಡೆ ಮೈಸೂರಿಗೆ ಆಗಮಿಸುವ ಮೊದಲೇ ಉದ್ಘಾಟಕರ ಹೆಸರನ್ನು ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಈ ಮೂಲಕ ಹೊಸ ಸಂಪ್ರದಾಯಕ್ಕೆ ಸಿದ್ದರಾಮಯ್ಯ ನಾಂದಿಯಾಡಿದ್ದಾರೆ. ಎರಡನೇ ಬಾರಿಯ ಸಿದ್ದರಾಮಯ್ಯ ಅವರ ಅಧಿಕಾರಾವಧಿಯ ಮೊದಲ ದಸರಾವನ್ನು ಯಾರು ಉದ್ಘಾಟನೆ ಮಾಡುತ್ತಾರೆ ಎಂಬ ಕುತೂಹಲಕ್ಕೆ ಈ ಮೂಲಕ ತೆರೆ ಬಿದ್ದಿದೆ. ಮೈಸೂರು ದಸರಾ ಮಹೋತ್ಸವದ ಮೊದಲ ಕಾರ್ಯಕ್ರಮವಾದ ಗಜಪಯಣಕ್ಕೆ ಸೆಪ್ಟೆಂಬರ್ 1ರಂದು ಮೈಸೂರು ಜಿಲ್ಲೆ ಹುಣಸೂರು ತಾಲೂಕಿನ ನಾಗರಹೊಳೆ ಹೆಬ್ಬಾಗಿಲು ವೀರನಹೊಸಳ್ಳಿಯಲ್ಲಿ ವಿಧ್ಯುಕ್ತ ಚಾಲನೆ ನೀಡಲಾಗುವುದು. ದಸರಾ ಉದ್ಘಾಟಕರ ಹೆಸರನ್ನು ಈಗ ಘೋಷಣೆ ಮಾಡಿರುವ ಹಿನ್ನೆಲೆಯಲ್ಲಿ ದಸರಾ ಸಿದ್ಧತಾ ಪ್ರಕ್ರಿಯೆಗಳು ಮತ್ತಷ್ಟು ಚುರುಕಾಗಲಿದೆ.

ಕಲಾಪ್ರತಿನಿಧಿಯಾಗಿ ದಸರಾ ಉದ್ಘಾಟನೆ ಮಾಡ್ತೇನೆ...

ಮೈಸೂರು: ನಾನು ಕಲಾ ಪ್ರತಿನಿಧಿಯಾಗಿದ್ದು, ಕರ್ನಾಟಕ ರಾಜ್ಯದ ಎಲ್ಲರ ಪರವಾಗಿ ಚಾಮುಂಡಿಬೆಟ್ಟದಲ್ಲಿ ಜ್ಯೋತಿ ಬೆಳಗಿಸಿ ದಸರಾ ಉದ್ಘಾಟನೆ ಮಾಡುತ್ತೇನೆ. ಈ ಸಂದರ್ಭದಲ್ಲಿ ದಸರಾ ಉತ್ಸವಕ್ಕಾಗಿ ವಿಶೇಷ ಗೀತೆಯೊಂದನ್ನು ರಚಿಸುವ ಉತ್ಸಾಹ ನನ್ನಲ್ಲಿದೆ ಎಂದು ಚಲನಚಿತ್ರ ಸಂಗೀತ ನಿರ್ದೇಶಕ ಹಂಸಲೇಖ ತಿಳಿಸಿದ್ದಾರೆ. ಈ ಬಾರಿಯ ದಸರಾ ಉದ್ಘಾಟನೆಗೆ ಸರ್ಕಾರ ತಮ್ಮನ್ನು ಆಯ್ಕೆ ಮಾಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಮೈಸೂರು ದಸರಾ ಮಹೋತ್ಸವ ಉದ್ಘಾಟನೆ ಮಾಡಲು ನಿಮ್ಮನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ನನಗೆ ದೂರವಾಣಿ ಮೂಲಕ ವಿಷಯ ತಿಳಿಸಿದರು. ಸ್ವತಃ ಮುಖ್ಯಮಂತ್ರಿಗಳೇ ಹೇಳಿದ ಮೇಲೆ ನಾನು ದಸರಾ ಉದ್ಘಾಟನೆ ಮಾಡಲು ಒಪ್ಪಿಕೊಂಡೆ ಎಂದು ಹಂಸಲೇಖ ತಿಳಿಸಿದರು.

ದಸರಾ ವೈಭವ ಮೆಲುಕು ಹಾಕಿದ ಹಂಸಲೇಖ: ಮಹಾರಾಜರ ಕಾಲದ ಮೈಸೂರು ದಸರಾ ● 9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ರಮೇಶ್ : ನನಗೆ ಮರೆವು ಹೆಚ್ಚು ಅಂತ ನೀವು ಹೇಳ್ತಿದ್ರಲ್ಲ. ನಿಮ್ಮ ಮನೆಯ ಸಮಾರಂಭಕ್ಕೆ ಸರಿಯಾದ ಟೈಮ್‌ಗೆ ಬಂದಿದ್ದೀನಿ ನೋಡಿ...

ಗಣೇಶ್ : ಅಯ್ಯೋ, ನಮ್ಮನೆ ಸಮಾರಂಭ ನಿನ್ನೆಯೇ ಮುಗಿದು ಹೋಯ್ತಲ್ಲಾ!

ಮೈಸೂರು ಮಿತ್ರ

ಬುಧವಾರ, 30 ಆಗಸ್ಟ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಪ್ರಪಂಚದಲ್ಲಿ ಬಲಶಾಲಿಗಳಾಗುವುದು ಮಹತ್ವದ ವಿಷಯವಲ್ಲ. ಆ ಬಲವನ್ನು ಒಳ್ಳೆಯದಕ್ಕೆ ಉಪಯೋಗಿಸುವುದು ಮಹತ್ವದ್ದು – ಬೀಚರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತೂಗಿ ಮಾತನಾಡು, ಬಾಗಿ ವಂದನೆ ಮಾಡು

ನಿಮ್ಮ ಪತ್ರಗಳು

ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನಲ್ಲಿ ಸಮಸ್ಯೆಗಳ ಸುರಿಮಳೆ !

ಮಾನ್ಯರೆ,



ಮೈಸೂರಿನಲ್ಲಿ ಕಲೆ ಮತ್ತು ಸಂಸ್ಕೃತಿಯನ್ನು ಮಕ್ಕಳಿಗೆ ಕಲಿಸಲೆಂದೇ ಐದು ವಿಭಾಗಗಳಲ್ಲಿ ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಹಿಂಭಾಗ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಕನ್ನಡ, ಸಂಸ್ಕೃತಿ ಇಲಾಖೆಯಡಿ ಸ್ಥಾಪಿತವಾಗಿ ಪದವಿ ಹಾಗೂ ಸ್ನಾತಕೋತ್ತರ ಪದವಿಯವರೆಗೂ ಮಕ್ಕಳನ್ನು ತರಬೇತಿಗೊಳಿಸಿ ಸಮಾಜಕ್ಕೆ ಕೊಡುಗೆಯಾಗಿ ನೀಡುತ್ತಾ ಬಂದಿದೆ. ಕಳೆದ ವಾರ ಮಕ್ಕಳು ತಯಾರಿಸಿದ ಚಿತ್ರಕಲೆ, ಶಿಲ್ಪಕಲೆಗಳ ಪ್ರದರ್ಶನವನ್ನು ಸಾರ್ವಜನಿಕರಿಗಾಗಿ ಕಾಲೇಜಿನ ಸುಸಜ್ಜಿತ ಕಟ್ಟಡದಲ್ಲಿ ಏರ್ಪಡಿಸಲಾಗಿತ್ತು. ಪ್ರದರ್ಶನಗಳು ಇರುವಾಗಲೆಲ್ಲಾ ನಾನು ತಪ್ಪದೇ ಭೇಟಿ ನೀಡುತ್ತಿರುತ್ತೇನೆ. ಪ್ರದರ್ಶನಕ್ಕಿಟ್ಟ ಅಷ್ಟೂ ಸೃಜನಶೀಲ ಹಾಗೂ ಕಲಾತ್ಮಕವಾದ ಪೇಂಟಿಂಗ್ಸ್, ಶಿಲಾಮೂರ್ತಿಗಳು, ಕತ್ತಲು ಬೆಳಕಿನ ದೃಶ್ಯಗಳು ನಿಜಕ್ಕೂ ನೋಡುಗರು ನಿಬ್ಬೆರಗಾಗುವಂತೆ ಇದ್ದವು. ಆದರೆ ಪ್ರಚಾರದ ಕೊರತೆಯಿಂದ ಕೇವಲ ಹತ್ತಾರು ಜನರಷ್ಟೇ ಇದ್ದರು. ಮಕ್ಕಳು ತಯಾರಿಸಿದ ಕಲೆಗಳು ರವಿವರ್ಮನ ಚಿತ್ರಗಳಿಗೆ ಸಾಟಿಯಾಗುವಂತಿದ್ದವು. ನೈಪುಣ್ಯತೆಗೆ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಅಭಿನಂದನೆಗಳು.

ಪ್ರತೀ ಚಿತ್ರಗಳನ್ನು ವೀಕ್ಷಿಸುವಾಗ ವಿದ್ಯಾರ್ಥಿಗಳಿಂದ ವಿವರಣೆ ಪಡೆಯುತ್ತಿದ್ದೆ. ಆ ಸಂದರ್ಭದಲ್ಲಿ ಮಕ್ಕಳು ಕಾಲೇಜಿನ ಸಮಸ್ಯೆಗಳನ್ನು ಎಳೆ ಎಳೆಯಾಗಿ ಬಿಚ್ಚಿಟ್ಟರು. ಚಿತ್ರಕಲಾ ಪ್ರದರ್ಶನ ನೋಡಲು ಸುಂದರ ಕಣ್ಮನಗಳಿಗೆ ಹಬ್ಬ. ಆದರೆ, ನುಣ್ಣಗಿನ ಬೆಟ್ಟದ ಸಮೀಪ ಹೋದಾಗಲೇ ಗೊತ್ತಾಗಿದ್ದು ಮುಳ್ಳು–ಕಲ್ಲುಗಳಿಂದ ಕೂಡಿದೆಯೆಂದು. ಈ ಶಾಲೆಗೆ ಬರುವ ಮುಖ್ಯಸ್ಥರೆಲ್ಲರೂ ಕಲಾ ಜ್ಞಾನವಿಲ್ಲದ, ಆಡಳಿತ ಸೇವೆಯ ಅಧಿಕಾರಿಗಳು, ಬರುವವರಲ್ಲಿ ಆಸಕ್ತಿ ಇಲ್ಲದವರು ಹಾಗೂ ಹೆಚ್ಚುವರಿ ಹುದ್ದೆಯಾಗಿ ನಿಯೋಜಿಸಲ್ಪಟ್ಟವರು. ಮಕ್ಕಳಿಗೆ ಸಕಾಲಕ್ಕೆ ಸ್ಟೈಫಂಡ್ ಕೊಡುತ್ತಿಲ್ಲ. ಚಿತ್ರಕಲೆಗೆ ಅವಶ್ಯವಿರುವ ಸಾಮಗ್ರಿಗಳ ಸರಬರಾಜಾಗುತ್ತಿಲ್ಲ. ಕ್ಯಾಂಪಸ್ ಆವರಣದಲ್ಲಿ ನಿರ್ವಹಣೆ ಇಲ್ಲ. ಸಮಸ್ಯೆಗಳನ್ನು ಪರಿಹರಿಸುವಂತೆ ವಿದ್ಯಾರ್ಥಿಗಳು ಹಲವಾರು ಬಾರಿ ಮನವಿ ಮಾಡಿಕೊಂಡರೂ ಪ್ರಯೋಜನವಿಲ್ಲ. ರಾಜ್ಯದ ಎಲ್ಲಾ ಮೂಲೆಗಳಿಂದ ಬಂದಿರುವ ನೂರೈವತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಲ್ಲಿ ಅಭ್ಯಾಸ ಮಾಡುತ್ತಿದ್ದಾರೆ.

ಸುಂದರ ಕಾಲೇಜು ಕ್ಯಾಂಪಸ್ ಹೊಂದಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜನ್ನು ಕನ್ನಡ, ಸಂಸ್ಕೃತಿ ಇಲಾಖೆಯಿಂದ ಬೇರ್ಪಡಿಸಿ ಸ್ವಾಯತ್ತ ಕಾಲೇಜನ್ನಾಗಿ ಪರಿವರ್ತಿಸಿ ಇದಕ್ಕಾಗಿ ಸಾಕಷ್ಟು ಆರ್ಥಿಕ ಬಲವನ್ನು ನೀಡಿ ಕಲೆಯ ವಿಷಯದಲ್ಲಿ ಅನುಭವ ಹಾಗೂ ಆಸಕ್ತಿ ಇರುವವರನ್ನು ಕುಲಪತಿಗಳನ್ನಾಗಿ ನೇಮಿಸುವುದು ಸೂಕ್ತ. ಇದರಿಂದ ಸಾಂಸ್ಕೃತಿಕ ನಗರ ಮೈಸೂರಿಗೂ ಹೆಮ್ಮೆಯ ಗರಿ ಮೂಡುವುದು. ಮೈಸೂರಿನ ಈ ಕಾಲೇಜಿನಲ್ಲಿ ಕಲಿತ ಮಕ್ಕಳು ವಿಶ್ವ ಮಟ್ಟದಲ್ಲಿ ಹೆಸರು ಮಾಡಿ ಸಾಂಸ್ಕೃತಿಕ ನಗರದ ಹೆಸರು ಅಜರಾಮರವಾಗಲಿ.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

ಮೈಸೂರು ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಟಿಕೆಟ್ ಕೌಂಟರ್‌ಗಳು ಹೆಚ್ಚಾಗಲಿ



ಮಾನ್ಯರೆ,

ಮೈಸೂರಿನಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಪ್ರತಿನಿತ್ಯ ಸಾವಿರಾರು ಜನರು ಮೈಸೂರಿನಿಂದ ಬೆಂಗಳೂರಿಗೆ ತಡೆ ರಹಿತ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದಾರೆ. ಇರುವ ಒಂದೇ ಒಂದು ಕೌಂಟರ್‌ನಲ್ಲಿ ಟಿಕೆಟ್ ತೆಗೆದುಕೊಳ್ಳುವುದಕ್ಕೆ ಸಾಲಾಗಿ ನಿಲ್ಲಬೇಕಾದ ಪರಿಸ್ಥಿತಿ ಇದೆ.ಈ ಸಾಲಿನಲ್ಲಿ ಮಹಿಳೆಯರು, ಹಿರಿಯ ನಾಗರಿಕರು, ವಯಸ್ಕರು ಮತ್ತು ಇತರರು ನಿಲ್ಲುವುದರಿಂದ ಹಿರಿಯರಿಗೆ ಮತ್ತು ಮಹಿಳೆಯರಿಗೆ ತೊಂದರೆಯಾಗುತ್ತಿದೆ. ಪುರುಷರು ಮಹಿಳೆಯರ ಮೈಮೇಲೆ ಬೀಳುವುದು, ಮಹಿಳೆಯರು ಪುರುಷರ ಮೇಲೆ ಬೀಳುವಂತಾಗಿದೆ. ಇದು ಹೀಗೆ ಮುಂದುವರೆದರೆ ಮುಂದಿನ ದಿನಗಳಲ್ಲಿ ಬಸ್ ನಿಲ್ದಾಣದಲ್ಲಿ ಟಿಕೆಟ್ ಪಡೆಯಲು ಮಹಿಳೆಯರು ಹಾಗೂ ಪುರುಷರ ನಡುವೆ ಜಟಾಪಟಿಗಳು ನಡೆಯುವ ಸಂಭವ ಇರುತ್ತದೆ. ಆದ್ದರಿಂದ ಇದಕ್ಕೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕೇಂದ್ರ ಬಸ್ ನಿಲ್ದಾಣದಲ್ಲಿ ಮೈಸೂರಿನಿಂದ ಬೆಂಗಳೂರಿಗೆ ತೆರಳುವ ತಡೆರಹಿತ ಬಸ್ಸಿಗಾಗಿ ಒಂದೇ ಕೌಂಟರ್‌ನಲ್ಲಿ ಟಿಕೆಟ್ ನೀಡುವ ಬದಲು ಹೆಚ್ಚಿನ ಟಿಕೆಟ್ ಕೌಂಟರ್‌ಗಳನ್ನು ತೆರೆದು ಮಹಿಳೆಯರಿಗೆ ಮತ್ತು ಪುರುಷರಿಗೆ ಹಾಗೂ ಹಿರಿಯ ನಾಗರಿಕರಿಗೆ ಮತ್ತು ಇತರರಿಗೂ ಪ್ರತ್ಯೇಕವಾಗಿ ಸರದಿ ಸಾಲಿನಲ್ಲಿ ಬಂದು ಬಸ್ ಟಿಕೆಟ್ ಅನ್ನು ಪಡೆಯಲು ವ್ಯವಸ್ಥೆ ಮಾಡಿಕೊಡುವ ಮೂಲಕ ತೊಂದರೆ ತಪ್ಪಿಸುವಂತೆ ಕೋರುತ್ತೇವೆ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು.

ರೈತರ ಸಂಕಷ್ಟಕ್ಕೆ ಪರಿಹಾರ

ಮಾನ್ಯರೆ,

ಈ ವರ್ಷ ಮುಂಗಾರು ಮಳೆ ಕೈ ಕೊಟ್ಟಿರುವುದರಿಂದ ಕರ್ನಾಟಕದ ಜಲಾಶಯಗಳಲ್ಲಿ ನೀರಿಲ್ಲ. ಪರಿಸ್ಥಿತಿ ಹೀಗಿದ್ದರೂ ರಾಜ್ಯದ ಕೆರೆಕಟ್ಟೆಗಳಿಗೆ ನೀರು ತುಂಬಿಸಿ ರಾಜ್ಯದ ರೈತರ ಬೆಳೆ ಬೆಳೆಯಲು ನೀರು ಬಿಡದೆ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರು ಹರಿಸುತ್ತಿದೆ. ಕಾವೇರಿ ನೀರು ನಿರ್ವಹಣಾ ಮಂಡಳಿ ಪ್ರತಿ ಬಾರಿಯೂ ರಾಜ್ಯಕ್ಕೆ ಅನ್ಯಾಯ ಮಾಡುತ್ತಿದೆ. ತಮಿಳುನಾಡಿಗೆ ಬಿಡುತ್ತಿರುವ ನೀರನ್ನು ತಕ್ಷಣವೇ ನಿಲ್ಲಿಸಿ, ಕುಡಿಯಲು ಹಾಗೂ ದನ ಕರುಗಳಿಗೆ, ರೈತರ ಬೆಳೆಗಳಿಗೂ ನೀರು ಉಳಿಸಬೇಕಾಗಿದೆ. ಇಷ್ಟೆಲ್ಲಾ ಗೊತ್ತಿದ್ದರೂ ಸಹ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರು ಬಿಡುತ್ತಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ನೀರನ್ನು ನಂಬಿ ಬಿತ್ತನೆ ಮಾಡಿರುವ ರೈತರ ಬೆಳೆಗಳಿಗೆ ನೀರು ಹರಿಸಬೇಕಿದೆ.

–ಎನ್.ಪಿ.ಆಶಾ, ಮಾನಸಗಂಗೋತ್ರಿ ಮೈಸೂರು

ಹಂಸಲೇಖರಿಂದ ಮೈಸೂರು ದಸರಾ ಉದ್ಘಾಟನೆ

ಸಂಗೀತ ಸಾಧಕನಿಗೆ ಸಂದ ಗೌರವ



ಇತ್ತೀಚಿನ ವರ್ಷಗಳಲ್ಲಿ, ಹಂಸಲೇಖ ಅವರು ಕಿರುತೆರೆಯ ಕೆಲವು ರಿಯಾಲಿಟಿ ಪ್ರದರ್ಶನಗಳಲ್ಲಿ ಸಹ ಮುಖ್ಯ ತೀರ್ಪುಗಾರರಾಗಿ (ಮಹಾಗುರು) ಕಾಣಿಸಿಕೊಳ್ಳುತ್ತಿದ್ದಾರೆ. 'ಆಕಸ್ಮಿಕ' ಚಿತ್ರಕ್ಕಾಗಿ ಅವರು ರಚಿಸಿರುವ "ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು" ಗೀತೆ ಅಪಾರ ಜನಮನ್ನಣೆ ಗಳಿಸಿದೆ. ದೇಸಿ ಸಂಸ್ಕೃತಿಯನ್ನು ನಿರಂತರವಾಗಿ ಬೆಂಬಲಿಸಿಕೊಂಡು ಬಂದಿರುವ ಹಂಸಲೇಖ, ಬೆಂಗಳೂರಿನ ಸಮೀಪ ಸಂಗೀತ ಕಾಲೇಜನ್ನು ಸ್ಥಾಪಿಸಿ ಮುನ್ನಡೆಸುತ್ತಿದ್ದಾರೆ. ನಾಡು ನುಡಿಯ ಬಗ್ಗೆ ಅಪಾರವಾದ ಕಾಳಜಿ ಹೊಂದಿರುವ ಹಂಸಲೇಖ, ಪಿಯಾನೋ, ಗಿಟಾರ್ ಸೇರಿದಂತೆ ಹಲವಾರು ವಾದ್ಯಗಳನ್ನು ನುಡಿಸುವುದರಲ್ಲಿ ಪರಿಣತರು.

ಹಿರಿಯ ಸಂಗೀತ ನಿರ್ದೇಶಕ ಮತ್ತು ಗೀತ ರಚನಾಕಾರ ಶ್ರೀ ಹಂಸಲೇಖ ಅಲಿಯಾಸ್ ಗಂಗರಾಜ್ ಅವರನ್ನು ಈ ಬಾರಿಯ ದಸರಾ ಉದ್ಘಾಟನೆಗೆ ಆಯ್ಕೆ ಮಾಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ಪ್ರಕಟಿಸಿದ್ದಾರೆ.

ಹಂಸಲೇಖ ಎಂದ ತಕ್ಷಣ ಅವರ ಹಲವಾರು ಸುಮಧುರ ಹಾಡುಗಳು ನಮ್ಮ ಸ್ಮೃತಿ ಪಟಲದಲ್ಲಿ ಹಾದು ಹೋಗುತ್ತವೆ. ಅವುಗಳ ಪೈಕಿ ಕೆಲವನ್ನಾದರೂ ಇಲ್ಲಿ ಉಲ್ಲೇಖಿಸಬಹುದಾದರೆ, "ಈ ನಿಂಬೆ ಹಣ್ಣಿನಂತಹ ಹುಡುಗಿ ಬಂದ್ಲು ನೋಡು" (ಪ್ರೇಮ ಲೋಕ), "ಲೋಕವೇ ಹೇಳಿದ ಮಾತಿದು (ರಣಧೀರ), "ಈ ಭೂಮಿ ಬಣ್ಣದ ಬುಗುರಿ (ಮಹಾಕ್ಷತ್ರಿಯ) ಬಾರೆ ಸಂತೆಗೆ ಹೋಗೋಣ ಬಾ, (ನೀನು ನಕ್ಕರೆ ಹಾಲು ಸಕ್ಕರೆ) ಮಹಾಪ್ರಾಣ ದೀಪಮ್ ಶಿವಂ (ಶ್ರೀ ಮಂಜುನಾಥ) ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು (ಆಕಸ್ಮಿಕ) ಕೂರಕ್ಕ ಕುಕ್ಕರಹಳ್ಳಿ ಕೆರೆ (ನೆನಪಿರಲಿ), ಚೆಂದಕ್ಕಿಂತ ಚೆಂದ ನಿನ್ನ ಅಂದವು (ಸ್ಪರ್ಶ), ಹಳ್ಳಿ ಮೇಷ್ಟ್ರೇ ಹಳ್ಳಿ ಮೇಷ್ಟ್ರೇ ಪಾಠ ಮಾಡಿ ಬನ್ನಿ (ಹಳ್ಳಿಮೇಷ್ಟ್ರು), ಏಳು ಶಿವ ಏಳು ಶಿವ (ಹಾಲುಂಡ ತವರು), ಜಗವೇ ಒಂದು ರಣರಂಗ (ರಣರಂಗ), ನಮ್ಮೂರ ಯುವ ರಾಣಿ ಕಲ್ಯಾಣವಂತೆ (ರಾಮಾಚಾರಿ) ಹೀಗೆ ನೂರಾರು ಸುಮಧುರ ಗೀತೆಗಳು ಹಂಸಲೇಖರ ಪ್ರತಿಭೆಗೆ ಸಾಕ್ಷಿಯಾಗಿದೆ.

ನಾಡು ಕಂಡ ಓರ್ವ ಶ್ರೇಷ್ಠ ಸಂಗೀತ ನಿರ್ದೇಶಕರಾದ ಹಂಸಲೇಖ, ಈಶ್ವರಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ತಯಾರಾದ "ಪ್ರೇಮಲೋಕ" ಚಿತ್ರದ ಹಾಡುಗಳ ಮೂಲಕ ಮನೆ ಮಾತಾದರು. ಅದಕ್ಕಿಂತ ಮುಂಚೆ ಕಲಾಕೇಸರಿ ಉದಯಕುಮಾರ್ ನಾಯಕತ್ವದ "ತ್ರಿವೇಣಿ" ಚಿತ್ರಕ್ಕಾಗಿ ದಿವಂಗತ ಉಪೇಂದ್ರ ಕುಮಾರ್ ಸಂಗೀತ ನಿರ್ದೇಶನದಲ್ಲಿ 'ನೀನಾ ಭಗವಂತ' ಎಂದು ಪ್ರಾರಂಭವಾಗುವ ಗೀತೆಯನ್ನು ಬರೆಯುವ ಮೂಲಕ ಗೀತ ರಚನಾಕಾರರಾಗಿ ಕನ್ನಡ ಚಿತ್ರರಂಗವನ್ನು ಪ್ರಪ್ರಥಮವಾಗಿ ಪ್ರವೇಶಿಸಿದರು.

ಕ್ರೇಜಿ ಸ್ಟಾರ್ ರವಿಚಂದ್ರನ್ ನಟಿಸಿರುವ ಬಹುತೇಕ ಚಿತ್ರಗಳಿಗೆ ಸಂಗೀತ, ಸಾಹಿತ್ಯ ನೀಡಿರುವ ಹಂಸಲೇಖ ಇದುವರೆಗೂ ಸುಮಾರು 500 ಚಿತ್ರಗಳಿಗೆ ಸಂಗೀತ ಮತ್ತು ಸಾಹಿತ್ಯ ರಚಿಸಿದ್ದಾರೆ. ರವಿಚಂದ್ರನ್ ಮತ್ತು ಹಂಸಲೇಖಾ ಜೋಡಿ ಕನ್ನಡ ಚಿತ್ರರಂಗದಲ್ಲಿ ಒಂದು ಹೊಸ ಅಲೆಯನ್ನೇ ಸೃಷ್ಟಿಸಿತು. 'ಪ್ರೇಮಲೋಕ' ಚಿತ್ರ ಅವರ ಅದೃಷ್ಟದ ಬಾಗಿಲನ್ನು ತೆರೆಯಿತು. ಏಕೆಂದರೆ, ಈ ಚಿತ್ರದ ಎಲ್ಲಾ ಹಾಡುಗಳು ಸೂಪರ್ ಹಿಟ್ ಆದವು. ಅಲ್ಲಿಂದಾಚೆಗೆ ಹಂಸಲೇಖರವರಿಗೆ ಕನ್ನಡ ಚಿತ್ರರಂಗದಲ್ಲಿ ಅಪಾರ ಬೇಡಿಕೆ ಶುರುವಾಯಿತು.

ಒಂದು ಹಂತದಲ್ಲಿ ಕನ್ನಡ ಚಿತ್ರರಂಗದ ಅತ್ಯಂತ ಬೇಡಿಕೆಯ ಸಂಗೀತ ನಿರ್ದೇಶಕ ಹಾಗೂ ಗೀತ ರಚನಾಕಾರರಾಗಿ ಅವರು ಹೊರಹೊಮ್ಮಿದರು. ಅಂದಿನ ಜನಪ್ರಿಯ ಸಂಗೀತ ನಿರ್ದೇಶಕರಾದ ವಿಜಯ ಭಾಸ್ಕರ್, ಜಿ.ಕೆ.ವೆಂಕಟೇಶ್, ಎಂ.ರಂಗರಾವ್, ರಾಜನ್ ನಾಗೇಂದ್ರ ಮುಂತಾದವರನ್ನು ಹಿಂದಿಕ್ಕಿದರು. ಒಟ್ಟಾರೆಯಾಗಿ ಭಾರತೀಯ ಸಂಗೀತದ ಆಳ, ಅಗಲ, ವಿಸ್ತಾರ ಮುಂತಾದವುಗಳನ್ನು ಚೆನ್ನಾಗಿ ಜೀರ್ಣಿಸಿಕೊಂಡಿರುವಟಿ ಹಂಸಲೇಖ, ಸಂಗೀತದಲ್ಲಿ ಹಲವಾರು ಪ್ರಯೋಗಗಳನ್ನು ಮಾಡಿ, ಓರ್ವ ಪ್ರಯೋಗಶೀಲ ಸಂಗೀತ ನಿರ್ದೇಶಕ ಎಂಬ ಖ್ಯಾತಿಗೆ ಪಾತ್ರನಾಗಿದ್ದರು.

ತಮ್ಮ 'ಮುತ್ತಿನ ಹಾರ' ಚಿತ್ರಕ್ಕಾಗಿ, ಕರ್ನಾಟಕ ಸಂಗೀತದ ಮೇರು ಪರ್ವತ ದಿವಂಗತ ಡಾ.ಬಾಲಮುರುಳಿ ಕೃಷ್ಣನ್ ಅವರಿಂದ 'ದೇವರು ಹೊಸೆದ ಪ್ರೇಮದ ದಾರ' ಎಂಬ ಉತ್ತಮ ಗೀತೆಯನ್ನು ಹಾಡಿಸಿದರು. ಹೂವುಹಣ್ಣು ಚಿತ್ರಕ್ಕಾಗಿ ಸಿ.ಅಶ್ವಥ್ ಅವರಿಂದ "ನಿಂಗಿ ನಿಂಗಿ ನಿಂಗಿ ಹಾಸಿ ಹೊದ್ದಿತಲ್ಲೇ ನಿಂಗಿ" ಸುಮಧುರ ಗೀತೆಯನ್ನು ಹಾಡಿಸಿದರು. ಈ ರೀತಿ ಹಲವಾರು ಪ್ರಯೋಗಗಳ ಮೂಲಕ ಜನರಿಗೆ ಪ್ರಿಯವಾಗುವಂತಹ ಸಂಗೀತ ಮತ್ತು ಸಾಹಿತ್ಯವನ್ನು ನೀಡಿದ್ದಾರೆ. ಸಂಗೀತ ಮತ್ತು ಸಾಹಿತ್ಯ ಕ್ಷೇತ್ರದಲ್ಲಿ ಅವರನ್ನು 'ಸವ್ಯಸಾಚಿ' ಎಂದು ಕೂಡ ಕರೆಯಬಹುದು. ಏಕೆಂದರೆ ಎರಡು ವಿಭಿನ್ನವಾದ ಕ್ಷೇತ್ರಗಳಲ್ಲಿ ಹಂಸಲೇಖ ಮಾಡಿರುವ ಸಾಧನೆ ಅಪೂರ್ವವಾಗಿದೆ.

ನಾನು ನನ್ನ ಹೆಂಡ್ತಿ, ಗಾನಯೋಗಿ ಪಂಚಾಕ್ಷರ ಗವಾಯಿ, ನೀನು ನಕ್ಕರೆ ಹಾಲು ಸಕ್ಕರೆ, ನವ ಜೀವನ, ಮಹಾಕ್ಷತ್ರಿಯ, ಹಿಮಪಾತ, ರಣರಂಗ, ಪ್ರೇಮ ರಾಗ ಹಾಡು ಹಾಡು ಗೆಳತಿ, ಸ್ಪರ್ಶ, ಶ್ರೀ ಮಂಜುನಾಥ, ಡಾ.ರಾಜ್‌ಕುಮಾರ್ ನಟನೆಯ ಆಕಸ್ಮಿಕ, ದೇವರು ಕೊಟ್ಟ ತಂಗಿ, ನೆನಪಿರಲಿ, ಕಲ್ಲರಳಿ ಹೂವಾಗಿ, ಕುರಿಗಳು ಸಾರ್ ಕುರಿಗಳು, ಕತ್ತೆಗಳು ಸಾರ್ ಕತ್ತೆಗಳು, ಮನೆದೇವ್ರು, ಸಿಪಾಯಿ, ಮೀರ ಮಾಧವ ರಾಘವ, ನವ ಶಕ್ತಿ ವೈಭವ, ಹಬ್ಬ, ಸ್ನೇಹಲೋಕ, ಕೋಣ ಈದೈತೆ ಮುಂತಾದ ನೂರಾರು ಚಿತ್ರಗಳು ಹಂಸಲೇಖರ ಪ್ರತಿಭೆಗೆ ಸಾಣೆ ಹಿಡಿಯಬಲ್ಲವು.

ಹಂಸಲೇಖರ ಪತ್ನಿ ಲತಾ ಹಂಸಲೇಖ ಕೂಡ ಓರ್ವ ಜನಪ್ರಿಯ ಗಾಯಕಿಯಾಗಿದ್ದಾರೆ. ಕೆಲವು ತಿಂಗಳ ಹಿಂದೆ ಪರಮಪೂಜ್ಯ ದಿವಂಗತ ಪೇಜಾವರ ಸ್ವಾಮೀಜಿಗಳ ಬಗ್ಗೆ ಅವರು ಆಡಿದ್ದ ಕೆಲವು ಮಾತುಗಳು ವಿವಾದ ಸೃಷ್ಟಿಸಿತ್ತು. ಒಂದು ಪ್ರಬಲ ಜಾತಿಯ ಕೆಂಗಣ್ಣಿಗೆ ಹಂಸಲೇಖ ಗುರಿಯಾಗಿದ್ದರು. ಆದರೆ ಆ ವಿವಾದ ಈಗ ತಣ್ಣಗಾಗಿದೆ. ಗಳಸ್ಯ ಕಂಠಸ್ಯ ಎಂಬಂತಿದ್ದ ಹಂಸಲೇಖ ಮತ್ತು ರವಿಚಂದ್ರನ್ ಜೋಡಿ ಸಹ ಬೇರ್ಪಟ್ಟಿತ್ತು. ನಂತರ ಮತ್ತೇ ಇಬ್ಬರು ಒಂದಾದರು. ಈ ರೀತಿ ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಏಳು ಬೀಳುಗಳನ್ನು ಕಂಡಿರುವ ಹಂಸಲೇಖಾ ಒಂದು ಅಪ್ಪಟ ದೇಸಿ ಪ್ರತಿಭೆ ಎಂಬುದರಲ್ಲಿ ಎರಡು ಮಾತಿಲ್ಲ. ಅವರ ಬೇರೆ ವಿಚಾರಗಳು ಇಲ್ಲಿ ಅಪ್ರಸ್ತುತ. ಹಂಸಲೇಖರಿಗೆ 'ನಾದ ಬ್ರಹ್ಮ' ಸೇರಿದಂತೆ ಹಲವಾರು ಪ್ರಶಸ್ತಿಗಳು ಲಭ್ಯವಾಗಿದೆ. ವಯಸ್ಸು 72 ಆದರೂ, ಇಪ್ಪತ್ತೆರಡರ ಯುವಕನ ರೀತಿ ಜೋಶ್ ಹೊಂದಿರುವ ಹಂಸಲೇಖರಿಗೆ ಈ ಶುಭ ಸಂದರ್ಭದಲ್ಲಿ ನಾವೂ ಅಭಿನಂದಿಸೋಣ.

●ಕೆ.ವಿ.ವಾಸು, ವಕೀಲರು ಮತ್ತು ನೋಟರಿ,
ಮೊಬೈಲ್: 9341731661

ಮೈಸೂರು ವಕೀಲರ ಸಂಘದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಆತ್ಮೀಯ ಅಭಿನಂದನೆ

●ಹಿರಿಯ ವಕೀಲರಿಂದ ಹೆಚ್.ಗಂಗಾಧರನ್ ಅವರ ಭಾವಚಿತ್ರ ಅನಾವರಣ ●ವಕೀಲರೊಂದಿಗೆ ಸ್ವಾರಸ್ಯಕರ ಚರ್ಚೆಯಲ್ಲಿ ಮಗ್ನರಾದ ಮುಖ್ಯಮಂತ್ರಿಗಳು ●ಹಣವಿಲ್ಲದವರು, ಅಶಕ್ತರ ಪರ ವಾದಿಸಿ, ನ್ಯಾಯ ಕೊಡಿಸುವ ಕೆಲಸ ಮಾಡಿ; ಕಿವಿಮಾತು

ಮೈಸೂರು, ಆ.29(ಎಸ್‌ಬಿಡಿ)– ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ಹಾಗೂ ಆರ್ಥಿಕ ಸಮಾನತೆ ದೊರೆತಾಗ ಮಾತ್ರ ದೇಶಕ್ಕೆ ಸ್ವಾತಂತ್ರ್ಯ ಬಂದಿದ್ದು ಸಾರ್ಥಕವಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮೈಸೂರು ವಕೀಲರ ಸಂಘದ ವತಿಯಿಂದ ನ್ಯಾಯಾಲಯದ ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಅಭಿನಂದನಾ ಸಮಾರಂಭ ಹಾಗೂ ಮಾಜಿ ಶಾಸಕ, ಹಿರಿಯ ವಕೀಲ ದಿವಂಗತ ಹೆಚ್.ಗಂಗಾಧರನ್ ಅವರ ಭಾವಚಿತ್ರ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಅನ್ಯಾಯ, ವಕೀಲನಾಗಲು ದಾರಿಯಾಯ್ತು: ನಾನು ಆಕಸ್ಮಿಕವಾಗಿ ವಕೀಲನಾದವನು. ನಮ್ಮ ಅಪ್ಪ ನನ್ನನ್ನು ಡಾಕ್ಟರ್ ಮಾಡಬೇಕು ಅಂದುಕೊಂಡಿದ್ದರು. ಆದರೆ ಪಿಯುಸಿಯಲ್ಲಿ ಮಾರ್ಕ್ಸ್ ಕಡಿಮೆ ಇದ್ದಿದ್ದರಿಂದ ಮೆಡಿಕಲ್ ಸೀಟ್ ಸಿಗಲಿಲ್ಲ. ಹಾಗಾಗಿ ಯುವರಾಜ ಕಾಲೇಜಿನಲ್ಲಿ ಬಿ.ಎಸ್ಸಿ ಮಾಡಿದೆ. ನಂತರ ಮಾನಸ ಗಂಗೋತ್ರಿಯಲ್ಲಿ ಎಂ.ಎಸ್ಸಿ ಬಾಟನಿಗೆ ಅರ್ಜಿ ಹಾಕಿದೆ. ವಾರ್ಷಿಕ 1200 ರೂ. ಒಳಗೆ ಆದಾಯ ದೃಢೀಕರಣ ಪತ್ರ ಬೇಕಿತ್ತು. ಆದರೆ ಶಾನುಬೋಗರು ನಾಲ್ಕೂವರೆ ಸಾವಿರ ವಾರ್ಷಿಕ ವರಮಾನವಿದೆ ಎಂದು ಬರೆದುಕೊಟ್ಟ ಅದನ್ನು ಅಲ್ಲಿಯೇ ಹರಿದು ಬಿಸಾಡಿದೆ. ಇನ್ಕಮ್ ಸರ್ಟಿಫಿಕೇಟ್ ಇಲ್ಲದೆ ಎಂ.ಎಸ್ಸಿ ಸೀಟ್ ಸಿಗಲಿಲ್ಲ. ನಂತರ ಒಂದು ವರ್ಷ ಊರಿನಲ್ಲಿ ವ್ಯವಸಾಯ ಮಾಡಿಕೊಂಡಿದ್ದೆ. ಪಕ್ಕದ ಜಮೀನಿನವರು ನಮ್ಮ ಭೂಮಿಯನ್ನು ಒತ್ತುವರಿ ಮಾಡಿಕೊಂಡಿದ್ದರು. ಆಗ ನಾನೂ 2 ಅಡಿ ಅವರ ಜಮೀನು ಕಡೆಗೆ ಉಳುಮೆ ಮಾಡಿದೆ. ಪಂಚಾಯ್ತಿಯಲ್ಲಿ ನನ್ನದೇ ತಪ್ಪು ಎಂದು ತೀರ್ಮಾನ ಆಯ್ತು. ಆಗ ಮೈಸೂರಿಗೆ ಬಂದು ಸ್ನೇಹಿತರ ಒತ್ತಾಯದಿಂದ ಕಾನೂನು ಪದವಿಗೆ ಸೇರಿದೆ ಎಂದರು.

ರಾಜಕೀಯಕ್ಕೆ ಹಾದಿ: ನಾನು ಶಾರದಾವಿಲಾಸ ಕಾನೂನು ಕಾಲೇಜಿನಲ್ಲಿ ಕಾನೂನು ಪದವಿಗೆ ಸೇರಿದೆ. ರೈತ ಸಂಘದ ಅಧ್ಯಕ್ಷರಾಗಿದ್ದ ಪ್ರೊ.ನಂಜುಂಡಸ್ವಾಮಿ ಅಲ್ಲಿ ಅಧ್ಯಾಪಕರಾಗಿದ್ದರು. ಅವರು ನಮಗೇನು ಪಾಠ ಮಾಡುತ್ತಿರಲಿಲ್ಲ. ಆದರೆ ರಾಜಕೀಯ ಆಸಕ್ತರ ಗುಂಪು ಮಾಡಿದ್ದರು. ಅದರಲ್ಲಿ ನಾನೂ ಸೇರಿ ಏಳೆಂಟು ಜನರಿದ್ದೆವು. ತರಗತಿ ನಂತರ ಎಲ್ಲರೂ ಸೇರಿ ರಾಜಕೀಯ ಚರ್ಚೆ ಮಾಡುತ್ತಿದ್ದೆವು. ಅವರ ಮೂಲಕವೇ ರಾಜಕೀಯ ಹುಚ್ಚು ಶುರುವಾಯಿತು ಎಂದು ತಿಳಿಸಿದರು.

ಶಾನುಬೋಗನ ಬೆವರಿಳಿಸಿದ್ದೆ: ನಮ್ಮಪ್ಪ ಶಾನುಬೋಗ ಚೆನ್ನಪ್ಪಯ್ಯನ ಶಿಷ್ಯನಾಗಿದ್ದ. ನಾನು ಕಾನೂನು ಕಾಲೇಜು ಸೇರುತ್ತೇನೆ ಎಂದಾಗ ಶಾನುಬೋಗರ ಕೇಳಿಕೊಂಡು ಬರುತ್ತೇನೆ ಎಂದು ಹೋಗಿದ್ದರು. ತಾಲೂಕು ಬೋರ್ಡ್ ಎಲೆಕ್ಷನ್‌ನಲ್ಲಿ ಚೆನ್ನಪ್ಪಯ್ಯನ ವಿರುದ್ಧ ಪ್ರಚಾರ ಮಾಡಿದ್ದೆ ಎಂಬ ಕಾರಣಕ್ಕೋ ಏನೋ ಕುರುಬರು ಲಾ ಮಾಡಲು ಸಾಧ್ಯವೇ? ಲಾ ಕಾಲೇಜು ಬೇಡ ಎಂದು ಹೇಳಿದ್ದರಿಂದ ನಮ್ಮಪ್ಪ ಅಡ್ಮಿಷನ್ ಆಗಲು ಒಪ್ಪಲಿಲ್ಲ. ಆಗ ಪಂಚಾಯ್ತಿ ಸೇರಿಸಿ ಆಸ್ತಿ ಪಾಲು ಕೇಳಿದ್ದರಿಂದ ಒಪ್ಪಿಕೊಂಡ. ಚೆನ್ನಪ್ಪಯ್ಯ ಮಾಡಿದ್ದ ವಿಲ್‌ಗೆ ನಾನು ಕೋರ್ಟ್‌ನಲ್ಲಿ ಚಾಲೆಂಜ್ ಮಾಡಿ, ವಿಚಾರಣೆ ವೇಳೆ ಸುಮಾರು ಎರಡೂವರೆ ಗಂಟೆ ಬೆವರಿಳಿಸಿದೆ. ಹೊರಗೆ ಬಂದಾಗ ಕುರುಬರಿಗೂ ಲಾಯರ್ ಕೆಲಸ ಮಾಡೋಕ್ ಬರುತ್ತೆ ಎಂದು ಹೇಳಿದ್ದೆ ಎಂದರು.

ಅಶಕ್ತರಿಗೆ ನ್ಯಾಯ ಕೊಡಿಸಬೇಕು: ವಕೀಲರ ಸಂಖ್ಯೆ ಜಾಸ್ತಿಯಾಗುವುದಕ್ಕಿಂತ ಶ್ರದ್ಧೆಯಿಂದ ವಾದ ಮಂಡಿಸಿ ಕಕ್ಷಿದಾರರಿಗೆ ನ್ಯಾಯ ಕೊಡಿಸುವುದು ಬಹಳ ಮುಖ್ಯ. ಹಣವಿಲ್ಲದವರಿಗೆ, ಅಶಕ್ತರಿಗೆ ನ್ಯಾಯ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಕಿವಿಮಾತು ಹೇಳಿದ ಸಿದ್ದರಾಮಯ್ಯ, ಹಿಂದುಳಿದ ಸಮುದಾಯದವನು ಎರಡು ಬಾರಿ ಮುಖ್ಯಮಂತ್ರಿಯಾಗುವುದು ಸುಲಭವಲ್ಲ. ಜನರ ಆಶೀರ್ವಾದ ಬೇಕು. ಚುನಾವಣೆಯಲ್ಲಿ ನಾನು ಗೆಲ್ಲಬೇಕೆಂಬ ಆಶಯದೊಂದಿಗೆ ಮೈಸೂರು ಭಾಗದ ಬಹುತೇಕ ವಕೀಲರು ನೇರವಾಗಿ ನನ್ನ ಪರ ಕೆಲಸ ಮಾಡಿದ್ದಾರೆ. ನಾನು 2ನೇ ಬಾರಿ ಸಿಎಂ ಆಗುವಲ್ಲಿ ಮೈಸೂರು ವಕೀಲರ ಸಂಘದ ಕೊಡುಗೆ ಮಹತ್ವದ್ದಾಗಿದೆ ಎಂದು ಹೇಳಿದರು.

ಅಭಿನಂದನೆ: ಸಮಾರಂಭದಲ್ಲಿ ಮೈಸೂರು ವಕೀಲರ ಸಂಘದ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಭಿನಂದಿಸಲಾಯಿತು. ಇದೇ ವೇಳೆ 'ಲಾ ಗೈಡ್' ಸಂಪಾದಕ ಹೆಚ್.ಎನ್.ವೆಂಕಟೇಶ್ ಸಿಎಂಗೆ ಬೆಳ್ಳಿಗದೆ ನೀಡಿ ಅಭಿನಂದಿಸಿದರು. ಹೆಚ್.ಗಂಗಾಧರನ್ ಅವರ ಭಾವಚಿತ್ರವನ್ನು ಮುಖ್ಯಮಂತ್ರಿಗಳು ಅನಾವರಣ ಮಾಡಿ, ಪುಷ್ಪ ನಮನ ಸಲ್ಲಿಸಿದರು.

ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಂಗ್ರೇಶಿ, ಸಂಘದ ಅಧ್ಯಕ್ಷ ಎಂ.ಮಹದೇವಸ್ವಾಮಿ, ಕಾರ್ಯದರ್ಶಿ ಎಸ್.ಉಮೇಶ್, ಉಪಾಧ್ಯಕ್ಷ ಪುಟ್ಟಸಿದ್ದೇಗೌಡ, ಮಹಿಳಾ ಘಟಕದ ಭಾಗ್ಯಮ್ಮ, ಕರ್ನಾಟಕ ವಕೀಲರ ಪರಿಷತ್ ಸದಸ್ಯ ಚಂದ್ರಮೌಳಿ, ಮಾಜಿ ಸದಸ್ಯ ಅಪ್ಪಾಜಿಗೌಡ, ಹಿರಿಯ ವಕೀಲರಾದ ಸಿ.ಎಂ.ಜಗದೀಶ್, ಎ.ಎಸ್.ನಟರಾಜ್, ಹಿರಿಯ ಸಹಕಾರಿ ಸಿ.ಬಸವೇಗೌಡ, ಸಿಎಂ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಮತ್ತಿತರರು ಉಪಸ್ಥಿತರಿದ್ದರು.



ಹಿರಿಯ ವಕೀಲರಾದ ದಿವಂಗತ ಹೆಚ್.ಗಂಗಾಧರನ್ ಅವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪುಷ್ಪಾರ್ಚನೆ ಮಾಡಿ, ಗೌರವ ಸಲ್ಲಿಸಿದರು. ಜಿಲ್ಲಾ ಪ್ರಧಾನ ನ್ಯಾಯಾಧೀಶ ಜಿ.ಎಸ್.ಸಂಗ್ರೇಶಿ ಇತರರಿದ್ದಾರೆ.

ಪ್ರಧಾನ ನ್ಯಾಯಾಧೀಶರಿಂದ ಸಿದ್ದರಾಮಯ್ಯರ ಬಣ್ಣನೆ

ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಎಸ್.ಸಂಗ್ರೇಶಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಮುಕ್ತಕಂಠದಿಂದ ಬಣ್ಣಿಸಿದರು. ಸಿದ್ದರಾಮಯ್ಯನವರ ಹೇಳಿಕೆ, ಅವರ ಬಗ್ಗೆ ಪ್ರಗತಿಪರರ ಅಭಿಪ್ರಾಯವನ್ನು ಉಲ್ಲೇಖಿಸಿ ಪ್ರಶಂಸಿಸಿದರು. ನನ್ನ ಪಾಲಿಗೆ ಈ ದಿನ ಬಹಳ ಮೌಲ್ಯವಾದದ್ದು. ಸಿಎಂ ಸಿದ್ದರಾಮಯ್ಯ ಸಮ್ಮುಖದಲ್ಲಿ ಸಮಾರಂಭ ಉದ್ಘಾಟನೆ ಮಾಡಿಸಿದ್ದನ್ನು ನಾನು ಎಂದೂ ಮರೆಯುವುದಿಲ್ಲ. 1988ರಿಂದಲೂ ಸಿದ್ದರಾಮಯ್ಯನವರನ್ನು ಗಮನಿಸಿ ಹಾಗೂ ಅನುಸರಿಸಿಕೊಂಡು ಬಂದಿದ್ದೇನೆ. ಹಲವು ಬಾರಿ ಭೇಟಿಯಾಗಿದ್ದೇನೆ. ಕರಾರುವಕ್ಕಾದ ಅವರ ಭಾಷಣಗಳನ್ನು ಓದುತ್ತಾ, ಕೇಳುತ್ತಾ ಬಂದಿದ್ದೇನೆ. ಇವರ ಕೋಟಿ ಕೋಟಿ ಅಭಿಮಾನಿಗಳಲ್ಲಿ ನಾನೂ ಒಬ್ಬ. ವೈಯಕ್ತಿಕವಾಗಿ ನಾನು ಇವರ ದೊಡ್ಡ ಅಭಿಮಾನಿ ಎಂದರು.



ಮೈಸೂರು ವಕೀಲರ ಸಂಘದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲಾ ಗೈಡ್ ಕನ್ನಡ ಮಾಸ ಪತ್ರಿಕೆ ಸಂಪಾದಕ ಹೆಚ್.ಎನ್.ವೆಂಕಟೇಶ್, ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಂ.ಮಹದೇವಸ್ವಾಮಿ ಬೆಳ್ಳಿ ಗದೆ ನೀಡಿ ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಜಿಲ್ಲಾ ಪ್ರಧಾನ ನ್ಯಾಯಾಧೀಶ ಜಿ.ಎಸ್.ಸಂಗ್ರೇಶಿ, ಸಂಘದ ಕಾರ್ಯದರ್ಶಿ ಎಸ್.ಉಮೇಶ್, ಮಾಜಿ ಅಧ್ಯಕ್ಷ ಜಿ.ವಿ.ರಾಮಮೂರ್ತಿ, ಹಿರಿಯ ವಕೀಲರಾದ ಶಿವಣ್ಣೇಗೌಡ, ಕಾಂಗ್ರೆಸ್ ಮುಖಂಡ ಸಿ.ಬಸವೇಗೌಡ ಇತರರು ಉಪಸ್ಥಿತರಿದ್ದರು.

ವಕೀಲರ ಸಂಘ ಸಿಎಂ ಮುಂದಿಟ್ಟ ಬೇಡಿಕೆಗಳು

ಮಳಲವಾಡಿ ನ್ಯಾಯಾಲಯದ ಆವರಣದಲ್ಲಿ ವಕೀಲರ ಸಂಘ ಕಟ್ಟಡದ ಮುಂದುವರೆದ ಕಾಮಗಾರಿಗೆ 10 ಕೋಟಿ ರೂ. ಅನುದಾನ ಘೋಷಿಸಿ, ಸದ್ಯಕ್ಕೆ 5 ಕೋಟಿ ನೀಡಿ ಉಳಿದಿದ್ದನ್ನು ಬಜೆಟ್‌ನಲ್ಲಿ ಕೊಡಿ. ಸಂಘದ ವಿದ್ಯುತ್ ಶುಲ್ಕ ಮನ್ನಾ ಮಾಡಬೇಕು. ಗ್ರಂಥಾಲಯ ಅಭಿವೃದ್ಧಿ, ಪುಸ್ತಕ ಖರೀದಿಗೆ ಹಣ ಬಿಡುಗಡೆ ಮಾಡಬೇಕು. ಮಳಲವಾಡಿ ನ್ಯಾಯಾಲಯದ ಎದುರಿನ ಮುಡಾಗೆ ಸೇರಿದ 2 ಎಕರೆ ಭೂಮಿಯನ್ನು ವಕೀಲರ ಸಮುದಾಯ ಭವನಕ್ಕೆ ನೀಡಬೇಕು. ಸಂಘದ ಆವರಣದಲ್ಲಿ ಸ್ಪೋರ್ಟ್ ಕ್ಲಬ್ ನಿರ್ಮಿಸಿಕೊಡಬೇಕು. ನೋಟರಿಗಳಿಗೆ ಸೂಕ್ತ ಕಟ್ಟಡ ವ್ಯವಸ್ಥೆ ಮಾಡಿಕೊಡಬೇಕು. ಎಸಿ, ಡಿಸಿ ಕೋರ್ಟ್‌ಗಳನ್ನು ನ್ಯಾಯಾಲಯದ ಆವರಣದಲ್ಲೇ ಸ್ಥಾಪಿಸಬೇಕು. ನ್ಯಾಯಾಧೀಶರ ಹುದ್ದೆಗೆ ಅರ್ಜಿ ಸಲ್ಲಿಸಲು ಕನಿಷ್ಠ 3 ವರ್ಷ ವಕೀಲ ವೃತ್ತಿ ಮಾಡುವುದನ್ನು ಕಡ್ಡಾಯಗೊಳಿಸಬೇಕು. ಮೈಸೂರಲ್ಲಿ ಸದ್ಯ 45 ನ್ಯಾಯಾಲಯಗಳಿದ್ದು, ಹೆಚ್ಚುವರಿ 12 ನ್ಯಾಯಾಲಯ ಸ್ಥಾಪಿಸಬೇಕೆಂದು ಹೈಕೋರ್ಟ್ ಸೂಚಿಸಿದೆ. ಆದರೆ ಕಟ್ಟಡದ ಕೊರತೆ ಇದೆ. ಹಾಗಾಗಿ ಪಕ್ಕದಲ್ಲಿರುವ ಜಿಲ್ಲಾ ಪಂಚಾಯ್ತಿಯನ್ನು ಹಳೇ ಜಿಲ್ಲಾಧಿಕಾರಿ ಕಟ್ಟಡಕ್ಕೆ ಸ್ಥಳಾಂತರಿಸಿ, ಈ ಜಾಗವನ್ನು ನ್ಯಾಯಾಲಯಕ್ಕೆ ಕೊಡಿಸಬೇಕು. 60 ವರ್ಷ ಮೇಲ್ಪಟ್ಟ ಮಹಿಳಾ ವಕೀಲರಿಗೆ 5 ಸಾವಿರ ಮಾಸಿಕ ವೇತನ ನೀಡಬೇಕು. ಮಹಿಳಾ ವಕೀಲರಿಗೆ ರಿಯಾಯಿತಿ ದರದಲ್ಲಿ ನಿವೇಶನ, ಮನೆ ಮಂಜೂರು ಮಾಡಿಕೊಡಬೇಕು. ಹೀಗೆ ಹಲವು ಬೇಡಿಕೆಗಳ ಪಟ್ಟಿಯನ್ನು ಸಂಘದ ಅಧ್ಯಕ್ಷ ಮಹದೇವಸ್ವಾಮಿ ಸಿಎಂ ಮುಂದಿಟ್ಟರು.

ದಿಢೀರ್ ಆಗಮಿಸಿದ ಡಿಕೆಶಿ

ಸಮಾರಂಭದ ನಡುವೆ ರಾತ್ರಿ 8.30ರ ವೇಳೆಗೆ ದಿಢೀರ್ ಆಗಮಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವೇದಿಕೆಯಲ್ಲಿ ಮುಖ್ಯಮಂತ್ರಿಗಳ ಪಕ್ಕದಲ್ಲಿ ಆಸೀನರಾದರು. ಕೂಡಲೇ ಸಿಎಂಗೆ ಯಾವುದೋ ಪತ್ರ ನೀಡಿದರು. ಅದನ್ನು ಸಿಎಂ ತದೇಕಚಿತ್ತವಾಗಿ ಓದಿದರು. ಬಳಿಕ ಪರಸ್ಪರ ಸಮಾಲೋಚಿಸಿದರು. ಬಳಿಕ ಜೇಬಿನಿಂದ ಮತ್ತೊಂದು ಚೀಟಿ ತೆಗೆದು ಸಿಎಂಗೆ ಕೊಟ್ಟರು. ಮತ್ತೆ ಚರ್ಚೆ ಮುಂದುವರೆಸಿದರು. 8.52ಕ್ಕೆ ಡಿಕೆಶಿ ವೇದಿಕೆಯಿಂದ ನಿರ್ಗಮಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com



ಎಲ್ಲಾ ವೈಯಕ್ತಿಕ ಮತ್ತು ಸಾಮೂಹಿಕ ಚಟುವಟಿಕೆಗಳಲ್ಲಿ ಉನ್ನತಿಯನ್ನು ಸಾಧಿಸಲು ನಿರಂತರ ಪ್ರಯತ್ನಿಸಿ ದೇಶದ ಪ್ರಗತಿಗಾಗಿ ಶ್ರಮಿಸುವುದು ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

ಮೈಸೂರು ಮಿತ್ರ ಬುಧವಾರ 30 ಆಗಸ್ಟ್ 2023

ಬಸ್ ಡಿಕ್ಕಿಯಿಂದ ಹಾನಿಗೊಳಗಾಗಿದ್ದ ಜನರಲ್ ಕೆ.ಎಸ್. ತಿಮ್ಮಯ್ಯ ಪ್ರತಿಮೆ ಮೈಸೂರಲ್ಲಿ ದುರಸ್ತಿ

ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್‌ರಿಂದ ದುರಸ್ತಿ ಕಾರ್ಯ



ಮಡಿಕೇರಿ, ಆ.29– ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ಹಾನಿಗೆ ಒಳಗಾಗಿದ್ದ ವೀರಯೋಧ ಜನರಲ್ ಕೊಡಂದೇರ ಎಸ್.ತಿಮ್ಮಯ್ಯ ಅವರ ಕಂಚಿನ ಪ್ರತಿಮೆಯನ್ನು ದುರಸ್ತಿಗಾಗಿ ಮೈಸೂರಿಗೆ ಸ್ಥಳಾಂತರಿಸಲಾಗಿದೆ. ಇದಕ್ಕೂ ಮುನ್ನ ತಿಮ್ಮಯ್ಯ ವೃತ್ತದಲ್ಲಿದ್ದ ಪ್ರತಿಮೆಯ ಅಡಿಪಾಯದಲ್ಲಿದ್ದ ಬೃಹತ್ ಗಾತ್ರದ ಗ್ರಾನೈಟ್ ಶಿಲೆಯನ್ನೂ ಕೂಡ ಜನರಲ್ ತಿಮ್ಮಯ್ಯ ಮ್ಯೂಸಿಯಂಗೆ ಸ್ಥಳಾಂತರ ಮಾಡಲಾಯಿತು. ಕ್ರೇನ್ ಮೂಲಕ ಕಂಚಿನ ಪ್ರತಿಮೆಯನ್ನು ಗೂಡ್ಸ್ ವಾಹನದಲ್ಲಿಟ್ಟು ಮೈಸೂರಿಗೆ ಕೊಂಡೊಯ್ಯಲಾಗಿದೆ.

ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರು ಜನರಲ್ ತಿಮ್ಮಯ್ಯ ಅವರ ಪ್ರತಿಮೆಯ ದುರಸ್ತಿ ಕಾರ್ಯ ನಡೆಸಲಿದ್ದಾರೆ. ಪ್ರತಿಮೆ ಸ್ಥಾಪಿಸಿದ್ದ ಹಿರಿಯರಾದ ಎಂ.ಸಿ.ನಾಣಯ್ಯ ಸಲಹೆ ಮೇರೆಗೆ ಇದೇ ಪ್ರತಿಮೆಯನ್ನು ದುರಸ್ತಿಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಶಾಸಕರಾದ ಡಾ.ಮಂಥರ್ ಗೌಡ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ, ಜಿಲ್ಲಾಧಿಕಾರಿ ವೆಂಕಟರಾಜು ಅವರ ಪ್ರಯತ್ನದ ಫಲವಾಗಿ ಪ್ರತಿಮೆಗೆ ಶೀಘ್ರ ದುರಸ್ತಿ ಭಾಗ್ಯ ದೊರೆತಿದೆ. ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು ಕೂಡ ಪ್ರತಿಮೆಯನ್ನು ಶೀಘ್ರ ಮರು ಪ್ರತಿಷ್ಠಾಪನೆ ಮಾಡುವಂತೆ ಸೂಚಿಸಿದ್ದರು. ಪ್ರತಿಮೆ ಸ್ಥಳಾಂತರದ ಸಂದರ್ಭ ಮಡಿಕೇರಿ ಕೊಡವ ಸಮಾಜದ ನಿರ್ದೇಶಕಿ ಕನ್ನಂಡ ಕವಿತಾ, ಸದಸ್ಯರಾದ ಸಂಜು, ಅರುಣ್ ಯೋಗಿರಾಜ್ ತಂಡದ ಸದಸ್ಯ ಯಶವಂತ್ ಮತ್ತಿತರರು ಹಾಜರಿದ್ದರು.



ಈ ಕುರಿತು ಅಯೋಧ್ಯೆಯಿಂದ 'ಮೈಸೂರು ಮಿತ್ರ'ಕ್ಕೆ ಪ್ರತಿಕ್ರಿಯಿಸಿದ ಅರುಣ್ ಯೋಗಿರಾಜ್, ಜನರಲ್ ತಿಮ್ಮಯ್ಯ ಅವರ ಬಗ್ಗೆ ಅಪಾರ ಗೌರವವಿದೆ. ಹೀಗಾಗಿ ಪ್ರತಿಮೆ ದುರಸ್ತಿ ಕಾರ್ಯವನ್ನು ಒಪ್ಪಿಕೊಂಡಿದ್ದೇನೆ. 25 ದಿನಗಳ ಒಳಗೆ ಪ್ರತಿಮೆಯ ಮೂಲ ಸೌಂದರ್ಯಕ್ಕೆ ಧಕ್ಕೆಯಾಗದಂತೆ ದುರಸ್ತಿ ಮಾಡಲಾಗುತ್ತದೆ ಎಂದು ಹೇಳಿದರು. ಕಳೆದ 50 ವರ್ಷಗಳಿಂದ ಕಂಚಿನ ಪ್ರತಿಮೆಗೆ ಹಲವು ಬಾರಿ ಪೇಯಿಂಟ್ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಮೊದಲು ಪ್ರತಿಮೆಯ ಮೇಲಿರುವ ಪೇಯಿಂಟ್ ತೆರವು ಮಾಡಲಾಗುತ್ತದೆ. ಬಳಿಕ ಪ್ರತಿಮೆಯ ಹಿಂಭಾಗಕ್ಕಾದ ತೂತುಗಳಿಗೆ ಕಂಚಿನ ಲೋಹದಿಂದಲೇ ವೆಲ್ಡಿಂಗ್ ಮಾಡಲಾಗುತ್ತದೆ. ಆ ಬಳಿಕ ಕೆಲವು ರಾಸಾಯನಿಕ ವಸ್ತುಗಳನ್ನು ಬಳಸಿ ಸಹಜ ವಾತಾವರಣದಲ್ಲಿ ಇಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಇಂದು ಗೃಹಲಕ್ಷ್ಮಿ ಯೋಜನೆಗೆ ಚಾಲನೆ

ಪಕ್ಷಭೇದ ಮರೆತು ಸಮಾರಂಭಕ್ಕೆ ಎಲ್ಲರೂ ಬನ್ನಿ



ವಿರಾಜಪೇಟೆ, ಆ.29– ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಯಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಸೌಲಭ್ಯ ವಿತರಣೆ ಕಾರ್ಯಕ್ರಮಕ್ಕೆ ಬುಧವಾರ ಅಧಿಕೃತವಾಗಿ ಮೈಸೂರಿನಲ್ಲಿ ಚಾಲನೆ ನೀಡಲಾಗುತ್ತಿದ್ದು, ಸರ್ಕಾರದ ಕಾರ್ಯಕ್ರಮದಲ್ಲಿ ಪಕ್ಷಭೇದ ಮರೆತು ಪ್ರತಿಯೊಬ್ಬರೂ ಆಗಮಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು ಮನವಿ ಮಾಡಿದ್ದಾರೆ.

ವಿರಾಜಪೇಟೆಯ ಪಂಜಾರುಪೇಟೆಯಲ್ಲಿರುವ ಶಾಸಕ ಎ.ಎಸ್.ಪೊನ್ನಣ್ಣ ಅವರ ನಿವಾಸದ ಆವರಣದಲ್ಲಿ ಆಯೋಜಿಸಲಾಗಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಸಚಿವರು, ಕಾಂಗ್ರೆಸ್ ಪಕ್ಷ ಚುನಾವಣೆ ಸಂದರ್ಭ ತನ್ನ ಪ್ರಣಾಳಿಕೆಯಲ್ಲಿ ಐದು ಗ್ಯಾರಂಟಿಗಳನ್ನು ನೀಡುವುದಾಗಿ ಜನರಿಗೆ ಆಶ್ವಾಸನೆ ನೀಡಿತ್ತು. ಅದರಂತೆ ಈಗಾಗಲೇ ಶಕ್ತಿ ಯೋಜನೆ, ಗೃಹಜ್ಯೋತಿ, ಅನ್ನಭಾಗ್ಯ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದೇವೆ, ಸಬಲೀಕರಣಕ್ಕೆ ಸಾಕ್ಷಿಯಾಗುವಂತೆ ಮಹಿಳೆಯರ ಬ್ಯಾಂಕ್ ಖಾತೆಗೆ ನೇರವಾಗಿ 2000 ರೂ. ಸಹಾಯಧನ ನೀಡುವ ಕಾರ್ಯ ಯೋಜನೆಗೆ ಪಕ್ಷದ ವರಿಷ್ಠರಾದ ರಾಹುಲ್ ಗಾಂಧಿ ಅವರು ಮೈಸೂರಿನಲ್ಲಿ ಚಾಲನೆ ನೀಡಲಿದ್ದಾರೆ ಎಂದರು.

ಕೊಡಗು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತೀತಿರ ಧರ್ಮಜಾ ಉತ್ತಪ್ಪ ಅಧ್ಯಕ್ಷತೆ ವಹಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಧಾನಪರಿಷತ್ ಮಾಜಿ ಸದಸ್ಯ ಚೆಪ್ಪುಡೀರ ಅರುಣ್ ಮಾಚಯ್ಯ ಸಭೆಯನ್ನುದ್ದೇಶಿಸಿ ಮಾತನಾಡಿದರು. ವೇದಿಕೆಯಲ್ಲಿ ಕಾಫಿ ಮಂಡಳಿ ಸದಸ್ಯೆ ಕಾಂಗ್ರೆಸ್‌ನ ತಾರ ಅಯ್ಯಮ್ಮ, ವಿರಾಜಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಡ ರಂಜಿ ಪೂಣಚ್ಚ, ನಾಪೋಕ್ಲು ಕಾಂಗ್ರೆಸ್ ಅಧ್ಯಕ್ಷ ಇಸ್ಮಾಯಿಲ್, ಪೊನ್ನಂಪೇಟೆ ಬ್ಲಾಕ್ ಅಧ್ಯಕ್ಷ ಮೀದೇರಿರ ನವೀನ್ ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಎಲ್ಲಾ ವಲಯ ಅಧ್ಯಕ್ಷರು ವಿವಿಧ ಪ್ರಮುಖರು ಭಾಗವಹಿಸಿದ್ದರು.

ಹಿರಿಯ ಅಧಿಕಾರಿಗಳಿಗೆ ದೂರು ಹಿನ್ನೆಲೆ

ಡಿಪೋ ಮುಂದೆ, ಸಿಬ್ಬಂದಿ ಎದುರೇ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಸಾರಿಗೆ ನೌಕರ

ಮಡಿಕೇರಿ, ಆ.29– ಕೆಎಸ್‌ಆರ್‌ಟಿಸಿ ಮಡಿಕೇರಿ ಘಟಕದ ಕಿರಿಯ ಸಹಾಯಕರೊಬ್ಬರು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆದಿದೆ. ಮಡಿಕೇರಿಯ ಕೆಎಸ್‌ಆರ್‌ಟಿಸಿ ಘಟಕದ ಕಿರಿಯ ಸಹಾಯಕ ಮಡಿಕೇರಿ ನಿವಾಸಿ ಅಭಿಷೇಕ್(28) ಎಂಬುವರೇ ಆತ್ಮಹತ್ಯೆಗೆ ಯತ್ನಿಸಿದ ನೌಕರರಾಗಿದ್ದಾರೆ.

ಪುತ್ತೂರು ವಿಭಾಗೀಯ ನಿಯಂತ್ರಣಾಧಿಕಾರಿ ಜಯಕರ್‌ಶೆಟ್ಟಿ ಆ.30ರಂದು ಮೈಸೂರಿನಲ್ಲಿ ನಡೆಯಲಿರುವ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಬಸ್ ನಿಯೋಜನೆ ಕುರಿತಂತೆ ಚರ್ಚಿಸಲು ಮಡಿಕೇರಿ ಘಟಕಕ್ಕೆ ಭೇಟಿ ನೀಡಿದ್ದರು. ಈ ಸಂದರ್ಭ ಅಭಿಷೇಕ್ ಅವರ ನಡಾವಳಿ ತೃಪ್ತಿಕರವಾಗಿಲ್ಲವೆಂದು ಘಟಕದ ವ್ಯವಸ್ಥಾಪಕರು ಹಿರಿಯ ಅಧಿಕಾರಿಯ ಗಮನಕ್ಕೆ ತಂದಿದ್ದಾರೆ ಎನ್ನಲಾಗಿದೆ. ಇದರಿಂದ ಮನನೊಂದ ಅಭಿಷೇಕ್ ಅವರು ಡಿಪೋ ಎದುರುಗಡೆಯೇ ಸಿಬ್ಬಂದಿಗಳ ಮುಂದೆಯೇ ವಿಷ ಸೇವಿಸಿದ್ದಾರೆ. ಗಂಭೀರ ಸ್ಥಿತಿಯಲ್ಲಿದ್ದ ಅಭಿಷೇಕ್ ಅವರನ್ನು ಸಮೀಪದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಈ ಘಟನೆ ಕುರಿತು ಮಡಿಕೇರಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ. ಈ ಕುರಿತು ಮಾತನಾಡಿದ ಕೊಡಗು ರಕ್ಷಣಾ ವೇದಿಕೆಯ ಅಧ್ಯಕ್ಷ ಪವನ್ ಪೆಮ್ಮಯ್ಯ, ಈ ಹಿಂದೆಯೇ ಡಿಪೋದಲ್ಲಿ ನೌಕರರಿಗೆ ಕಿರುಕುಳ ನೀಡುತ್ತಿರುವ ಬಗ್ಗೆ ಸಂಘಟನೆಯ ಗಮನ ಬಂದಿತ್ತು ಎಂದು ಹೇಳಿದರು.

ಮಡಿಕೇರಿ ದಸರಾ ಸಮಿತಿ

ಕಾರ್ಯಾಧ್ಯಕ್ಷರಾಗಿ ಪ್ರಕಾಶ್ ಆಚಾರ್ಯ

ಮಡಿಕೇರಿ, ಆ.29– ಮಡಿಕೇರಿ ದಸರಾ ಸಮಿತಿ ಕಾರ್ಯಾಧ್ಯಕ್ಷ ಸ್ಥಾನಕ್ಕೆ ದಶಮಂಟಪ ಸಮಿತಿಯಿಂದ ಅಭ್ಯರ್ಥಿಯಾಗಿ ಶ್ರೀ ಕೋಟೆ ಮಾರಿಯಮ್ಮ ದೇವಾಲಯ ಸಮಿತಿಯ ಪ್ರಕಾಶ್ ಆಚಾರ್ಯ ಆಯ್ಕೆಯಾಗಿದ್ದಾರೆ. ಉಪಾಧ್ಯಕ್ಷರಾಗಿ ಶ್ರೀ ಕೋಟೆ ಗಣಪತಿ ಸಮಿತಿಯ ರಾಜೇಶ್, ಸಹ ಕಾರ್ಯದರ್ಶಿಯಾಗಿ ಶ್ರೀ ಕೋಟೆ ಮಾರಿಯಮ್ಮ ದೇವಾಲಯ ಸಮಿತಿಯ ಜಗದೀಶ್ ಅವರು ಆಯ್ಕೆಯಾಗಿದ್ದಾರೆ.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ನಡೆದ ದಶಮಂಟಪ ಸಮಿತಿ ಸಭೆಯಲ್ಲಿ 10 ಮಂಟಪ ಸಮಿತಿ, 4 ಕರಗ ಸಮಿತಿಗಳಿಂದ ಆಯ್ಕೆ ಪ್ರಕ್ರಿಯೆ ನಡೆಯಿತು. 2023–24ನೇ ಸಾಲಿನ ದಸರಾಕ್ಕೆ ಕಾರ್ಯಾಧ್ಯಕ್ಷರಾಗಿ ಪ್ರಕಾಶ್ ಆಚಾರ್ಯ ಆಯ್ಕೆಯಾಗಿದ್ದಾರೆ. ಈ ಸಂದರ್ಭ ಮಾತನಾಡಿದ ಪ್ರಕಾಶ್ ಆಚಾರ್ಯ, ಎಲ್ಲರ ವಿಶ್ವಾಸ ದೊಂದಿಗೆ ವಿಜೃಂಭಣೆಯ ದಸರಾ ಆಚರಿಸಲಾಗುತ್ತದೆ. ಇದಕ್ಕೆ ಎಲ್ಲರ ಸಹಕಾರ ಅಗತ್ಯವಿದೆ ಎಂದು ಮನವಿ ಮಾಡಿದರು. ದಸರಾ ದಶಮಂಟಪ ಸಮಿತಿ ಅಧ್ಯಕ್ಷ ಮಂಜುನಾಥ್ ಸೇರಿದಂತೆ ಕರಗ ಮತ್ತು ವಿವಿಧ ಮಂಟಪ ಸಮಿತಿಗಳ ಪ್ರಮುಖರು ಉಪಸ್ಥಿತರಿದ್ದರು.

ಸೆ.3, ಶಿಕ್ಷಕರ ಅರ್ಹತಾ ಪರೀಕ್ಷೆ

ಮಡಿಕೇರಿ, ಆ.29– ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ(ಕೆಎಆರ್‌ಟಿಇಟಿ–2023)ಯು ಸೆ.3 ರಂದು ಮೊದಲನೇ ಅಧಿವೇಶನ ಬೆಳಗ್ಗೆ 9.30 ರಿಂದ ಮಧ್ಯಾಹ್ನ 12 ಗಂಟೆವರೆಗೆ ಹಾಗೂ 2ನೇ ಅಧಿವೇಶನ ಮಧ್ಯಾಹ್ನ 2 ರಿಂದ ಸಂಜೆ 4.30 ಗಂಟೆವರೆಗೆ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು(ಪ್ರೌಢಶಾಲಾ ವಿಭಾಗ), ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು(ಬ್ಲಾಕ್–01), ಸರ್ಕಾರಿ ಪದವಿ ಪೂರ್ವ ಕಾಲೇಜು (ಬ್ಲಾಕ್–02) ಮತ್ತು ನಗರದ ಸಂತ ಮೈಲರ ಪ್ರೌಢಶಾಲೆ ಈ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಹೆಚ್ಚಿನ ವಿವರಗಳಿಗೆ ಕಚೇರಿಯ ಪರೀಕ್ಷಾ ನೋಡಲ್ ಅಧಿಕಾರಿ ಕೆ.ಆರ್.ಬಿಂದು ಇವರ ಮೊ.ಸಂ.9611720320 ಅನ್ನು ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕಿ ಸೌಮ್ಯ ಪೊನ್ನಪ್ಪ ತಿಳಿಸಿದ್ದಾರೆ.



ಪ್ರತಿನಿತ್ಯ ತಮಿಳುನಾಡಿಗೆ 5 ಸಾವಿರ ಕ್ಯೂಸೆಕ್ ನೀರು

ಕೆಆರ್‌ಎಸ್ ಬಳಿ ರೈತರ ಪ್ರತಿಭಟನೆ

ಕೈಗೆ ಕಪ್ಪುಪಟ್ಟಿ ಕಟ್ಟಿಕೊಂಡು, ಬಾಯಿ ಬಡಿದುಕೊಂಡು ಆಕ್ರೋಶ

ಶ್ರೀರಂಗಪಟ್ಟಣ, ಆ.29– ತಮಿಳುನಾಡಿಗೆ ಪ್ರತಿನಿತ್ಯ ಐದು ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚಿಸಿರುವುದನ್ನು ವಿರೋಧಿಸಿ ಕೃಷ್ಣರಾಜಸಾಗರದ ಬಳಿ ರೈತರು ಕೈಗೆ ಕಪ್ಪುಪಟ್ಟಿ ಕಟ್ಟಿಕೊಂಡು ಪ್ರತಿಭಟಿಸಿದರು.

ರೈತ ಮುಖಂಡ ಕೆ.ಎಸ್.ನಂಜುಂಡೇಗೌಡ, ಭೂಮಿತಾಯಿ ಹೋರಾಟ ಸಮಿತಿ ಅಧ್ಯಕ್ಷ ಕೃಷ್ಣೇಗೌಡ ನೇತೃತ್ವದಲ್ಲಿ ಜಲಾಶಯದ ಎದುರು ನೂರಾರು ರೈತರು ಬಾಯಿ ಬಡಿದುಕೊಳ್ಳುವ ಮೂಲಕ ಪ್ರತಿಭಟಿಸಿ ಕರ್ನಾಟಕದ ರಾಜ್ಯದ ರೈತರಿಗೆ ಆಗುತ್ತಿರುವ ನಿರಂತರ ಅನ್ಯಾಯ ಸಹಿಸಲು ಅಸಾಧ್ಯ ಎಂದರು.

ತಮಿಳುನಾಡಿಗೆ 15 ದಿನಗಳವರೆಗೆ ಪ್ರತಿದಿನ 5000 ಕ್ಯೂಸೆಕ್ ನೀರು ಬಿಡುಗಡೆ ಮಾಡಬೇಕೆಂಬ ಆದೇಶ ಅವೈಜ್ಞಾನಿಕ ನಿರ್ಣಯವಾಗಿದೆ. ರಾಜ್ಯದಲ್ಲಿ ಬರಗಾಲದ ಸನ್ನಿವೇಶ ಸೃಷ್ಟಿಯಾಗಿ, ಕುಡಿಯುವ ನೀರಿಗೆ ಹಾಹಾಕಾರ ಎದುರಾಗಿದ್ದರೂ ತಮಿಳುನಾಡಿಗೆ ನೀರು ಬಿಡಬೇಕೆಂದು ಹೇಳಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾವೇರಿ ನೀರು ನಿರ್ವಹಣಾ ಮಂಡಳಿ ಹಾಗೂ ಇಲ್ಲಿನ ವಾಸ್ತವತೆಯನ್ನು ನ್ಯಾಯಾಲಯ ಮತ್ತು ಸಮಿತಿಗೆ ಮನದಟ್ಟು ಮಾಡಿಕೊಡದ ರಾಜ್ಯ ಸರ್ಕಾರ ರೈತರ ಬದುಕಿನ ಜೊತೆ ಚೆಲ್ಲಾಟವಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹೆದ್ದಾರಿ ತಡೆ: ತಮಿಳುನಾಡಿಗೆ ನೀರು ಬಿಡುಗಡೆ ಮಾಡಬೇಕೆಂಬ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸೂಚನೆ ವಿರೋಧಿಸಿ ರೈತರು ಬೆಂಗಳೂರು–ಮೈಸೂರು ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ಪಟ್ಟಣದ ಕುವೆಂಪು ವೃತ್ತದಲ್ಲಿ ರೈತಸಂಘ ಮತ್ತು ಕನ್ನಡಪರ ಸಂಘಟನೆಗಳ ಆಶ್ರಯದಲ್ಲಿ ರೈತರು ವಾಹನ ಸಂಚಾರಕ್ಕೆ ಅಡ್ಡಿಪಡಿಸಿದರು. ಕಾವೇರಿ ನೀರು ನಿಯಂತ್ರಣ ಮಂಡಳಿ, ಕಾವೇರಿ ನದಿ ನೀರು ಪ್ರಾಧಿಕಾರ, ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶಿಸಿದರು.

ಕೆಆರ್‌ಎಸ್ ಜಲಾಶಯದಲ್ಲಿ 113 ಅಡಿ ನೀರು ಇದ್ದಾಗ ಪ್ರತಿನಿತ್ಯ ಹತ್ತು ಸಾವಿರಕ್ಕೂ ಹೆಚ್ಚು ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಹರಿಸಲಾಗಿದೆ. ಜಲಾಶಯದಲ್ಲಿ 101 ಅಡಿ ನೀರು ಮಾತ್ರ ಉಳಿದಿದ್ದು, ಇದೀಗ ಕಾವೇರಿ ನಿಯಂತ್ರಣ ಸಮಿತಿ ಪ್ರತಿನಿತ್ಯ ಐದು ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಆದೇಶಿಸಿರುವುದು ಅವೈಜ್ಞಾನಿಕವಾಗಿದೆ. ರೈತರು ಬೆಳೆದಿರುವ ಬೆಳೆಗಳು ನೀರಿಲ್ಲದೆ ಒಣಗುತ್ತಿವೆ. ಹೊಸ ಬೆಳೆ ಹಾಕಲು ಸಾಧ್ಯವಾಗುತ್ತಿಲ್ಲ. ಕಟ್ಟು ಪದ್ಧತಿಯಲ್ಲಿ ನೀರು ಬಿಡುವುದಾಗಿ ಹೇಳಿದ ನೀರಾವರಿ ಇಲಾಖೆ, ರೈತರ ಬೆಳೆ ರಕ್ಷಣೆಗೆ ಮುಂದಾಗಿಲ್ಲ. ಜನ ಜಾನುವಾರುಗಳಿಗೂ ನೀರಿಲ್ಲದ ಪರಿಸ್ಥಿತಿ ಎದುರಾಗಿದೆ ಎಂದು ಹೇಳಿದರು.

ಪ್ರಾಧಿಕಾರ ಯಾರೇ ಆದೇಶ ಹೊರಡಿಸಿದರೂ ತಮಿಳುನಾಡಿಗೆ ನೀರು ಹರಿಸಬಾರದು ಎಂದು ಪ್ರತಿಭಟನಾಕಾರರು ಎಚ್ಚರಿಸಿದರು. ಮುಖಂಡರಾದ ಪಿ.ಆರ್.ರಮೇಶ್, ಶಂಕರ್ ಬಾಬು, ಪಾಂಡು, ಕೆಂಪೇಗೌಡ ಸೇರಿದಂತೆ ಹಲವು ಮಂದಿ ಭಾಗವಹಿಸಿದ್ದರು.

ಮಂಡ್ಯ ಜಿಲ್ಲೆ ಬರಪೀಡಿತ ಪ್ರದೇಶವೆಂದು ಘೋಷಿಸಲು ರೈತಸಂಘ ಆಗ್ರಹ



ಮಂಡ್ಯ, ಆ.29– ಜಿಲ್ಲೆಯ ಜೀವನಾಡಿ ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ ನಿರಂತರ ನೀರು ಹರಿಸಿದ ಪರಿಣಾಮ ಬೆಳೆಗಳಿಗೆ ನೀರಿನ ಕೊರತೆ ಎದುರಾಗಿ ರೈತರು ಸಂಕಷ್ಟದಲ್ಲಿದ್ದು, ಮಂಡ್ಯ ಜಿಲ್ಲೆಯನ್ನು ಬರಪೀಡಿತ ಪ್ರದೇಶ ಎಂದು ಘೋಷಿಸುವಂತೆ ಕರ್ನಾಟಕ ರಾಜ್ಯ ರೈತಸಂಘದ ಕಾರ್ಯಕರ್ತರು (ಮೂಲ ಸಂಘಟನೆ) ಮನವಿ ಮಾಡಿದರು.

ಸಂಘದ ಮುಖಂಡರು ಜಿಲ್ಲಾಧಿಕಾರಿ ಡಾ.ಕುಮಾರ್ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿ, ತಮಿಳುನಾಡಿಗೆ ಪ್ರತಿನಿತ್ಯ ಐದು ಸಾವಿರ ಕ್ಯೂಸೆಕ್ ನೀರು ಹರಿಸಬೇಕೆಂದು ಕರ್ನಾಟಕ ರಾಜ್ಯಕ್ಕೆ ಸೂಚಿಸಿರುವ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಅವೈಜ್ಞಾನಿಕವಾಗಿದೆ ಎಂದು ತಿಳಿಸಿದರು. ಕೆಆರ್‌ಎಸ್ ಅಣೆಕಟ್ಟೆಯಲ್ಲಿ 113 ಅಡಿ ನೀರು ಶೇಖರಣೆಯಾಗಿದ್ದಾಗ ನೀರಾವರಿ ಸಲಹೆ ಸಮಿತಿಯ ತೀರ್ಮಾನದಂತೆ ಕಾವೇರಿ ಜಲಾನಯನ ಪ್ರದೇಶದ ನಾಲೆಗಳಿಗೆ ಕಟ್ಟು ಪದ್ಧತಿಯಲ್ಲಿ ಬೆಳೆಗಳಿಗೆ ನೀರು ಹರಿಸುವ ಬಗ್ಗೆ ತೀರ್ಮಾನಿಸಲಾಗಿತ್ತು ಆದರೆ ರಾಜ್ಯ ಸರ್ಕಾರ ಕಾವೇರಿ ಪ್ರಾಧಿಕಾರದ ಆದೇಶದಂತೆ ತಮಿಳುನಾಡಿಗೆ ದಿನಕ್ಕೆ 15 ಸಾವಿರ ಕ್ಯುಸೆಕ್ ನೀರನ್ನು ಹರಿಸಿದ ಪರಿಣಾಮ ಜಲಾಶಯದಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದೆ ಇದೀಗ. ಮತ್ತೆ ಪ್ರತಿದಿನ 5 ಸಾವಿರ ಕ್ಯುಸೆಕ್ ನೀರನ್ನು ತಮಿಳುನಾಡಿಗೆ ಹರಿಸಬೇಕು ಎಂದು ಹೇಳಿರುವುದು ಅವೈಜ್ಞಾನಿಕ. ಇದರ ಪರಿಣಾಮ ಕಾವೇರಿ ಅಚ್ಚುಕಟ್ಟು ಪ್ರದೇಶದ ಬೆಳೆಗಳಿಗೆ ನೀರಿನ ಕೊರತೆ ಉಂಟಾಗಿ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದರು.

ಇಂತಹ ಸಂಕಷ್ಟ ಸನ್ನಿವೇಶದಲ್ಲಿ ಜಿಲ್ಲೆಯ ಮಳೆ ಆಶ್ರಿತ ಮತ್ತು ನೀರಾವರಿ ಪ್ರದೇಶದ ಸಮಾನಾಂತರ ತೀರ್ಮಾನದ ಪ್ರಕಾರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಿಸಬೇಕೆಂದು ಒತ್ತಾಯಿಸಿದರು. ಅದೇ ರೀತಿ ಬೆಳೆಗಳಿಗೆ ಸೂಕ್ತ ಪರಿಹಾರ ಘೋಷಿಸಬೇಕೆಂದು ಮನವಿ ಮಾಡಿದರು.

ಸಂಘದ ಅಧ್ಯಕ್ಷ ಇಂಡುವಾಳು ಚಂದ್ರಶೇಖರ್, ಗೌರವಾಧ್ಯಕ್ಷ ಬೋರಾಪುರ ಶಂಕರೇಗೌಡ, ಪ್ರಧಾನ ಕಾರ್ಯದರ್ಶಿ ಎಸ್.ಮಂಜೇಶ್‌ಗೌಡ, ಮುಖಂಡರಾದ ರಾಮಲಿಂಗೇಗೌಡ, ವೈ.ಕೆ.ರಾಮೇಗೌಡ, ಬೋರಲಿಂಗೇಗೌಡ, ಸೋ.ಸಿ.ಪ್ರಕಾಶ್, ಇಂಡುವಾಳು ಬಸವರಾಜ್ ಇತರರಿದ್ದರು.

ಒಂದು ಹನಿ ನೀರನ್ನೂ ತಮಿಳುನಾಡಿಗೆ ಬಿಡಬಾರದು

ಮಂಡ್ಯ, ಆ.29– ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನಿತ್ಯ ತಮಿಳುನಾಡಿಗೆ ಐದು ಸಾವಿರ ಕ್ಯೂಸೆಕ್ ನೀರನ್ನೂ ಬಿಡಬೇಕೆಂದು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿದ್ದು, ಸರ್ಕಾರ ಒಂದು ಹನಿ ನೀರನ್ನು ತಮಿಳುನಾಡಿಗೆ ಬಿಡಬಾರದೆಂದು ಶಾಸಕ ಗಣಿಗ ರವಿಕುಮಾರ್ ಆಗ್ರಹಿಸಿದರು.

ಮಂಗಳವಾರ ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅದೇ ನೀರನ್ನು ನಮ್ಮ ರೈತರ ಅನುಕೂಲಕ್ಕಾಗಿ ಹೊಲ, ಗದ್ದೆಗಳಿಗೆ ಬಿಟ್ಟರೆ, ಕೃಷಿ ಮಾಡಲು ಹಾಗೂ ಜನ, ಜಾನುವಾರುಗಳು ಕುಡಿಯಲು ಅನುಕೂಲವಾಗುತ್ತದೆ. ನಿತ್ಯ ನೂರಾರು ಜನ ನೀರು ಬಿಡಿಸುವಂತೆ ಮನವಿ ಮಾಡಲು ಕರೆ ಮಾಡುತ್ತಾರೆ. ನಾವು ಇಂಜಿನಿಯರ್‌ಗಳಿಗೆ ಮಾತನಾಡುವುದೇ ಆಗಿದ್ದು, ನಮ್ಮ ಜನರ ಕಷ್ಟವನ್ನು ಅರ್ಥ ಮಾಡಿಕೊಳ್ಳಿ ಎಂದು ಮನವಿ ಮಾಡಿದರು.

ನಮ್ಮ ಜನರೇ ನೀರಿಗಾಗಿ ಒತ್ತಾಯ ಮಾಡುತ್ತಿದ್ದಾರೆ. ಈಗಿರುವಾಗ ತಮಿಳುನಾಡಿಗೆ ನೀರು ಬಿಡುಗಡೆ ಮಾಡಲು ಹೇಗೆ ಸಾಧ್ಯ. ಸಿಎಂ ಹಾಗೂ ಡಿಸಿಎಂ ತಮಿಳುನಾಡು ಸರ್ಕಾರದ ಮನವಿಯನ್ನು ತಿರಸ್ಕರಿಸಬೇಕು. ಮಡಿಕೇರಿಯಲ್ಲಿ ಮಳೆಯಾದಾಗ ಕೆಆರ್‌ಎಸ್ ಭರ್ತಿಯಾದ ಸಂದರ್ಭದಲ್ಲೆಲ್ಲಾ ಹೆಚ್ಚುವರಿ ನೀರು ತಮಿಳುನಾಡಿಗೆ ಹೋಗಿದೆ. ಈಗ ನಮ್ಮಲ್ಲಿ ನೀರಿಲ್ಲದಿದ್ದರೂ ನೀರು ಕೊಡಿ ಎಂದು ತಮಿಳುನಾಡು ಒತ್ತಾಯಿಸಿದೆ. ಅದೇ ರೀತಿ ಅವರ ಮೆಟ್ಟೂರು ಡ್ಯಾಂನಲ್ಲಿ ನೀರಿದೆಯಾ ಇಲ್ಲವೋ ಎಂಬುದನ್ನು ಪರೀಕ್ಷಿಸಲು ನಮಗೂ ಅಲ್ಲಿನ ಸರ್ಕಾರ ಅನುವು ಮಾಡಿಕೊಡಲಿ ಎಂದು ಆಗ್ರಹಿಸಿದರು.

ಹರಿಹರಪುರ ಗ್ರಾಪಂ ಉಪಾಧ್ಯಕ್ಷರಿಗೆ ಮಾಜಿ ಸಚಿವರಿಂದ ಸನ್ಮಾನ



ಕೆ.ಆರ್.ಪೇಟೆ, ಆ.29– ತಾಲೂಕಿನ ಹರಿಹರಪುರ ಗ್ರಾಮ ಪಂಚಾಯಿತಿಯ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾದ ಬಿಜೆಪಿ ಮುಖಂಡ ಬಲರಾಮೇಗೌಡ ಅವರನ್ನು ಮಾಜಿ ಸಚಿವ ಡಾ.ಕೆ.ಸಿ.ನಾರಾಯಣಗೌಡ ಅಭಿನಂದಿಸಿದರು.

ಬಳಿಕ ಮಾತನಾಡಿದ ಅವರು, ಗ್ರಾಮ ಪಂಚಾಯಿತಿಗಳು ಸ್ಥಳೀಯ ಸರ್ಕಾರಗಳಾಗಿವೆ. ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿಗಳಿಗಿಂತ ಹೆಚ್ಚು ಅಧಿಕಾರವನ್ನು ಗ್ರಾಮ ಪಂಚಾಯಿತಿಗಳು ಹೊಂದಿವೆ. ಹಳ್ಳಿಗಳಿಗೆ ಬೇಕಾದ ಮೂಲ ಸೌಕರ್ಯಗಳಾದ ಕುಡಿಯುವ ನೀರು, ಬೀದಿದೀಪ, ಚರಂಡಿ ವ್ಯವಸ್ಥೆ ಕಲ್ಪಿಸಿಕೊಡಲು ಗ್ರಾಮ ಪಂಚಾಯಿತಿ ಸದಸ್ಯರು ಪ್ರಥಮ ಆದ್ಯತೆ ನೀಡಿ ಕೆಲಸ ಮಾಡಬೇಕು ಎಂದರು. ಜೊತೆಗೆ ನರೇಗಾ ಯೋಜನೆಯನ್ನು ಸದ್ಬಳಕೆ ಮಾಡಿಕೊಂಡು ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಕಾಮಗಾರಿಗಳನ್ನು ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಹರಿಹರಪುರ ಗ್ರಾಮ ಪಂಚಾಯಿತಿಯ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ನಮ್ಮ ಬಿಜೆಪಿ ಪಕ್ಷದ ಹಿರಿಯ ಮುಖಂಡರಾದ ಬಲರಾಮೇಗೌಡ ಅವರು ತಮ್ಮ ಅಧಿಕಾರದ ಅವಧಿಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಬಿ.ಸಿ.ಹರ್ಷ, ಅಭಿ, ಯಳವಯ್ಯ, ಸೋಮೇಗೌಡ, ಗಣೇಶ್‌ಗೌಡ, ಜಯವಾಣಿ,ಸ್ವಾಮಿ, ದೇವಮ್ಮ, ರತಿ, ಶ್ರೀಧರ್, ಆಶಾ, ಸರೋಜಮ್ಮ ಮತ್ತಿತರರು ಅಭಿನಂದಿಸಿದರು.

ಕೆಂಪೇಗೌಡರ ಆಡಳಿತ ವೈಖರಿ ನಮಗೆಲ್ಲ ಮಾದರಿ



ಚಾಮರಾಜನಗರ, ಆ.29– ನಾಡಪ್ರಭು ಕೆಂಪೇಗೌಡರ ಆಡಳಿತ ವೈಖರಿ ನಮಗೆಲ್ಲ ಮಾದರಿಯಾಗಿದೆ ಎಂದು ಶಾಸಕ ಸಿ. ಪುಟ್ಟರಂಗಶೆಟ್ಟಿ ತಿಳಿಸಿದ್ದಾರೆ.

ನಗರದ ವರನಟ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಅಖಿಲ ಕರ್ನಾಟಕ ಕನ್ನಡ ಮಹಾಸಭಾ ರಾಜ್ಯ ಘಟಕದ ವತಿಯಿಂದ ಏರ್ಪಡಿಸಲಾಗಿದ್ದ ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತ್ಯುತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾಮಂತ ದೊರೆಯಾಗಿದ್ದ ನಾಡುಪ್ರಭು ಕೆಂಪೇಗೌಡರು ಮಾಡಿರುವ ಅಭಿವೃದ್ಧಿ ಕಾರ್ಯಗಳು ಶಾಶ್ವತವಾಗಿ ಉಳಿದಿವೆ. ಅವರ ದೂರದೃಷ್ಟಿಯ ಫಲವಾಗಿ ಬೆಂಗಳೂರು ಬೃಹತ್ ನಗರವಾಗಿ ಬೆಳೆಯಲು ಕಾರಣವಾಗಿದೆ. ಸರ್ವ ಸಮುದಾಯಕ್ಕೂ ಕಸುಬಿನ ಆಧಾರಿತವಾಗಿ ಪೇಟೆಗಳನ್ನು ನಿರ್ಮಾಣ ಮಾಡಿಕೊಟ್ಟಿದ್ದಾರೆ. ಅವರನ್ನು ಸ್ಮರಣೆ ಮಾಡಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.


ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಶಾಸಕ ಆರ್.ನರೇಂದ್ರ ಮಾತನಾಡಿ, ಬೆಂಗಳೂರಿನ ನಿರ್ಮಾತೃ ಕೆಂಪೇಗೌಡ ಅವರು 62 ಕಸುಬು ಮಾಡುವಂತರನ್ನು ಕರೆ ತಂದು ಅನೇಕ ಪೇಟೆಗಳನ್ನು ಸ್ಥಾಪನೆ ಮಾಡಿದರು. ನೂರಾರು ಕೆರೆ, ದೇವಾಲಯ ನಿರ್ಮಾಣ ಮಾಡಿದರು. ಸಮಾಜದಲ್ಲಿದ್ದ ಅನಿಷ್ಟ ಪದ್ಧತಿ ರದ್ದು ಮಾಡಿದರು ಎಂದರು.

ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ ಮಾತನಾಡಿ, ನಾಡುಪ್ರಭು ಕೆಂಪೇಗೌಡರು ಐತಿಹಾಸಿಕ ನೆಲೆಗಟ್ಟಿನಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ನಾಡಿನ ಒಳಿತು, ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನಾಯಕರು. ಅವರು ನಿರ್ಮಾಣ ಮಾಡಿರುವ ಬೆಂಗಳೂರು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡು ಪ್ರಮುಖ ನಗರವಾಗಿ ರೂಪುಗೊಂಡು ಉತ್ತಮ ಆಡಳಿತ ಕೇಂದ್ರವಾಗಿದೆ ಎಂದರು.

ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಪ್ರಾಸ್ತಾವಿಕವಾಗಿ ಮಾತನಾಡಿ, ದೇಶದ ಯಾವುದೇ ಮೂಲೆಯಲ್ಲಿ ಕನ್ನಡಕ್ಕೆ ಧಕ್ಕೆಯಾದರೆ ಮೊದಲು ಹೋರಾಟ ಮಾಡುವುದು ಚಾಮರಾಜನಗರದಿಂದಲೇ. ಗಡಿಜಿಲ್ಲೆಯಲ್ಲಿ ಕನ್ನಡ ಗಟ್ಟಿಯಾಗಿರಲು ಕನ್ನಡಪರ ಹೋರಾಟವೇ ಕಾರಣವಾಗಿದೆ. ಎಲ್ಲ ರಾಷ್ಟ್ರನಾಯಕರ ಜಯಂತಿಗಳನ್ನು ಆಚರಿಸಿಕೊಂಡು ಬರಲಾಗಿದೆ. ನಾಡಪ್ರಭು ಕೆಂಪೇಗೌಡರ ಹೆಸರು ವಿಶ್ವದಲ್ಲೇ ರಾರಾಜಿಸುತ್ತಿದೆ. ಅವರ ನಿರ್ಮಿಸಿದ ಬೆಂಗಳೂರು ವಿಶ್ವ ಮಟ್ಟದಲ್ಲೇ ಹೆಸರು ಮಾಡಿದೆ ಎಂದರು. ಸನ್ಮಾನ ಕಾರ್ಯಕ್ರಮದಲ್ಲಿ ಸಾಧಕರನ್ನು ಸನ್ಮಾನಿಸಲಾಯಿತು ಶಾಸಕ ಸಿ.ಎನ್. ಮಂಚೇಗೌಡ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿ.ಪಂ.ಉಪ ಕಾರ್ಯದರ್ಶಿ ಸರಸ್ವತಿ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಡಾ.ಎಂ.ಬಿ. ಮಂಚೇಗೌಡ, ಸಮಾಜ ಸೇವಕ ಎ.ಕುಮಾರ್, ಮಹಾಸಭಾ ಗೌರವಾಧ್ಯಕ್ಷ ಶಾ.ಮುರಳಿ, ಪ್ರಧಾನ ಕಾರ್ಯದರ್ಶಿ ಚಾ.ವೆಂ.ರಾಜಗೋಪಾಲ್, ಸಹ ಕಾರ್ಯದರ್ಶಿ ಪಣ್ಯದಹುಂಡಿ ರಾಜು, ಕರಿಯನಕಟ್ಟೆ ಚಿನ್ನುಮುತ್ತು, ಸುರೇಶ್ ಗೌಡ, ನಿಜಧ್ವನಿಗೋವಿಂದರಾಜು, ಚಿಕ್ಕತಾಯಮ್ಮ, ದೇವರಾಜು, ಗ್ರಾ.ಪಂ.ಸದಸ್ಯ ಚಿನ್ನಸ್ವಾಮಿ, ಮಹದೇವ, ಮಹೇಶ್‌ಗೌಡ, ನಾಗೇಂದ್ರ, ಬೆಳ್ಳೇಗೌಡ, ಶಿವರಾಜೇಗೌಡ, ಚಾ.ಹ.ರಾಮು, ಶಿವಣ್ಣ, ಚಿಕ್ಕಲಿಂಗಗೌಡ, ಬೋರೇಗೌಡ, ತೇಜಸ್ ಲೋಕೇಶ್, ರವಿಚಂದ್ರಪ್ರಸಾದ್ ಕಹಳೆ, ಸುಗಂಧರಾಜು, ಲಿಂಗರಾಜು ಇತರರು ಹಾಜರಿದ್ದರು.

ಶಿವಮಾದಮ್ಮ ನಿಧನ



ಯಳಂದೂರು, ಆ.29– ತಾಲೂಕಿನ ವೈ.ಕೆ.ಮೋಳೆ ಗ್ರಾಮದ ಉಪ್ಪಾರ ಜನಾಂಗದ ತಾಲೂಕು ಬೋರ್ಡ್ ಮಾಜಿ ಸದಸ್ಯ ಲೇ ಮೋಳೆ ಹಾರುವ ಶೆಟ್ಟಿಯ ವರ ಧರ್ಮಪತ್ನಿ ಶಿವಮಾದಮ್ಮ (82) ಮಂಗಳವಾರ ಬೆಳಗ್ಗೆ ನಿಧನರಾಗಿದ್ದಾರೆ. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸ್ವಗ್ರಾಮ ವೈ.ಕೆ.ಮೋಳೆ ಅವರ ಜಮೀನಿನಲ್ಲಿ ಮಂಗಳವಾರ ನಡೆಯಿತು. ಮೃತರಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಸೇರಿದಂತೆ ಅನೇಕರು ಸಂತಾಪ ಸೂಚಿಸಿದ್ದಾರೆ.

ಕರ್ತವ್ಯ ಲೋಪವೆಸಗಿದ್ದ ಇಬ್ಬರು ಪೇದೆಗಳು ಅಮಾನತು

ಚಾಮರಾಜನಗರ, ಆ.29– ಕರ್ತವ್ಯ ಲೋಪವೆಸಗಿದ್ದ ಆರೋಪದ ಮೇರೆಗೆ ಚಾಮರಾಜನಗರ ಗ್ರಾಮಾಂತರ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಪೇದೆಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅವರು ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಪೊಲೀಸ್ ಪೇದೆಗಳಾದ ಶಿವರಾಜು ಹಾಗೂ ಮಹೇಶ್ ಕುಮಾರ್ ಅಮಾನತುಗೊಂಡವರು.

ಇವರಿಬ್ಬರ ಮೇಲೆ ಕರಿಕಲ್ಲು ಕ್ವಾರೆ ಮಾಲೀಕ ರಿಂದ ಹಣಕ್ಕೆ ಬೇಡಿಕೆ ಇಟ್ಟ ಆರೋಪವಿತ್ತು. ತನಿಖೆ ಮಾಡಿದಾಗ ಇವರಿಬ್ಬರ ಮೇಲಿನ ಆರೋಪ ಮೇಲ್ನೋಟಕ್ಕೆ ಸಾಬೀತಾದ ಕಾರಣ ಅಮಾನತುಗೊಳಿಸಲಾಗಿದೆ ಎಂದು ಎಸ್‌ಪಿ ಪದ್ಮಿನಿ ಸಾಹು ತಿಳಿಸಿದ್ದಾರೆ.

ಚಾಮರಾಜನಗರ ತಾಲೂಕಿನ ಬೊಕ್ಕೆಪುರ ಗ್ರಾಮದ ಬಳಿಯ ಕರಿಕಲ್ಲು ಕ್ವಾರೆಯ ಮಾಲೀಕರಿಂದ ಈ ಇಬ್ಬರು ಪೇದೆಗಳು ಹಣದ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಇದರಿಂದ ಬೇಸತ್ತು ಕ್ವಾರೆ ಮಾಲೀಕ ಈ ಬಗ್ಗೆ ಐಜಿ ಹಾಗೂ ಎಸ್‌ಪಿ ಅವರಿಗೆ ದೂರು ನೀಡಿದ್ದರು ಎಂದು ತಿಳಿದು ಬಂದಿದೆ. ತನಿಖೆ ಮಾಡಿದಾಗ ಆರೋಪ ಸಾಬೀತಾದ ಕಾರಣ ಅಮಾನತುಗೊಳಿಸಲಾಗಿದೆ.

ಮಾದಪ್ಪ ಸನ್ನಿಧಿಯಲ್ಲಿ ಸಾಮೂಹಿಕ ವಿವಾಹ ಪದೇ ಪದೆ ಮುಂದೂಡಿಕೆ

ಬೇಸರಗೊಂಡ ಏಳು ಜೋಡಿಗಳು ಸ್ವಂತ ಹಣದಿಂದಲೇ ವಿವಾಹ



ಚಾಮರಾಜನಗರ, ಆ.29– ಜಿಲ್ಲೆಯ ಪ್ರಸಿದ್ಧ ಯಾತ್ರಾ ಕ್ಷೇತ್ರವಾದ ಶ್ರೀಮಲೆ ಮಹದೇಶ್ವಸ್ವಾಮಿ ಬೆಟ್ಟದ ಮಾದಪ್ಪನ ಸನ್ನಿಧಿಯಲ್ಲಿ ಸಾಮೂಹಿಕ ವಿವಾಹಕ್ಕೆ ಮುಹೂರ್ತ ಕೂಡಿ ಬರದೇ ನಿಗದಿಯಾಗಿದ್ದ ದಿನಾಂಕ ಪದೇ–ಪದೆ ಮುಂದೂಡಿಕೆ ಆಗುತ್ತಿರುವುದರಿಂದ ಭಕ್ತರಲ್ಲಿ ನಿರಾಶೆ ಮೂಡಿಸಿದೆ.

ಬೆಟ್ಟದಲ್ಲಿ ಸಾಮೂಹಿಕ ವಿವಾಹಕ್ಕೆ ಈಗಾಗಲೇ ನಿಗದಿಯಾಗಿದ್ದ ಎರಡು ದಿನಾಂಕಗಳು ಮುಂದೂಡಿಕೆಯಾಗಿರುವುದರಿಂದ ಬೇಸತ್ತ 7 ಜೋಡಿಗಳು ಸ್ವಂತ ಹಣದಲ್ಲಿ ವಿವಾಹ ಮಾಡಿಕೊಂಡಿರುವುದಾಗಿ ತಿಳಿದು ಬಂದಿದೆ.

ಬೆಟ್ಟದಲ್ಲಿ ಸಾಮೂಹಿಕ ವಿವಾಹಕ್ಕೆ ಮಲೆ ಮಹದೇಶ್ವರಸ್ವಾಮಿ ಅಭಿವೃದ್ಧಿ ಪ್ರಾಧಿಕಾರವು ಮೊದಲು ಆ. 23ರಂದು ದಿನಾಂಕ ನಿಗದಿ ಮಾಡಿತ್ತು. ನಂತರ ಈ ದಿನಾಂಕ ಮುಂದೂಡಿಕೆ ಮಾಡಿ ಆ. 28 ರಂದು ನಿಗದಿಗೊಳಿಸಿತ್ತು ಆದರೆ ಈಗ ಆ.28ರಂದು ನಿಗದಿಯಾಗಿದ್ದ ದಿನಾಂಕವನ್ನು ಮತ್ತೆ ಮುಂದೂಡಿಕೆ ಮಾಡಿದೆ. ಇದು ಭಕ್ತರ ಬೇಸರಕ್ಕೆ ಕಾರಣವಾಗಿದೆ. ಹೀಗಾಗಿ ಕ್ಷೇತ್ರದಲ್ಲಿರುವ ಸಾಲೂರು ಮಠದಲ್ಲಿ 7 ಜೋಡಿಗಳು ಹಸೆಮಣೆ ಏರಿ ನೂತನ ಜೀವನಕ್ಕೆ ಕಾಲಿಟ್ಟಿದ್ದಾರೆ.

67 ಜೋಡಿ ನೋಂದಣಿ: ಮಾದಪ್ಪನ ಸನ್ನಿಧಿಯಲ್ಲಿ ವಿವಾಹವಾದರೆ ಶುಭ ಎಂಬ ನಂಬಿಕೆಯಿದೆ. ಈ ಹಿನ್ನೆಲೆ ಈಗಾಗಲೇ ಜಿಲ್ಲೆ ಸೇರಿದಂತೆ ಹೊರ ಜಿಲ್ಲೆಗಳಿಂದ 67 ಜೋಡಿಗಳು ಸಾಮೂಹಿಕ ವಿವಾಹಕ್ಕೆ ನೋಂದಣಿ ಮಾಡಿಕೊಂಡಿದ್ದರು. ಆದರೆ, ಈಗ ಎರಡು ಬಾರಿ ವಿವಾಹ ದಿನಾಂಕ ಮುಂದೂಡಿಕೆ ಆಗಿದೆ. ಇದರಿಂದ ಬೇಸರಗೊಂಡು ಸಾಲೂರು ಮಠದಲ್ಲಿ ಸ್ವಂತ ದುಡ್ಡಿನಲ್ಲಿ 7 ಜೋಡಿಗಳು ಸಪ್ತಪದಿ ತುಳಿದಿದ್ದಾರೆ.

ಹಸೆಮಣೆ ಏರಿದ 7 ಜೋಡಿಗಳು: ವಿವಾಹ ನಿಶ್ಚಯವಾಗಿದ್ದ ಬಹುತೇಕ ಬಡ ವರ್ಗದ ವಧು–ವರರು ಮಲೆಮಹದೇಶ್ವರ ಬೆಟ್ಟದಲ್ಲಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಡೆಯುವ ಉಚಿತ ಸಾಮೂಹಿಕ ವಿವಾಹದಲ್ಲಿ ಮದುವೆಯಾಗಲು ಅರ್ಜಿ ಸಲ್ಲಿಸಿದ್ದರು. ಆದರೆ, 2 ಬಾರಿ ವಿವಾಹ ಮುಂದೂಡಿಕೆಯಾಗಿದೆ. ಈ ಹಿನ್ನೆಲೆ ಚಾಮರಾಜನಗರದ ಜಗದೀಶ್–ನಂಜನಗೂಡಿನ ಕಾವ್ಯಶ್ರೀ, ಪಿ.ಜಿ. ಪಾಳ್ಯದ ಮಹೇಶ್ ಕುಮಾರ್– ಮೈಸೂರಿನ ಹೊರಳವಾಡಿಯ ರಮ್ಯ, ತಾಳವಾಡಿಯ ಉದಯ ಕುಮಾರ್ ಇದೇ ಗ್ರಾಮದ ಸ್ನೇಹ, ನರಸೀಪುರದ ದಿನೇಶ್– ಮೈಸೂರಿನ ನಿರ್ಮಲ, ನಂಜನಗೂಡು ಹಳೇಪುರದ ಮಹೇಂದ್ರ–ಚಾಮರಾಜನಗರದ ಅರಳೀಪುರ ಗ್ರಾಮದ ಮಂಗಳಮ್ಮ, ಮೈಸೂರಿನ ಸಂಜಯ್– ಸೌಭಾಗ್ಯ ಹಾಗೂ ಚಾಮರಾಜನಗರದ ರವಿ – ಸೌಮ್ಯ ಜೋಡಿ ಸಾಲೂರು ಬೃಹನ್ಮಠದಲ್ಲಿ ನೂತನ ಜೀವನಕ್ಕೆ ಕಾಲಿಟ್ಟಿದ್ದಾರೆ.

ಸಹಕರಿಸಲು ಭಕ್ತರಲ್ಲಿ ಮನವಿ

ಸಾಮೂಹಿಕ ವಿವಾಹವನ್ನು ಕೆಲವು ಕಾರಣಗಳಿಂದ ಮುಂದೂಡ ಲಾಯಿತು. ಇನ್ನು ಮುಂದೆ ವಿವಾಹ ದಿನಾಂಕ ಮುಂದೂಡಿಕೆ ಮಾಡುವುದಿಲ್ಲ. ಭಕ್ತರು ಸಹಕರಿಸಬೇಕು ಎಂದು ಮಲೆ ಮಹದೇಶ್ವರ ಬೆಟ್ಟದ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಸರಸ್ವತಿ ತಿಳಿಸಿದರು. ಕೆಲವರ ದಾಖಲಾತಿ ಸರಿಪಡಿಸುವಿಕೆ ಹಾಗೂ ಉಸ್ತುವಾರಿ ಸಚಿವರ ಸಮಯಕ್ಕಾಗಿ ಕಾಯುತ್ತಿದ್ದೇವೆ. ಸೆ. 3 ಅಥವಾ 6ರಂದು ಸಚಿವರು ಬರುವುದಾಗಿ ಹೇಳಿದ್ದಾರೆ. ಈ ಎರಡು ದಿನಗಳಲ್ಲಿ ಯಾವುದಾದರೂ ಒಂದು ದಿನ ನಿಗದಿ ಮಾಡಿ ಸಾಮೂಹಿಕ ವಿವಾಹ ಖಂಡಿತ ನೆರವೇರು ತ್ತದೆ ಎಂದು ಮಾಹಿತಿ ನೀಡಿದ್ದಾರೆ. ಈಗಾಗಲೇ ನೋಂದಣಿ ಮಾಡಿಸಿಕೊಂಡಿರುವ ಭಕ್ತರು ಪ್ರಾಧಿಕಾರದೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

ವಿದ್ಯುತ್ ವ್ಯತ್ಯಯ

ಮೈಸೂರು,ಆ.29– ಆ.31ರಂದು ಬೆಳಿಗ್ಗೆ 10ರಿಂದ ಸಂಜೆ 6 ಘಂಟೆಯವರೆಗೆ ತುರ್ತು ಕಾಮಗಾರಿಯನ್ನು ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಬಂಡಿಪಾಳ್ಯ, ಹೊಸಹುಂಡಿ, ಏಳಿಗೆಹುಂಡಿ, ಗುಡುಮಾದನಹಳ್ಳಿ, ಉತ್ತನಹಳ್ಳಿ ಗ್ರಾಮ, ಆಲನಹಳ್ಳಿ ರಿಂಗ್ ರಸ್ತೆ, ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಕಾರ್ಯ ನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

ಸಾರ್ವಜನಿಕರ ಗಮನಕ್ಕಾಗಿ


ನನ್ನ ಕಕ್ಷಿದಾರರ ಇರಾದೆಯ ಮೇರೆಗೆ, ಏನೆಂದರೆ, ಮೇಲ್ಕಂಡ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಸಂಬಂಧ ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಡಿ. ಸಾಲುಂಡಿ ಗ್ರಾಮದಲ್ಲಿ ವಾಸವಾಗಿರುವ ಶ್ರೀ ಪಾಪೇಗೌಡ ರವರ ಮಗ ಸುಮಾರು 40 ವರ್ಷ ವಯಸ್ಸಿನ ಶ್ರೀ ನವೀನ್ ಕುಮಾರ್ ಶ್ರೀ ಬಸಪ್ಪರವರ ಮಗಳು ಸುಮಾರು 33 ವರ್ಷ ವಯಸ್ಸು ಹಾಗೂ ಶ್ರೀ ನವೀನ್ ಕುಮಾರ್ ಅವರ ಧರ್ಮ ಪತ್ನಿ ಶ್ರೀಮತಿ ಲಕ್ಷ್ಮೀ ಶ್ರೀ ನವೀನ್ ಕುಮಾರ್ ರವರ ಮಗ ಸುಮಾರು 14 ವರ್ಷ ವಯಸ್ಸಿನ ಕು. ಶಿವರಾಜ್.ಎನ್, ಮೈನರ್ ಗಾರ್ಡಿಯನ್ ಇವರ ಪರವಾಗಿ ಇವರ ತಂದೆ ಶ್ರೀ ನವೀನ್ ಕುಮಾರ್ ಶ್ರೀ ನವೀನ್ ಕುಮಾರ್ ರವರ 2ನೇ ಮಗ ಸುಮಾರು 12 ವರ್ಷ ವಯಸ್ಸಿನ ಕು. ಸಂತೋಷ್ ಎನ್, ಮೈನರ್ ಗಾರ್ಡಿಯನ್ ಇವರ ಪರವಾಗಿ ಇವರ ತಂದೆ ಶ್ರೀ ನವೀನ್ ಕುಮಾರ್, ರವರಿಗೂ, ನನ್ನ ಕಕ್ಷಿದಾರರಿಗೂ ಕೆಳಕಂಡ ಜಮೀನಿನ ಸಂಬಂಧ ಮಾರಾಟ ಮಾಡುವ ಸಂಬಂಧ ಒಡಂಬಡಿಕೆಯಾಗಿದ್ದು ಸದರಿ ಜಮೀನನ್ನು ನನ್ನ ಕಕ್ಷಿದಾರರು ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು ಈಗಾಗಲೇ ಆ ಸಂಬಂಧ ನನ್ನ ಕಕ್ಷಿದಾರರಿಗೆ ಕೆಲವು ದಾಖಲಾತಿಗಳನ್ನು ಹಾಜರು ಮಾಡಿದ್ದು ನನ್ನ ಕಕ್ಷಿದಾರರು ಸದರಿ ಜಮೀನನ್ನು ನೋಂದಾಯಿತ ಕ್ರಯಪತ್ರದ ಮೂಲಕ ಖರೀದಿಸಲು ತೀರ್ಮಾನಿಸಿದ್ದು ಸದರಿ ಜಮೀನಿನ ಸಂಬಂಧ ಯಾರಿಗಾದರೂ ಯಾವುದೇ ರೀತಿಯ ಹಕ್ಕು ಹಿತಾಸಕ್ತಿ ಇದ್ದಲ್ಲಿ ಸಂಬಂಧಪಟ್ಟವರು ಈ ಪತ್ರಿಕಾ ಪ್ರಕಟಣೆ ಹೊರಡಿಸಿದ 7 ದಿವಸದೊಳಗಾಗಿ ನನ್ನ ಕಕ್ಷಿದಾರರಿಗಾಗಲೀ, ನನಗಾಗಲೀ ಲಿಖಿತವಾಗಿ ಸಂಬಂಧಪಟ್ಟ ದಾಖಲಾತಿಗಳೊಡನೆ ನನ್ನ ಕೆಳಕಂಡ ವಿಳಾಸದ ಕಛೇರಿಯ ಸಮಯದಲ್ಲಿ ಹಾಜರಾಗಿ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು. ಮೇಲ್ಕಂಡ ಸಮಯದೊಳಗೆ ಯಾವುದೇ ತಕರಾರು ಬರದೇ ಇದ್ದ ಪಕ್ಷದಲ್ಲಿ ನನ್ನ ಕಕ್ಷಿದಾರರು ಕೆಳಕಂಡ ಜಮೀನಿನ ಸಂಬಂಧ ಕ್ರಯ ಪತ್ರವನ್ನು ಪಡೆದುಕೊಳ್ಳುತ್ತಾರೆ. ಮುಂದೆ ಬರುವ ತಂಟೆ ತಕರಾರುಗಳಿಗೆ ನನ್ನ ಕಕ್ಷಿದಾರರು ಬದ್ಧರಾಗಿರುವುದಿಲ್ಲ ವೆಂದು ಈ ಮೂಲಕ ತಿಳಿಯತಕ್ಕದ್ದು.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ದಾರಿಪುರ ಗ್ರಾಮದಲ್ಲಿರುವ ಸರ್ವೆ ನಂ 114/3 ರಲ್ಲಿ ಶ್ರೀಮತಿ ಲಕ್ಷ್ಮೀ ರವರ ಹೆಸರಿನಲ್ಲಿ ಖಾತೆಯಿರುವ ವಿಸ್ತೀರ್ಣ 20 ಗುಂಟೆ ಖುಷ್ಕಿ ಜಮೀನು.

ಪೂರ್ವಕ್ಕೆ : ಲಾ.ಸ. ನಂ..113 ರ ಜಮೀನು, ಪಶ್ಚಿಮಕ್ಕೆ : ಬ್ಲಾಕ್ ನಂ. 1 ರ ಜಮೀನು, ಉತ್ತರಕ್ಕೆ : ಲಾ.ಸ. ನಂ. 117 ರ ಜಮೀನು, ದಕ್ಷಿಣಕ್ಕೆ : ಲಾ.ಹಿ ನಂ. 1 ರ ಜಮೀನು

ಕಕ್ಷಿದಾರರ ಪರ ವಕೀಲರು, ಸಹಿ/- ಶ್ರೀ ಪಾಲಾಕ್ಷ ವಕೀಲರು, ನಂ. 645, ಮೊದಲನೇ ಮಹಡಿ, ನಾರಾಯಣ ಶಾಸ್ತ್ರಿ ರಸ್ತೆ, ಶಾಂತಲ ಚಿತ್ರ ಮಂದಿರ ಹತ್ತಿರ, ಮೈಸೂರು
ಮೊ: 9448075718

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀಮತಿ ಪುಟ್ಟನಿಂಗಮ್ಮ

ಶ್ರೀ ಮೂಗಾಟಿ ತಿಮ್ಮಯ್ಯನ ಮಗ ಶ್ರೀ ಸಿದ್ದಯ್ಯ
ನಂ. 2395 / ಎ, 7ನೇ ಕ್ರಾಸ್, ಕೆ.ಜಿ.ಕೊಪ್ಪಲು,
ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಹಿಂಭಾಗ,ಮೈಸೂರು
ಇವರು ಮಾಡುವ ವಿಜ್ಞಾಪನೆಗಳು
ನನ್ನ ಧರ್ಮಪತ್ನಿಯವರಾದ

ಶ್ರೀಮತಿ ಪುಟ್ಟನಿಂಗಮ್ಮನವರು

ದಿನಾಂಕ 20-08-2023ನೇ ಭಾನುವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇನೆ. ತತ್ಸಂಬಂಧವಾಗಿ ಹಾಲುತುಪ್ಪ ಕಾರ್ಯವನ್ನು ದಿ. 30.8.2023 ನೇ ಬುಧವಾರ ಬೆಳಿಗ್ಗೆ 11.30 ಗಂಟೆಗೆ ಶ್ರೀ ಮರುಳೇಶ್ವರ ದೇವಸ್ಥಾನ, ಕಾವೇರಿ ಸ್ಕೂಲ್ ಹತ್ತಿರ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಮೈಸೂರು ಇಲ್ಲಿ ಏರ್ಪಡಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು, ಶ್ರೀ ಸಿದ್ದಯ್ಯ, ಶ್ರೀ ತಿಮ್ಮಯ್ಯ ಮತ್ತು ಶ್ರೀ ರಾಜು, ಶ್ರೀ ಭಾಸ್ಕರ್, ಬಿ. ಕಾರ್ತಿಕ್. ಆರ್. ಸೊಸೆಯಂದಿರು, ಅಳಿಯಂದಿರು, ಹೆಣ್ಣುಮಕ್ಕಳು ಹಾಗೂ ಕುಟುಂಬವರ್ಗದವರು.
ಮೊ:9901214192

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

13ನೇ ವರ್ಷದ ಸವಿನೆನಪು



ಶ್ರೀಮತಿ ಧನಲಕ್ಷ್ಮಿ

ಮಗಳೆ ದೇವರು ನಿನ್ನ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲಿ ಎಂದು ಕೋರುವ.
ದುಃಖತಪ್ತರು: ತಾಯಿ–ಜಾನಕಮ್ಮ, ತಂದೆ– ಯೋಗ ಲಿಂಗೇಗೌಡ, ಪತಿ–ಬಸವರಾಜು, ತಮ್ಮ–ಮಂಜುನಾಥ ಮತ್ತು ಕುಟುಂಬ ವರ್ಗದವರು ಗುಡುಮಾದನಹಳ್ಳಿ.

5th Year Remembrance



Dr. (Mrs) IVY M. HANS
22.12.1952 30.08.2018

Those we love don't go away, they walk beside us everyday. Unseen, unheard but always near, still loved, still missed and held so dear.

- Rev. Dr. P.H. Hans (Husband)
- Dr. Shwetha M. Hans (Daughter)
- Mr. Shashidhar (Son-in-law)

3ನೇ ವರ್ಷದ ಸವಿನೆನಪು



ರಾಜಪ್ಪಾಜಿ.ಎಂ

ನೀವು ನಮ್ಮನ್ನಗಲಿ ಇಂದಿಗೆ 3 ವರ್ಷಗಳು ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ.
ದುಃಖತಪ್ತರು: ತಾಯಿ ಮಂಜುಳಾ.ಆರ್ ಪತ್ನಿ ರೇಖಾ, ಮಗ ನಿತಿನ್ ಶೆಟ್ಟಿ, ತಂಗಿ ಅರ್ಚನ. ಎಂ ಹಾಗೂ ಕುಟುಂಬವರ್ಗದವರು

ಸಾರ್ವಜನಿಕರ ಗಮನಕ್ಕಾಗಿ

ನನ್ನ ಕಕ್ಷಿದಾರರ ಇರ್ರಾದೆಯ ಮೇರೆಗೆ, ಏನೆಂದರೆ, ಮೇಲ್ಕಂಡ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಸಂಬಂಧ ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಡಿ. ಸಾಲುಂಡಿ ಗ್ರಾಮದಲ್ಲಿ ವಾಸವಾಗಿರುವ, ಶ್ರೀ ಬಸಪ್ಪರವರ ಧರ್ಮ ಪತ್ನಿ ಸುಮಾರು 48 ವರ್ಷ ವಯಸ್ಸಿನ ಶ್ರೀಮತಿ ಸುಧಾ, ಶ್ರೀ ಬಸಪ್ಪರವರ ಮಗಳು ಸುಮಾರು 33 ವರ್ಷ ವಯಸ್ಸು ಹಾಗೂ ಶ್ರೀ ನವೀನ್‌ಕುಮಾರ್ ಅವರ ಧರ್ಮ ಪತ್ನಿ ಶ್ರೀಮತಿ ಲಕ್ಷ್ಮೀ ಶ್ರೀ ಬಸಪ್ಪರವರ ಮಗ ಸುಮಾರು 27 ವರ್ಷ ವಯಸ್ಸಿನ ಶ್ರೀ ಬಿ. ಅರುಣ್ ಕುಮಾರ್ ಶ್ರೀ ಬಸಪ್ಪರವರ ಮಗ ಸುಮಾರು 25 ವರ್ಷ ವಯಸ್ಸಿನ ಶ್ರೀ ಬಿ. ಮಂಜುನಾಥ್ ಕುಮಾರ್ ರವರಿಗೂ, ನನ್ನ ಕಕ್ಷಿದಾರರಿಗೂ ಕೆಳಕಂಡ ಜಮೀನಿನ ಸಂಬಂಧ ಮಾರಾಟ ಮಾಡುವ ಸಂಬಂಧ ಒಡಂಬಡಿಕೆಯಾಗಿದ್ದು, ಸದರಿ ಜಮೀನನ್ನು ನನ್ನ ಕಕ್ಷಿದಾರರು ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು ಈಗಾಗಲೇ ಆ ಸಂಬಂಧ ನನ್ನ ಕಕ್ಷಿದಾರರಿಗೆ ಕೆಲವು ದಾಖಲಾತಿಗಳನ್ನು ಹಾಜರು ಮಾಡಿದ್ದು ನನ್ನ ಕಕ್ಷಿದಾರರು ಸದರಿ ಜಮೀನನ್ನು ನೋಂದಾಯಿತ ಕ್ರಯ ಪತ್ರದ ಮೂಲಕ ಖರೀದಿಸಲು ತೀರ್ಮಾನಿಸಿರುತ್ತಾರೆ ಆದುದರಿಂದ ಸದರಿ ಜಮೀನಿನ ಸಂಬಂಧ ಯಾರಿಗಾದರೂ ಯಾವುದೇ ರೀತಿಯ ಹಕ್ಕು ಹಿತಾಸಕ್ತಿ ಇದ್ದಲ್ಲಿ ಸಂಬಂಧ ಪಟ್ಟವರು ಈ ಪತ್ರಿಕಾ ಪ್ರಕಟಣೆ ಹೊರಡಿಸಿದ 7 ದಿವಸದೊಳಗಾಗಿ ನನ್ನ ಕಕ್ಷಿದಾರರಿಗಾಗಲೀ, ನನಗಾಗಲೀ ಲಿಖಿತವಾಗಿ ಸಂಬಂಧ ಪಟ್ಟ ದಾಖಲಾತಿಗಳೊಡನೆ ನನ್ನ ಕೆಳಕಂಡ ವಿಳಾಸದ ಕಛೇರಿಯ ಸಮಯದಲ್ಲಿ ಹಾಜರಾಗಿ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು. ಮೇಲ್ಕಂಡ ಸಮಯದೊಳಗೆ ಯಾವುದೇ ತಕರಾರು ಬರದೇ ಇದ್ದ ಪಕ್ಷದಲ್ಲಿ ನನ್ನ ಕಕ್ಷಿದಾರರು ಕೆಳಕಂಡ ಜಮೀನಿನ ಸಂಬಂಧ ಕ್ರಯ ಪತ್ರವನ್ನು ಪಡೆದುಕೊಳ್ಳುತ್ತಾರೆ. ಮುಂದೆ ಬರುವ ತಂಟೆ ತಕರಾರುಗಳಿಗೆ ನನ್ನ ಕಕ್ಷಿದಾರರು ಬದ್ಧರಾಗಿರುವುದಿಲ್ಲವೆಂದು ಈ ಮೂಲಕ ತಿಳಿಯತಕ್ಕದ್ದು.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ದಾರಿಪುರ ಗ್ರಾಮದಲ್ಲಿರುವ ಸರ್ವೆ ನಂ 114/2 ರಲ್ಲಿ ಶ್ರೀಮತಿ ಸುಧಾ ರವರ ಹೆಸರಿನಲ್ಲಿ ಖಾತೆಯಿರುವ ವಿಸ್ತೀರ್ಣ 0.32 ಗುಂಟೆ ಖುಷ್ಕಿ ಜಮೀನು

ಪೂರ್ವಕ್ಕೆ : ಸರ್ವೆ ನಂ. 114/2 ರಲ್ಲಿ ಲಕ್ಷ್ಮೀ ಕೋಂ ನವೀನ್ ಕುಮಾರ್ ರವರ ಜಮೀನು, ಪಶ್ಚಿಮಕ್ಕೆ : ಸರ್ವೆ ನಂ. 115/1 ರಲ್ಲಿ ಮಹದೇವಸ್ವಾಮಿ ಬಿನ್ ಲೇ. ಸಿದ್ದಪ್ಪನವರ ಜಮೀನು, ಉತ್ತರಕ್ಕೆ : ಸರ್ವೆ ನಂ. 117 /2 ಎ2 ರಲ್ಲಿ ದೇವಣ್ಣ ಬಿನ್ ದೇವಪ್ಪ ನವರ ಜಮೀನು, ದಕ್ಷಿಣಕ್ಕೆ : ಸರ್ವೆ ನಂ. 114/1 ಪುಟ್ಟನಂಜಪ್ಪ ಬಿನ್ ದೇವಪುರದ ಮಾದಪ್ಪ ಜಮೀನು

ಕಕ್ಷಿದಾರರ ಪರ ವಕೀಲರು, ಸಹಿ/– ಶ್ರೀ ಪಾಲಾಕ್ಷ ವಕೀಲರು, ನಂ. 645, ಮೊದಲನೇ ಮಹಡಿ, ನಾರಾಯಣ ಶಾಸ್ತ್ರಿ ರಸ್ತೆ, ಶಾಂತಲ ಚಿತ್ರ ಮಂದಿರ ಹತ್ತಿರ, ಮೈಸೂರು
ಮೊ: 9448075718

ಮೈಸೂರಿನಲ್ಲಿ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ 108ನೇ ಜಯಂತಿ ಅರ್ಥಪೂರ್ಣ ಆಚರಣೆ

ಸಮಾಜದಲ್ಲಿ ಸಹಿಷ್ಣುತೆ, ಸಹಬಾಳ್ವೆ ಮೂಡುವುದು ಎಷ್ಟೋ ಬಾರಿ ಸುಳ್ಳಾಗಿದೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಬೇಸರದ ನುಡಿ ● ಶೇ.22ರಷ್ಟು ಜನರು ಇನ್ನು ಶಿಕ್ಷಿತರಾಗಿಲ್ಲ ● ವಿದ್ಯಾವಂತರಾದರೂ ರಾಜೀ ಮಾಡಿಕೊಂಡಿದ್ದಾರೆ ● ಡಾ.ರಾಜೇಂದ್ರ ಸ್ವಾಮೀಜಿ ಪ್ರಜ್ವಲಿಸಿದರು ● ಸುತ್ತೂರು ಮಠದ ತ್ರಿವಿಧ ದಾಸೋಹ ಸ್ಮರಣೀಯ



ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನ ಸುತ್ತೂರು ಶಾಖಾ ಮಠದಲ್ಲಿ ಮಂಗಳವಾರ ನಡೆದ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ 108ನೇ ಜಯಂತಿ ಮಹೋತ್ಸವ ಸಮಾರಂಭ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಚಿತ್ರದಲ್ಲಿ ಆದಿಚುಂಚನಗಿರಿ ಮಠದ ಡಾ.ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳು, ಸಿದ್ಧಗಂಗಾ ಮಠದ ಶ್ರೀ ಸಿದ್ದಲಿಂಗಸ್ವಾಮೀಜಿ, ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಪ್ರತಾಪ್ ಸಿಂಹ, ಶಾಸಕರಾದ ಕೆ.ಹರೀಶ್‌ಗೌಡ, ತನ್ವೀರ್ ಸೇಠ್, ಟಿ.ಎಸ್.ಶ್ರೀವತ್ಸ, ಪ್ರಕಾಶ್ ಹುಕ್ಕೇರಿ, ಡಿ.ರವಿಶಂಕರ್, ಮೇಯರ್ ಶಿವಕುಮಾರ್, ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ, ವರುಣ ಕ್ಷೇತ್ರದ ಆಶ್ರಯ ಸಮಿತಿ ಅಧ್ಯಕ್ಷ ಯತೀಂದ್ರ ಸಿದ್ದರಾಮಯ್ಯ ಅವರನ್ನು ಕಾಣಬಹುದು.

ಮೈಸೂರು, ಆ.29 (ಬಿಎಲ್‌ಯು)–ಇತ್ತೀಚಿನ ದಿನದಲ್ಲಾದರೂ ಸಮಾಜದಲ್ಲಿ ಸಹಿಷ್ಣತೆ ಹಾಗೂ ಸಹಬಾಳ್ವೆ ಮೂಡುತ್ತದೆ ಎಂಬ ಮಾತು ಎಷ್ಟೋ ಬಾರಿ ಸುಳ್ಳಾಗಿರುವುದು ನನಗೆ ನೋವು ತಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನ ಸುತ್ತೂರು ಶಾಖಾ ಮಠದಲ್ಲಿ ನಡೆದ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ 108ನೇ ಜಯಂತಿ ಮಹೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಇವ ನಮ್ಮವ, ಇವ ನಮ್ಮವ ಎಂಬ ಸಾಮಾಜಿಕ ಸಂದೇಶವನ್ನು ಕ್ರಾಂತಿಕಾರಿ ಬಸವಣ್ಣನವರು ಸಾರಿ 800 ವರ್ಷವಾದರೂ ಇಂದಿಗೂ ಸಮಾನತೆ ಎಂಬುವುದು ದೂರವಾಗಿ ಇವನ್ಯಾರು, ಇವನ್ಯಾರು ಎಂಬ ಮನೋಭಾವ ಗಟ್ಟಿಯಾಗಿ ಬೇರೂರಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬಸವಣ್ಣನವರು ಜಾತಿ ಹಾಗೂ ವರ್ಣ ವ್ಯವಸ್ಥೆ ಬಗ್ಗೆ ಹೋರಾಡಿದರು ಎಂದು ಹಲವು ವಚನಗಳನ್ನು ಉಲ್ಲೇಖಿಸಿದ ಸಿದ್ದರಾಮಯ್ಯ, ಜಾತೀಯತೆ ಹಾಗೂ ವರ್ಗ ಭೇದ ಭಾವದ ಬಗ್ಗೆ ಬಸವಾದಿ ಶರಣರು ದನಿ ಎತ್ತಿದರು. ಆದರೆ ಇಷ್ಟು ವರ್ಷವಾದರೂ ಇನ್ನೂ ಕೂಡ ಜಾತ್ಯತೀತ ಸಮಾಜದ ಪರಿಕಲ್ಪನೆ ಕನಸಾಗಿದೆ. ಸ್ವಾತಂತ್ರ್ಯ ನಂತರವಾದರೂ ಸಮಾಜದಲ್ಲಿ ಸಹಿಷ್ಣತೆ ಹಾಗೂ ಸಹಬಾಳ್ವೆ ಮೂಡುತ್ತದೆ ಮಾತು ಎಷ್ಟೋ ಬಾರಿ ಸುಳ್ಳಾಗಿರುವುದು ಬೇಸರ ತಂದಿದೆ ಎಂದರು.

ನಮ್ಮಲ್ಲಿ ಚತುರ್ವರ್ಣ ಪದ್ಧತಿ ಇತ್ತು. ಇವರಲ್ಲಿ ಶೂದ್ರರು ಅಕ್ಷರ ಸಂಸ್ಕೃತಿಯಿಂದ ವಂಚಿತರಾಗಿದ್ದರು. ನೂರಾರು ವರ್ಷಗಳಿಂದ ಶೂದ್ರರು ಜ್ಞಾನದಿಂದ ವಂಚಿತರಾಗಿದ್ದರು. ಇದರಿಂದ ಸಾಮಾಜಿಕ ಹಾಗೂ ಆರ್ಥಿಕ ಅಸಮಾನತೆ ಇತ್ತು. ಈ ಕಾರಣದಿಂದ ಡಾ.ರಾಜೇಂದ್ರ ಸ್ವಾಮೀಜಿ ಅವರು ಶಿಕ್ಷಣದಿಂದ ವಂಚಿತರಾಗಿದ್ದವರಿಗೆ ಅಕ್ಷರ ಸಂಸ್ಕೃತಿಯನ್ನು ಪರಿಚಯಿಸಿ ಮನುಷ್ಯರಾಗಿ ಮಾಡಿದರು. ಈ ಮೂಲಕ ಶಿಕ್ಷಣ ಕ್ರಾಂತಿ ಮಾಡಿದ ಕೀರ್ತಿ ಡಾ.ರಾಜೇಂದ್ರ ಸ್ವಾಮೀಜಿ ಅವರಿಗೆ ಸಲ್ಲುತ್ತದೆ ಎಂದು ಸಿದ್ದರಾಮಯ್ಯ ಹೇಳಿದರು.

ಈಗಲೂ ಅಸಮಾನತೆ ಇದೆ. ಆದರೆ ಸ್ವಾತಂತ್ರ್ಯ ಪೂರ್ವದಲ್ಲಿ ಇದ್ದಷ್ಟು ಈಗಿಲ್ಲ. ಯಾವುದೇ ಸಮಾಜ ಶಿಕ್ಷಣ ಪಡೆಯದೆ, ಜ್ಞಾನ ವಿಕಾಸ ಹೊಂದಿದ್ದರೆ ಸ್ವಾಭಿಮಾನದಿಂದ ಬದುಕಲು ಸಾಧ್ಯವಿಲ್ಲ. ಈ ನಿಟ್ಟಿನಲ್ಲಿ ಎಲ್ಲಾ ವರ್ಗಗಳಿಗೂ ಶಿಕ್ಷಣ ಅತ್ಯವಶ್ಯ. ಇದೇ ಮಾತನ್ನು ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಅವರು ಹೇಳಿದ್ದಾರೆ ಎಂದು ಸಿದ್ದರಾಮಯ್ಯ ಪ್ರತಿಪಾದಿಸಿದರು.

ಶಿಕ್ಷಣ ಪಡೆಯುವುದು ನಮ್ಮ ಹಕ್ಕು ಎಂದು ಸಂವಿಧಾನ ಹೇಳಿದೆ. ಈ ನಿಟ್ಟಿನಲ್ಲಿ ಗುಣಮಟ್ಟದ ಶಿಕ್ಷಣ ಪಡೆದರೆ ವೈಚಾರಿಕತೆ ವಿಚಾರ ಅರಿವಿಗೆ ಬರುತ್ತದೆ. ಇಂತಹ ಹಲವು ಸೌಲಭ್ಯಗಳು ಪ್ರತಿಯೊಬ್ಬರಿಗೂ ದೊರೆಯಬೇಕು. ಆಗ ಮಾತ್ರ ಸ್ವಾತಂತ್ರ್ಯ ಬಂದಿರುವುದಕ್ಕೆ ಸಾರ್ಥಕವಾಗುತ್ತದೆ. ಆದರೆ ಸ್ವಾತಂತ್ರ್ಯ ಬಂದು 75 ವರ್ಷವಾದರೂ ಇನ್ನೂ ಕೂಡ ಶೇ.78ರಷ್ಟು ಜನರು ಮಾತ್ರ ಶಿಕ್ಷಿತರಾಗಿದ್ದಾರೆ. ಉಳಿದ 22ರಷ್ಟು ಜನರಿಗೆ ಇನ್ನೂ ಕೂಡ ಅಕ್ಷರ ಸಂಸ್ಕೃತಿಯೇ ತಿಳಿದಿಲ್ಲ ಎಂದು ಸಿದ್ದರಾಮಯ್ಯ ಅಂಕಿ ಅಂಶಗಳ ವಿವರ ನೀಡಿದರು.

ಕುವೆಂಪು ಹೇಳಿದಂತೆ ವಿಶ್ವ ಮಾನವ ದೃಷ್ಟಿಕೋನ ಎಲ್ಲರಲ್ಲೂ ಇರಬೇಕು. ಆಗ ಮಾತ್ರ ನಾವು ಮನುಷ್ಯರು ಎಂದು ಹೇಳಿಕೊಳ್ಳಲು ಸಾಧ್ಯ. ಆದರೆ ಬಹಳಷ್ಟು ಜನರು ವಿದ್ಯಾವಂತರಾಗಿದ್ದರೂ ವ್ಯವಸ್ಥೆ ಜೊತೆ ರಾಜೀ ಮಾಡಿಕೊಂಡು ಬದುಕುತ್ತಿದ್ದಾರೆ. ವ್ಯವಸ್ಥೆ ಜೊತೆ ರಾಜಿ ಮಾಡಿಕೊಳ್ಳದೆ. ಅಮಾನವೀಯ ವ್ಯವಸ್ಥೆಯಿಂದ ದೂರವಾಗಿ ಮಾನವೀಯ ವ್ಯವಸ್ಥೆ ಜೊತೆ ಬದುಕಬೇಕು ಎಂದು ಸಿದ್ದರಾಮಯ್ಯ ಸಲಹೆ ನೀಡಿದರು.

ಸಮಾಜಮುಖಿಯಾಗಿ ಬದುಕಲು ಶಿಕ್ಷಣ ಹಿಂದೆಂದಿಗಿಂತಲೂ ಈಗ ಅತ್ಯವಶ್ಯ. ನಾವು ಎಷ್ಟು ವರ್ಷ ಬದುಕಿದ್ದೇವೆ ಎಂಬುವುದು ಮುಖ್ಯವಲ್ಲ, ಜೀವಿತಾವಧಿಯದಲ್ಲಿ ಎಷ್ಟು ದಿನ ಸಾರ್ಥಕವಾಗಿ ಬದುಕಿದ್ದೇವೆ ಎಂಬುವುದು ಮುಖ್ಯ. ಈ ನಿಟ್ಟಿನಲ್ಲಿ ಆತ್ಮಾವಲೋಕನ ಮಾಡಿಕೊಳ್ಳಬೇಕು. ಆಗ ತಕ್ಕ ಉತ್ತರ ದೊರೆತರೆ ಮಾತ್ರ ಬದುಕು ಸಾರ್ಥಕವಾಗುತ್ತದೆ ಎಂದು ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಸುತ್ತೂರು ಮಠ ಧರ್ಮ ಪ್ರಚಾರದ ಜೊತೆ ವಿದ್ಯಾ ಪ್ರಚಾರ ಕೂಡ ಮಾಡುತ್ತಿದೆ. ಈ ಮೂಲಕ ಡಾ.ರಾಜೇಂದ್ರ ಶ್ರೀಗಳು ಶೈಕ್ಷಣಿಕ ಕ್ಷೇತ್ರವನ್ನು ಜಾಗೃತಗೊಳಿಸಿದ್ದಾರೆ. ಕರ್ನಾಟಕ, ದೇಶ, ವಿದೇಶದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ತ್ರಿವಿಧ ದಾಸೋಹದ ಮೂಲಕ ಸುತ್ತೂರು ಮಠ ಉತ್ತಮ ಕೆಲಸ ಮಾಡುತ್ತಿದೆ ಎಂದು ಸಿದ್ದರಾಮಯ್ಯ ಪ್ರಶಂಸೆ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಡಾ.ರಾಜೇಂದ್ರ ಶ್ರೀಗಳು ತ್ರಿವಿಧ ದಾಸೋಹದ ಮೂಲಕ ಚರಿತ್ರೆ ನಿರ್ಮಾಣ ಮಾಡಿದರು. ಈ ಕಾರಣದಿಂದಲೇ ಅವರಿಗೆ ರಾಜಗುರು ತಿಲಕ ಎಂಬ ಹೆಸರು ಬಂದಿತು. ಜಾತಿ, ಧರ್ಮದ ಭೇದ ಭಾವ ಇಲ್ಲದೆ ಸಮಾಜ ಸೇವೆ ಮಾಡಿದ ಡಾ.ರಾಜೇಂದ್ರ ಸ್ವಾಮೀಜಿ ಅವರ ಸಮಾಜಮುಖಿ ಕಾರ್ಯ ಸ್ಮರಣೀಯ ಎಂದು ಹೇಳಿದರು.

ಬಸವಣ್ಣ, ಅಂಬೇಡ್ಕರ್ ಆಶಯದಂತೆ ಡಾ.ರಾಜೇಂದ್ರ ಸ್ವಾಮೀಜಿ ಅವರು ಜಾತ್ಯತೀತವಾಗಿ ಸೇವೆ ಮಾಡಿದ್ದಾರೆ. ಈ ಮೂಲಕ ಇವತ್ತು ಡಾ.ರಾಜೇಂದ್ರ ಸ್ವಾಮೀಜಿ ಅವರು ನಮಗೆ ಪ್ರೇರಣೆಯಾಗಿದ್ದಾರೆ. ಈಗಿನ ಸುತ್ತೂರು ಮಠದ ಪೀಠಾಧ್ಯಕ್ಷರಾದ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರು ಕೂಡ ತ್ರಿವಿಧ ದಾಸೋಹದ ಜೊತೆಗೆ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ. ಜಾತ್ಯಾತೀತ, ಸಮಾನತೆಯ ತಳಹದಿಯಲ್ಲಿ ಶ್ರೀ ಮಠ ನಿಸ್ವಾರ್ಥ ಸೇವೆ ಮಾಡುತ್ತಿದೆ. ಇದರಿಂದ ಜಾತ್ಯತೀತ ಹಾಗೂ ಬಲಿಷ್ಠ ಭಾರತ ನಿರ್ಮಾಣ ಮತ್ತಷ್ಟು ಹೆಚ್ಚಾಗಲಿ ಎಂದು ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಆಶಿಸಿದರು.

ಅಲ್ಪ ಕಾಲದಲ್ಲಿ ಬದುಕಿದ್ದರೂ ಪ್ರಜ್ವಲಿಸಿ ಬದುಕಬೇಕು ಎಂಬುವುದಕ್ಕೆ ಡಾ.ರಾಜೇಂದ್ರ ಸ್ವಾಮೀಜಿ ಅವರು ಸ್ಪಷ್ಟ ನಿದರ್ಶನ. ಸ್ವಾತಂತ್ರ್ಯಕ್ಕೂ ಮೊದಲು ಶಿಕ್ಷಣ ಕ್ಷೇತ್ರದಲ್ಲಿ ಹಲವು ಕಾರ್ಯ ಮಾಡಿದ ಸುತ್ತೂರು ಮಠದ ಪರಂಪರೆ ಎಂದೆಂದೂ ಸ್ಮರಣೀಯ ಎಂದು ಸಂಸದ ಪ್ರತಾಪ್ ಸಿಂಹ ಹೇಳಿದರು.

ಆದಿಚುಂಚನಗಿರಿ ಮಠದ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ, ಸಿದ್ಧಗಂಗಾ ಮಠದ ಶ್ರೀ ಸಿದ್ದಲಿಂಗಸ್ವಾಮೀಜಿ ಆಶೀರ್ವಚನ ನೀಡಿದರು. ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದರು. ಶಾಸಕರಾದ ಕೆ.ಹರೀಶ್ ಗೌಡ, ತನ್ವೀರ್ ಸೇಠ್, ಶ್ರೀವತ್ಸ ಪ್ರಕಾಶ್ ಹುಕ್ಕೇರಿ, ಮೇಯರ್ ಶಿವಕುಮಾರ್, ವರುಣ ಕ್ಷೇತ್ರದ ಆಶ್ರಯ ಸಮಿತಿ ಅಧ್ಯಕ್ಷ ಯತೀಂದ್ರ ಸಿದ್ದರಾಮಯ್ಯ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶಿವರಾತ್ರಿ ರಾಜೇಂದ್ರ ಶ್ರೀಗಳು ಜ್ಞಾನದ ಜ್ಯೋತಿ ಬೆಳಗಿದ್ದಾರೆ

ಸಿದ್ಧಗಂಗಾ ಮಠದ ಶ್ರೀಗಳ ಸ್ಮರಣೆ

ಮೈಸೂರು, ಆ.29 (ಬಿಎಲ್‌ಯು)– ಸುತ್ತೂರು ಮಠದ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರು ಜ್ಞಾನದ ಜ್ಯೋತಿಯನ್ನು ಎಲ್ಲೆಡೆ ವಿಸ್ತರಿಸಿದ್ದಾರೆ ಎಂದು ತುಮಕೂರಿನ ಸಿದ್ಧಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ ಅವರು ಹೇಳಿದರು.

ತ್ರಿವಿಧ ದಾಸೋಹದ ಮೂಲಕ ಡಾ.ರಾಜೇಂದ್ರ ಸ್ವಾಮೀಜಿ ಅವರು ಸುತ್ತೂರು ಮಠದ ಸಮಾಜಮುಖಿ ಕಾರ್ಯವನ್ನು ಎಲ್ಲೆಡೆ ಪಸರಿಸಿದರು ಎಂದರು.

ಸಾವಿರಾರು ವರ್ಷಗಳ ಭವ್ಯ ಪರಂಪರೆ ಇರುವ ಸುತ್ತೂರು ಮಠ ಹಲವು ಸಮಾಜ ಸೇವಾ ಕಾರ್ಯ ಗಳನ್ನು ಮಾಡುತ್ತಾ ಬಂದಿದೆ. ಹಿಂದೆ ರಾಜರ ನಡುವೆ ಕಲಹ ಏರ್ಪಟ್ಟಾಗ ಸೌಹಾರ್ದತೆ ಹಾಗೂ ಶಾಂತಿ ಸ್ಥಾಪನೆ ಮಾಡಿದ ಸುತ್ತೂರು ಮಠದ ಸ್ವಾಮೀಜಿಗಳ ಕಾರ್ಯ ಸ್ಮರಣೀಯವಾಗಿದೆ. ನಂತರದ ದಿನಗಳಲ್ಲಿ ಶಿಕ್ಷಣದಲ್ಲಿ ಕ್ರಾಂತಿ ಮಾಡಿ, ಸಮಾಜ ಮುಖಿ ಕಾರ್ಯ ಮಾಡಿದ ಪವಿತ್ರ ಹಾಗೂ ಉನ್ನತ ಪರಂಪರೆಯಲ್ಲಿ ಡಾ.ರಾಜೇಂದ್ರ ಸ್ವಾಮೀಜಿ ನಿಲ್ಲುತ್ತಾರೆ ಎಂದು ಶ್ರೀಗಳು ಹೇಳಿದರು.

ಇತ್ತೀಚಿಗೆ ಶಿಕ್ಷಕರ ಸಂಖ್ಯೆ ಹೆಚ್ಚಾಗಿದೆ. ಈ ಕಾರ್ಯದಲ್ಲಿ ಸುತ್ತೂರು ಮಠ ಅಗ್ರಸ್ಥಾನದಲ್ಲಿ ನಿಲ್ಲುತ್ತದೆ. ವಿದ್ಯಾರ್ಥಿಗಳ ಪಾಲಿಗೆ ಸುತ್ತೂರು ಮಠ ಕಲ್ಪವೃಕ್ಷವಾಗಿದೆ. ಸುತ್ತೂರು ಮಠದ ತ್ರಿವಿಧ ಸೇವಾ ಕಾರ್ಯ ಕರ್ನಾಟಕ ಮಾತ್ರವಲ್ಲದೆ ದೇಶ ವಿದೇಶದಲ್ಲೂ ವಿಸ್ತರಣೆಯಾಗಿದೆ ಎಂದು ಸಿದ್ಧಗಂಗಾ ಶ್ರೀಗಳು ಪ್ರಶಂಸಿಸಿದರು.

ಸರ್ವ ಜನಾಂಗದವರೆಲ್ಲಾ ಸೇರಿ ಡಾ.ರಾಜೇಂದ್ರ ಸ್ವಾಮೀಜಿ ಅವರ ಜಯಂತಿ ಆಚರಣೆ ಮಾಡುತ್ತಿದ್ದಾರೆ. ಈ ಮೂಲಕ ಡಾ.ರಾಜೇಂದ್ರ ಸ್ವಾಮೀಜಿ ಅವರ ಜ್ಯಾತ್ಯತೀತ ಸಮಾಜ ಸೇವೆ ಎಷ್ಟರ ಮಟ್ಟಿಗೆ ಪ್ರಭಾವಯುತವಾಗಿತ್ತು ಎಂಬುದು ಇದರಿಂದ ಸ್ಪಷ್ಟವಾಗಿದೆ. ಅಜ್ಞಾನ ಅಳಿಸಿ ಸುಜ್ಞಾನದ ಜ್ಯೋತಿ ಬೆಳಗಿಸಿದ ಡಾ.ರಾಜೇಂದ್ರ ಸ್ವಾಮೀಜಿ ಅವರು ಆದರ್ಶ ಪ್ರಾಯರಾಗಿದ್ದಾರೆ ಎಂದು ಆದಿಚುಂಚನಗಿರಿ ಮಠದ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ಸುತ್ತೂರು ಮಠದ ತ್ರಿವಿಧ ದಾಸೋಹಕ್ಕೆ ಡಾ.ರಾಜೇಂದ್ರ ಸ್ವಾಮೀಜಿ ಅಡಿಪಾಯ ಹಾಕಿಕೊಟ್ಟಿದ್ದು, ಇದರ ಮೇಲೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಬೆಳವಣಿಗೆ ಸಾಧಿಸುತ್ತಿದ್ದಾರೆ ಎಂದು ಹೇಳಿದರು.

ಕಾವೇರಿ ವಿಚಾರದಲ್ಲಿ ರಾಜ್ಯದ ಹಿತಾಸಕ್ತಿ ಕಾಪಾಡುತ್ತೇವೆ

● ಜಲ ಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಪುನರುಚ್ಚಾರ
● ಸರ್ಕಾರದ 100 ದಿನದ ಸಾಧನೆಯ ರಿಪೋರ್ಟ್ ಕಾರ್ಡ್

ಮೈಸೂರು,ಆ.29(ಬಿಎಲ್‌ಯು)– ಕಾವೇರಿ ವಿಚಾರದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ರಾಜ್ಯದ ಹಿತಾಸಕ್ತಿಗೆ ಧಕ್ಕೆ ಬರದಂತೆ ನೋಡಿಕೊಳ್ಳಲಿದೆ ಎಂದು ಜಲ ಸಂಪನ್ಮೂಲ ಸಚಿವರೂ ಆದ ಡಿಸಿಎಂ ಡಿ.ಕೆ.ಶಿವಕುಮಾರ್ ಪುನರುಚ್ಚರಿಸಿದ್ದಾರೆ.

ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಕಾವೇರಿ ವಿಚಾರವಾಗಿ ಸುಪ್ರೀಂ ಕೋರ್ಟ್ ನೀಡುವ ತೀರ್ಪು ಆಧರಿಸಿ ಹೆಚ್ಚಿನ ಪ್ರತಿಕ್ರಿಯೆ ನೀಡುತ್ತೇನೆ. ಆದರೆ ಒಂದಂತೂ ಸ್ಪಷ್ಟ, ರಾಜ್ಯದ ಹಿತಾಸಕ್ತಿಗೆ ಧಕ್ಕೆ ಬಾರದಂತೆ ನೋಡಿಕೊಳ್ಳುತ್ತೇವೆ ಎಂದು ಅಭಯ ನೀಡಿದರು.

ಚುನಾವಣೆಗೂ ಮುನ್ನ ನಾಡದೇವತೆ ತಾಯಿ ಚಾಮುಂಡೇಶ್ವರಿ ಸನ್ನಿಧಿಯಲ್ಲಿ ಕೊಟ್ಟ ಮಾತಿನಂತೆ ನಡೆದಿದ್ದೇವೆ. ನುಡಿದಂತೆ ನಡೆದಿರುವುದು ಈ ಸರ್ಕಾರದ ಸಾಧನೆ ಎಂದರು. ಗೃಹಲಕ್ಷ್ಮಿ ಯೋಜನೆಯಲ್ಲಿ 1.10 ಲಕ್ಷ ಕುಟುಂಬಗಳಿಗೆ 2 ಸಾವಿರ ರೂ. ದೊರೆಯಲಿದೆ. ಈಗಾಗಲೇ ಜಾರಿಯಾಗಿರುವ ಗೃಹಜ್ಯೋತಿ ಯೋಜನೆಯಲ್ಲಿ 1.41 ಲಕ್ಷ ಮನೆಗಳಿಗೆ ಶೂನ್ಯ ಬಿಲ್ ಬಂದಿದೆ. 46 ಕೋಟಿ ಮಹಿಳೆಯರು ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರಯಾಣ ಮಾಡಿದ್ದಾರೆ. ಇನ್ನು 1.39 ಕೋಟಿ ಕುಟುಂಬಗಳು ಅನ್ನಭಾಗ್ಯ ಯೋಜನೆಯ ಪ್ರಯೋಜನ ಪಡೆದಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಅಂಕಿ ಅಂಶಗಳ ಸಹಿತ ಸರ್ಕಾರದ ನೂರು ದಿನದ ಸಾಧನೆಯ ರಿಪೋರ್ಟ್ ಕಾರ್ಡ್ ನೀಡಿದರು. ಮೈಸೂರು ಭಾಗದ ಜನತೆ ನಮ್ಮ ಸರ್ಕಾರ ರಚನೆಗೆ ಹೆಚ್ಚಿನ ಶಕ್ತಿ ನೀಡಿದ್ದಾರೆ. ಗೃಹಲಕ್ಷ್ಮಿ ಯೋಜನೆಯ ಕಾರ್ಯಕ್ರಮ ಕರ್ನಾಟಕದ 12,600 ಸ್ಥಳಗಳಲ್ಲಿ ನೇರ ಪ್ರಸಾರವಾಗಲಿದೆ ಎಂದು ತಿಳಿಸಿದರು.

ಬಿಎಂಟಿಸಿ ಡಿಪೋಗೆ ಸೂಪರ್‌ಸ್ಟಾರ್ ರಜನೀಕಾಂತ್ ಸದ್ದಿಲ್ಲದೆ ಭೇಟಿ



ಬೆಂಗಳೂರು, ಆ.29–ಸದ್ದಿಲ್ಲದೆ ಬೆಂಗಳೂರಿಗೆ ಬಂದ ನಟ ರಾಯರ ಮಠಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಅದಾದ ನಂತರ ತಾನು ಈ ಹಿಂದೆ ಕೆಲಸ ಮಾಡಿದ್ದ ಜಯನಗರ ಬಿಎಂಟಿಸಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ, ಸಂತಸ ವ್ಯಕ್ತಪಡಿಸಿದರು. ಇವರ ಸದ್ದಿಲ್ಲದ ಭೇಟಿ ಇಡೀ ಬಿಎಂಟಿಸಿ ಸಿಬ್ಬಂದಿಗೆ ಶಾಕ್ ಜೊತೆಗೆ ಖುಷಿಗೆ ಪಾರವೇ ಇಲ್ಲದಂತಾಯಿತು. ಚಾಮರಾಜಪೇಟೆ ಸೇತುಪತಿ ಅಗ್ರಹಾರ ರಾಯರ ಮಠದ ಜೊತೆಗೆ ರಜನೀಕಾಂತ್ ತುಂಬಾ ನಂಟು ಹೊಂದಿದ್ದಾರೆ. ಇದೇ ಕಾರಣಕ್ಕೆ ಚೆನ್ನೈನಲ್ಲಿ ರಾಘವೇಂದ್ರ ಕಲ್ಯಾಣಮಂಟಪ ಕಟ್ಟಿಸಿದ್ದಾರೆ.

ಜಯನಗರ ಬಿಎಂಟಿಸಿ ಡಿಪೋಗೆ 11.30ಕ್ಕೆ ಬಂದ ರಜನಿಕಾಂತ್ 11.45 ರವರೆಗೂ ಡಿಪೋದಲ್ಲೇ ಇದ್ದರು. ಅಲ್ಲಿದ್ದ ಸಿಬ್ಬಂದಿ ಜೊತೆ ಮಾತನಾಡಿ ಡಿಪೋ ಒಳಗೆ ಸುತ್ತಾಡಿ ಬಳಿಕ ತೆರಳಿದರು. ಜಯನಗರ ಘಟಕ–4 1966 ಬೋರ್ಡ್ ಮುಂದೆ ಫೋಟೋ ತೆಗೆಸಿಕೊಳ್ಳಲು ಬಂದಿದ್ದರು. ರಜನಿ ಜೊತೆ ಬಸ್ ಚಾಲಕರಾಗಿ ಕೆಲಸ ಮಾಡಿದ್ದ ರಾಜ್ ಬಹದ್ದೂರ್ ಇದ್ದರು. ರಜನಿಕಾಂತ್ ಪ್ರಸಿದ್ಧ ನಟರಾಗುವುದಕ್ಕೂ ಮುನ್ನ ಬಿಎಂಟಿಸಿಯಲ್ಲಿ ಕಂಡಕ್ಟರ್ ಆಗಿ ಕಾರ್ಯನಿರ್ವಹಿಸಿದ್ದರು.

ಇಂದಿನಿಂದ ಏಷ್ಯಾ ಕಪ್ ಕ್ರಿಕೆಟ್ ಕದನ

ನವದೆಹಲಿ,ಆ.29–ಏಷ್ಯಾಕಪ್ ಕ್ರಿಕೆಟ್ ಟೂರ್ನಮೆಂಟ್ 2023 ನಾಳೆ(ಆ.30)ಯಿಂದ ಪ್ರಾರಂಭವಾಗಲಿದೆ. ಇದರಲ್ಲಿ 6 ದೇಶಗಳ ತಂಡಗಳು ಪರಸ್ಪರ ಹಣಾಹಣಿ ನಡೆಸಲಿವೆ. ಈ ಬಾರಿ, 7 ಬಾರಿಯ ಚಾಂಪಿಯನ್ ಭಾರತ, 6 ಬಾರಿ ವಿಜೇತ ಶ್ರೀಲಂಕಾ ಮತ್ತು 2 ಬಾರಿ ವಿಜೇತ ಪಾಕಿಸ್ತಾನದ ನಡುವೆ ತೀವ್ರ ಪೈಪೋಟಿಯನ್ನು ನಿರೀಕ್ಷಿಸಲಾಗುತ್ತಿದೆ. ಅದರಲ್ಲೂ ಪಾಕಿಸ್ತಾನ ಈ ಬಾರಿ ಪ್ರಬಲ ತಂಡವಾಗಿ ಕಂಡುಬರುತ್ತಿದೆ. ಇದಕ್ಕೆ ಕಾರಣ ಇತ್ತೀಚೆಗಷ್ಟೇ ಏಕದಿನ ಶ್ರೇಯಾಂಕದಲ್ಲಿ ಅಗ್ರಸ್ಥಾನವನ್ನು ಅಲಂಕರಿಸಿದೆ. ಅಲ್ಲದೇ ಏಕದಿನ ಬ್ಯಾಟಿಂಗ್ ಶ್ರೇಯಾಂಕದಲ್ಲಿ ಬಾಬರ್ ಅಜಮ್ ನಂ.1 ಆದರೆ, ಇಮಾಮ್ ಉಲ್ ಹಕ್ ಮತ್ತು ಫಖರ್ ಜಮಾನ್ ಕ್ರಮವಾಗಿ 3, 5ನೇ ಸ್ಥಾನದಲ್ಲಿದ್ದಾರೆ. ಪುರುಷರ ಏಷ್ಯಾ ಕಪ್ ಆ.30ರಿಂದ ಪ್ರಾರಂಭವಾಗಲಿದ್ದು, ಸಂಪೂರ್ಣವಾಗಿ ಪಾಕಿಸ್ತಾನದಲ್ಲಿ ನಡೆಯಬೇಕಿತ್ತು. ಆದರೆ ಭಾರತ ತಂಡವು ಪಾಕಿಸ್ತಾನ ಪ್ರವಾಸ ಮಾಡದ ಹಿನ್ನೆಲೆಯಲ್ಲಿ ಶ್ರೀಲಂಕಾ ಮತ್ತು ಪಾಕಿಸ್ತಾನದಲ್ಲಿ ಹೈಬ್ರಿಡ್ ಮಾದರಿಯಲ್ಲಿ ಪಂದ್ಯಗಳನ್ನು ಆಡಿಸಲಾಗುತ್ತಿದೆ. ಎರಡು ಆತಿಥೇಯ ರಾಷ್ಟ್ರಗಳಲ್ಲದೆ, ಅಫ್ಘಾನಿಸ್ತಾನ, ಬಾಂಗ್ಲಾದೇಶ, ಭಾರತ ಮತ್ತು ನೇಪಾಳದ ತಂಡಗಳು 16 ನೇ ಆವೃತ್ತಿಯ ಏಷ್ಯಾ ಕಪ್‌ನಲ್ಲಿ ಭಾಗವಹಿಸಲಿವೆ. ಏಷ್ಯಾ ಕಪ್ 2023ರ ಮೊದಲ ಪಂದ್ಯ ಆತಿಥೇಯ ಪಾಕಿಸ್ತಾನ ಮತ್ತು ನೇಪಾಳ ನಡುವೆ ನಡೆಯಲಿದೆ.

ಚಾಮುಂಡೇಶ್ವರಿಗೆ ಹರಕೆ ತೀರಿಸಿದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ

ಭ್ರಷ್ಟಾಚಾರದಲ್ಲಿ ಮಿಂದೆದ್ದವರು ಯಾವ ನೈತಿಕತೆ ಇಟ್ಟುಕೊಂಡು ಚಾರ್ಜ್‌ಶೀಟ್ ಫೈಲ್ ಮಾಡುತ್ತಾರೆ: ರಾಜ್ಯ ಬಿಜೆಪಿ ನಾಯಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು



ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಮಂಗಳವಾರ ನಾಡಿನ ಅಧಿದೇವತೆ ಚಾಮುಂಡೇಶ್ವರಿ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.

ಮೈಸೂರು,ಆ.29(ಬಿಎಲ್‌ಯು)– ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಹಾಗೂ ಉದ್ದೇಶಿತ ಐದು ಗ್ಯಾರಂಟಿಗಳನ್ನು ಈಡೇರಿಸಲು ಅವಕಾಶ ಕಲ್ಪಿಸುವಂತೆ ಚಾಮುಂಡೇಶ್ವರಿಯಲ್ಲಿ ಈ ಹಿಂದೆ ಹರಕೆ ಹೊತ್ತಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೇವಿಯ ದರ್ಶನ ಪಡೆಯುವ ಮೂಲಕ ಸರ್ಕಾರದ 4ನೇ ಗ್ಯಾರಂಟಿ ಗೃಹ ಲಕ್ಷ್ಮಿ ಯೋಜನೆ ಜಾರಿಯ ಮುನ್ನಾ ದಿನ ಸಾಂಕೇತಿಕವಾಗಿ 2000 ರೂ. ಕಾಣಿಕೆ ಸಲ್ಲಿಸುವ ಮೂಲಕ ಹರಕೆ ತೀರಿಸಿದರು.

ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಭ್ರಷ್ಟಾಚಾರದಲ್ಲಿ ಮುಳುಗಿದ್ದ ಬಿಜೆಪಿಯವರು ನಮ್ಮ ಸರ್ಕಾರದ ಬಗ್ಗೆ ಅದ್ಯಾವ ನೈತಿಕತೆ ಇಟ್ಟುಕೊಂಡು ಚಾರ್ಜ್‌ಶೀಟ್ ಫೈಲ್ ಮಾಡುತ್ತಾರೆ ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ನೂರು ದಿನ ಪೂರೈಸಿರುವ ಹಿನ್ನೆಲೆಯಲ್ಲಿ ಬಿಜೆಪಿಯವರು ಚಾರ್ಜ್‌ಶೀಟ್ ಫೈಲ್ ಮಾಡುತ್ತಿರುವ ಬಗ್ಗೆ ಖಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ಚಾರ್ಜ್‌ಶೀಟ್ ಫೈಲ್ ಮಾಡಲು ನಮ್ಮ ಸರ್ಕಾರದಲ್ಲಿ ಯಾವ ಲೋಪವಾಗಿದೆ. ಯಾವ ವಿಚಾರ ಇಟ್ಟುಕೊಂಡು ಬಿಜೆಪಿಯವರು ಚಾರ್ಜ್‌ಶೀಟ್ ಫೈಲ್ ಮಾಡುತ್ತಾರೆ ಎಂದು ಪ್ರಶ್ನಿಸಿದರು.

ಪಿಎಸ್‌ಐ ಹಗರಣ, 40 ಪರ್ಸೆಂಟ್ ಕಮಿಷನ್, ಕೋವಿಡ್ ಹಗರಣ ಸೇರಿದಂತೆ ಎಲ್ಲಾ ಹಗರಣದ ಬಗ್ಗೆ ತನಿಖೆ ಮಾಡಿಸುತ್ತೇವೆ. ಇಲ್ಲಿ ಯಾರನ್ನೂ ಟಾರ್ಗೆಟ್ ಮಾಡುತ್ತಿಲ್ಲ. ಹಾಗಾದರೆ ಇವರು ಮಾಡಿರುವ ಹಗರಣದ ಬಗ್ಗೆ ತನಿಖೆ ಮಾಡಿಸದೆ ಹಾಗೆ ತಿಂದು ಹೋಗಲಿ ಅಂತ ಬಿಡಬೇಕಾ ಎಂದು ಕೋಪೋದ್ರಿಕ್ತರಾಗಿ ಪ್ರಶ್ನಿಸಿದ ಸಿದ್ದರಾಮಯ್ಯ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಹಗರಣದ ಬಗ್ಗೆ ತನಿಖೆ ಮಾಡಿಸುವುದಾಗಿ ಅಂದೆ ರಾಜ್ಯದ ಜನತೆಗೆ ತಿಳಿಸಿದ್ದೆವು. ಈಗ ನುಡಿದಂತೆ ನಡೆದಿದ್ದೇವೆ ಎಂದು ಹೇಳಿದರು.

ಸರ್ಕಾರ 100 ದಿನ ಪೂರೈಸಿರುವ ಅವಧಿಯೊಳಗೆ ಗ್ಯಾರಂಟಿ ಸ್ಕೀಂಗಳನ್ನು ಜಾರಿಗೊಳಿಸಿರುವುದು ನಮಗೆ ಸವಾಲು ಅನಿಸಲಿಲ್ಲ. ರಾಜಕೀಯ ಇಚ್ಛಾಶಕ್ತಿ ಹಾಗೂ ಬದ್ಧತೆ ಇದ್ದ ಕಾರಣ ಯಾವುದೂ ನಮಗೆ ಸವಾಲು ಅಥವಾ ಕಠಿಣ ಅನ್ನಿಸಲಿಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಗೃಹಲಕ್ಷ್ಮಿ ಯೋಜನೆ ಒಂದಕ್ಕೆ ವಾರ್ಷಿಕ 32 ಸಾವಿರ ಕೋಟಿ ರೂ. ಖರ್ಚಾಗುತ್ತದೆ. ದೇಶದ ಇತಿಹಾಸದಲ್ಲೇ ಇದು ದೊಡ್ಡ ಪ್ರಮಾಣದಲ್ಲಿ ಖರ್ಚು ಮಾಡುತ್ತಿರುವ ಸರ್ಕಾರದ ಕಾರ್ಯಕ್ರಮವಾಗಿದೆ. ಗ್ಯಾರಂಟಿ ಸ್ಕೀಂ ಜಾರಿಗೊಳಿಸಿದರೆ ರಾಜ್ಯ ದಿವಾಳಿ ಆಗುತ್ತದೆ ಎಂದು ಸ್ವತಃ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ನಾಯಕರು ಬೊಬ್ಬೆ ಹೊಡೆದರು. ಆದರೆ ನಾವು ವ್ಯವಸ್ಥಿತವಾಗಿ ಗ್ಯಾರಂಟಿ ಸ್ಕೀಂಗಳನ್ನು ಜಾರಿಗೊಳಿಸಿದ್ದೇವೆ ಎಂದು ಸಿದ್ದರಾಮಯ್ಯ ತಿಳಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್, ಶಾಸಕರಾದ ಕೆ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ಡಿ.ರವಿಶಂಕರ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್ ಸೇರಿದಂತೆ ಹಲವರು ಈ ಸಂದರ್ಭದಲ್ಲಿ ಹಾಜರಿದ್ದರು.

ನನ್ನ, ಡಿ.ಕೆ.ಶಿವಕುಮಾರ್ ದೂರ ಮಾಡಲು ಎಷ್ಟು ಪ್ರಯತ್ನಿಸುತ್ತಾರೋ ನಾವಿಬ್ಬರೂ ಅಷ್ಟೇ ಹತ್ತಿರವಾಗುತ್ತೇವೆ...

ವಿಪಕ್ಷಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಟಾಂಗ್

● ಗ್ಯಾರಂಟಿ ಸ್ಕೀಂ ಸಂಕೇತವಾಗಿ ಕಾಣಿಕೆಗೆ 2 ಸಾವಿರ
● ದೃಷ್ಟಿ ತೆಗೆದ ಮಂಗಳಮುಖಿಯರಿಗೆ ಭರ್ಜರಿ ಭಕ್ಷಿಸ್

ಮೈಸೂರು, ಆ.29(ಬಿಎಲ್‌ಯು)– ಡಿ.ಕೆ.ಶಿವಕುಮಾರ್ ಹಾಗೂ ನನ್ನನ್ನು ದೂರ ಮಾಡಲು ಎಷ್ಟು ಯತ್ನಿಸುತ್ತಾರೋ ನಾವಿಬ್ಬರು ಅಷ್ಟೆ ಹತ್ತಿರವಾಗುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ಹಾಗೂ ಜೆಡಿಎಸ್ ನಾಯಕರಿಗೆ ತಿರುಗೇಟು ನೀಡಿದರು.

ನಿಮ್ಮಿಬ್ಬರ ಸಂಬಂಧದ ಬಗ್ಗೆ ವಿರೋಧ ಪಕ್ಷಗಳು ಅನುಮಾನದ ಮಾತುಗಳನ್ನಾಡುತ್ತಿದ್ದಾರೆ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಅವರು ಹೇಳಿದಷ್ಟು ನಾವಿಬ್ಬರೂ ಚೆನ್ನಾಗಿ ಆಗುತ್ತಿದ್ದೇವೆ ಎಂದರು.

ಈ ವೇಳೆ ಮಧ್ಯ ಪ್ರವೇಶಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿರೋಧ ಪಕ್ಷಗಳು ನಮ್ಮ ಸಂಬಂಧದ ವಿಚಾರವಾಗಿ ಮಾತಾಡುತ್ತಲೇ ಇರಲಿ. ನಾವು ಸದಾ ಒಟ್ಟಾಗಿರುವುದನ್ನು ನೀವು ನೋಡುತ್ತಾ ಇರಿ ಎಂದು ವಿರೋಧ ಪಕ್ಷಗಳಿಗೆ ಟಾಂಗ್ ನೀಡಿದರು.

ಚುನಾವಣೆ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಘೋಷಣೆ ಮಾಡುವ ವೇಳೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಚಾಮುಂಡಿಬೆಟ್ಟಕ್ಕೆ ಬಂದು ಗ್ಯಾರಂಟಿ ಸ್ಕೀಂ ಕಾರ್ಡ್‌ಗಳನ್ನು ದೇವರ ಮುಂದಿಟ್ಟು ಪೂಜೆ ಸಲ್ಲಿಸಿದ್ದರು. ಈಗಾಗಲೇ 3 ಗ್ಯಾರಂಟಿ ಸ್ಕೀಂ ಜಾರಿಯಾಗಿದೆ. 4ನೆ ಗ್ಯಾರಂಟಿ ಸ್ಕೀಂಗೆ ಬುಧವಾರ ಚಾಲನೆ ದೊರೆಯಲಿದೆ. ಗೃಹಲಕ್ಷ್ಮಿ ಯೋಜನೆಯಲ್ಲಿ ಕುಟುಂಬದ ಯಜಮಾನಿಗೆ ಸರ್ಕಾರದಿಂದ 2 ಸಾವಿರ ದೊರೆಯುತ್ತಿದೆ. ಈ ಹಿನ್ನೆಲೆಯಲ್ಲಿ ಚಾಮುಂಡಿಬೆಟ್ಟಕ್ಕೆ ಒಟ್ಟಾಗಿ ಆಗಮಿಸಿದ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್, ನಾಡದೇವತೆ ತಾಯಿ ಚಾಮುಂಡೇಶ್ವರಿ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಕುಟುಂಬದ ಯಜಮಾನಿಗೆ 2 ಸಾವಿರ ನೀಡುತ್ತಿರುವ ಸಂಕೇತವಾಗಿ ಚಾಮುಂಡೇಶ್ವರಿ ದೇವಿಯ ಹುಂಡಿಗೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ತಲಾ 2 ಸಾವಿರ ಕಾಣಿಕೆ ಸಲ್ಲಿಸಿದರು.

ಡಿ.ಕೆ.ಶಿವಕುಮಾರ್ ದೇವಾಲಯದ ಪ್ರವೇಶ ದ್ವಾರದಲ್ಲಿ ಈಡುಗಾಯಿ ಒಡೆದರು. ಈ ವೇಳೆ ಮಂಗಳಮುಖಿ ಯರು ಡಿ.ಕೆ.ಶಿವಕುಮಾರ್‌ಗೆ ದೃಷ್ಟಿ ತೆಗೆದರು. ಇದರಿಂದ ಸಂತಸಗೊಂಡ ಡಿ.ಕೆ. ಶಿವಕುಮಾರ್ ಮಂಗಳಮುಖಿಯರಿಗೆ ಭರ್ಜರಿ ಭಕ್ಷಿಸ್ ನೀಡಿದರು.

ವುಶು ಸಮರ ಕಲೆಯಲ್ಲಿ ಮಹಿಳಾ ಪಟುಗಳ ರೋಚಕ ಕಾದಾಟ

● ಮೈಸೂರಲ್ಲಿ ರಾಜ್ಯಮಟ್ಟದ ಮಹಿಳಾ ವುಶು ಚಾಂಪಿಯನ್‌ಶಿಪ್ ● 200ಕ್ಕೂ ಹೆಚ್ಚು ಪಟುಗಳು ಭಾಗಿ



ಮೈಸೂರಿನ ಚಾಮುಂಡಿ ವಿಹಾರದ ಒಳಾಂಗಣ ಕ್ರೀಡಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಮಹಿಳಾ ವುಶು ಚಾಂಪಿಯನ್‌ಶಿಪ್‌ಗೆ ರಾಜವಂಶಸ್ಥೆ ತ್ರಿಷಿಕಾಕುಮಾರಿ ಚಾಲನೆ ನೀಡಿದರು.

ಮೈಸೂರು,ಆ.29(ಪಿಎಂ)– ಕರ್ನಾಟಕ ವುಶು ಸಂಸ್ಥೆ, ಮೈಸೂರು ಜಿಲ್ಲಾ ವುಶು ಸಂಸ್ಥೆ ಜಂಟಿ ಆಶ್ರಯದಲ್ಲಿ ನಡೆದ ಖೇಲೋ ಇಂಡಿಯಾ ರಾಜ್ಯಮಟ್ಟದ ಮಹಿಳಾ ವುಶು ಚಾಂಪಿಯನ್‌ಶಿಪ್ ಪಂದ್ಯಾವಳಿಯಲ್ಲಿ ಮಹಿಳಾ ಪಟುಗಳು ಸಮರ ಕಲೆಯಲ್ಲಿನ ತಮ್ಮ ಕೌಶಲ್ಯ ಮೆರೆದು ರೋಮಾಂಚನ ಉಂಟು ಮಾಡಿದರು.

ಮೈಸೂರಿನ ಚಾಮುಂಡಿ ವಿಹಾರದ ಒಳಾಂಗಣ ಕ್ರೀಡಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಈ ಪಂದ್ಯಾವಳಿಯಲ್ಲಿ ರಾಜ್ಯದ 18 ಜಿಲ್ಲೆಗಳ 200ಕ್ಕೂ ಹೆಚ್ಚು ಮಹಿಳಾ ಪಟುಗಳು ಭಾಗವಹಿಸಿದ್ದರು. ರಾಷ್ಟ್ರೀಯ ಕ್ರೀಡಾ ದಿನದ ಪ್ರಯುಕ್ತ ಆಯೋಜಿಸಿದ್ದ ಈ ಪಂದ್ಯಾವಳಿಗೆ ರಾಜವಂಶಸ್ಥೆ ತ್ರಿಷಿಕಾ ಕುಮಾರಿ ಚಾಲನೆ ನೀಡಿದರು. ಇದೇ ವೇಳೆ ಪಂದ್ಯಾವಳಿ ಕುರಿತು 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಕರ್ನಾಟಕ ವುಶು ಸಂಸ್ಥೆ ಪ್ರಧಾನ ಕಾರ್ಯದರ್ಶಿ, ವುಶು ಅಸೋಸಿಯೇಷನ್ ಆಫ್ ಇಂಡಿಯಾದ ಜಂಟಿ ಕಾರ್ಯದರ್ಶಿ ಅಶೋಕ ಡಿ.ಮೊಕಾಶಿ, 'ವುಶು' ಮೂಲತಃ ಭಾರತದ ಸಮರ ಕಲೆ. ಬೌದ್ಧ ಧರ್ಮ ಪ್ರಚಾರದ ಹಿನ್ನೆಲೆಯಲ್ಲಿ ಬೇರೆ ಬೇರೆ ದೇಶಗಳಲ್ಲಿ ಹರಡಿ, ಚೀನಾದಲ್ಲಿ ಅಭಿವೃದ್ಧಿಗೊಂಡಿತು ಎಂದು ತಿಳಿಸಿದರು.

ಸುಮಾರು 145 ದೇಶಗಳಲ್ಲಿ ಈ ಸಮರ ಕಲೆ ಸ್ಥಾನ ಪಡೆದಿದೆ. 1989ರಲ್ಲಿ ನಮ್ಮ ದೇಶದಲ್ಲಿ ಈ ಸಮರ ಕಲೆ ಪುನರುಜ್ಜೀವನ ಕಂಡಿತು. ಅಂತೆಯೇ ಕರ್ನಾಟಕದಲ್ಲೂ ಕಾಯಕಲ್ಪ ಕಾಣುವಂತಾಯಿತು. ಭಾರತದ ಎಲ್ಲಾ ರಾಜ್ಯಗಳಲ್ಲೂ ಈ ಸಮರ ಕಲೆಯ ಪಟುಗಳು ಇದ್ದಾರೆ. ಕ್ರೀಡಾ ಇಲಾಖೆಯು ವುಶುಗೆ 'ಎ' ದರ್ಜೆಯ ಮಾನ್ಯತೆ ನೀಡಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತಕ್ಕೆ ಹೆಚ್ಚು ಪದಕ ತರುವ ಸಮರ ಕಲೆ ಎಂದು ಇದನ್ನು ಗುರುತಿಸಲಾಗಿದೆ ಎಂದರು.

ರಾಜ್ಯದ 24 ಜಿಲ್ಲೆಗಳಲ್ಲಿ ವುಶು ಸಮರ ಕಲೆಗೆ ಕರ್ನಾಟಕ ವುಶು ಸಂಸ್ಥೆ ಉತ್ತೇಜನ ನೀಡುತ್ತಿದ್ದು, ಸಂಸ್ಥೆಯಡಿ ಜಿಲ್ಲಾ ಘಟಕಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಭಾರತೀಯ ಕ್ರೀಡಾ ಪ್ರಾಧಿಕಾರವು ತಳಮಟ್ಟದಲ್ಲಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲು ಖೇಲೋ ಇಂಡಿಯಾ ಯೋಜನೆ ರೂಪಿಸಿದೆ. ಈ ಯೋಜನೆಯಡಿಯಲ್ಲಿ ದೇಶದ 25 ರಾಜ್ಯಗಳಲ್ಲಿ ಏಕಕಾಲದಲ್ಲಿ ರಾಜ್ಯಮಟ್ಟದ ಮಹಿಳಾ ವುಶು ಚಾಂಪಿಯನ್‌ಶಿಪ್ ನಡೆಯುತ್ತಿದೆ ಎಂದರು.

ಅಂತೆಯೇ ಮೈಸೂರಿನಲ್ಲೂ ಪಂದ್ಯಾವಳಿ ನಡೆಯುತ್ತಿದ್ದು, ಸಬ್ ಜೂನಿಯರ್ (7ರಿಂದ 14 ವರ್ಷ), ಜೂನಿಯರ್ (14ರಿಂದ 18 ವರ್ಷ) ಹಾಗೂ ಸೀನಿಯರ್ (18ರಿಂದ 40 ವರ್ಷ) ವಿಭಾಗಗಳಲ್ಲಿ ಪಂದ್ಯಗಳು ನಡೆಯಲಿವೆ. ಇಲ್ಲಿ ಆಯ್ಕೆಯಾದವರಿಗೆ ಪದಕ ಮತ್ತು ಪ್ರಮಾಣ ಪತ್ರ ದೊರೆಯಲಿದ್ದು, ಅವರು ಮುಂದಿನ ದಿನಗಳಲ್ಲಿ ನಡೆಯುವ ದಕ್ಷಿಣ ವಲಯ (ದಕ್ಷಿಣ ಭಾರತ) ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಲಿದ್ದಾರೆ. ಈ ಹಂತದಲ್ಲಿ ಉತ್ತಮ ಪ್ರದರ್ಶನ ನೀಡಿದವರು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಲಿದ್ದಾರೆ ಎಂದು ಮಾಹಿತಿ ನೀಡಿದರು. ಮೈಸೂರು ವುಶು ಸಂಸ್ಥೆ ಪ್ರಧಾನ ಕಾರ್ಯದರ್ಶಿ ಎಂ.ಎ.ಧರ್ಮ ಸೇರಿದಂತೆ ಮತ್ತಿತರರು ಹಾಜರಿದ್ದರು.

ಹುಬ್ಬಳ್ಳಿ ಟೈಗರ್ಸ್‌ಗೆ ಮಹಾರಾಜ ಟ್ರೋಫಿ

ಮತ್ತೆ ಮನೀಷ್ ಪಾಂಡೆ ಸಾರಥ್ಯಕ್ಕೆ ಒಲಿದ ಪ್ರಶಸ್ತಿ



ಬೆಂಗಳೂರು: ಬ್ಯಾಟರ್ ಮೊಹಮದ್ ತಾಹ (72 ರನ್, 40 ಎಸೆತ, 7 ಬೌಂಡರಿ, 4 ಸಿಕ್ಸರ್) ಹಾಗೂ ನಾಯಕ ಮನೀಷ್ ಪಾಂಡೆ (50* ರನ್, 23 ಎಸೆತ, 3 ಬೌಂಡರಿ, 4 ಸಿಕ್ಸರ್) ಅರ್ಧಶತಕಗಳ ಬಲ ಮತ್ತು ವೇಗಿ ಮನ್ವಂತ್ ಕುಮಾರ್ (32ಕ್ಕೆ 3) ಕೊನೇ ಓವರ್‌ನ ಬಿಗಿ ಬೌಲಿಂಗ್ ದಾಳಿಯ ನೆರವಿನಿಂದ ಹುಬ್ಬಳ್ಳಿ ಟೈಗರ್ಸ್ ತಂಡ 2ನೇ ಆವೃತ್ತಿಯ ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡಿದೆ.

ಮಂಗಳವಾರ ನಡೆದ ಫೈನಲ್ ಪಂದ್ಯದಲ್ಲಿ ಮನೀಷ್ ಪಾಂಡೆ ಬಳಗ ಮೈಸೂರು ವಾರಿಯರ್ಸ್ ಎದುರು 8 ರನ್‌ಗಳಿಂದ ರೋಚಕ ಗೆಲುವು ದಾಖಲಿಸಿ ಚಾಂಪಿಯನ್ ಪಟ್ಟವೇರಿತು. ಇದರೊಂದಿಗೆ ಟೂರ್ನಿಯಲ್ಲಿ ಸತತ 2ನೇ ವರ್ಷ ಮನೀಷ್ ಪಾಂಡೆ ನಾಯಕತ್ವದ ತಂಡವೊಂದು ಪ್ರಶಸ್ತಿ ಗೆದ್ದಂತಾಗಿದೆ. ಕಳೆದ ವರ್ಷ ಗುಲ್ಬರ್ಗಾ ಮಿಸ್ಟಿಕ್ಸ್ ತಂಡ ಮನೀಷ್ ಪಾಂಡೆ ಸಾರಥ್ಯದಲ್ಲೇ ಪ್ರಶಸ್ತಿ ಗೆದ್ದಿತ್ತು.

ಇತರ ಪ್ರಶಸ್ತಿಗಳ ಪಟ್ಟಿ: ಫೈನಲ್‌ನ ಪಂದ್ಯಶ್ರೇಷ್ಠ: ಮನೀಷ್ ಪಾಂಡೆ

ಟೂರ್ನಿಯ ಗರಿಷ್ಠ ಸ್ಕೋರರ್: ಕರುಣ್ ನಾಯರ್, 532 ರನ್ (ಮೈಸೂರು ವಾರಿಯರ್ಸ್).

ಟೂರ್ನಿಯ ಗರಿಷ್ಠ ವಿಕೆಟ್: ಮನ್ವಂತ್ ಕುಮಾರ್, 22 ವಿಕೆಟ್ (ಹುಬ್ಬಳ್ಳಿ ಟೈಗರ್ಸ್).

ಸರಣಿ ಶ್ರೇಷ್ಠ: ಮೊಹಮದ್ ತಾಹ

ಉದಯೋನ್ಮುಖ ಬ್ಯಾಟರ್: ಕಾರ್ತಿಕ್ ಎಸ್‌ಯು (ಮೈಸೂರು ವಾರಿಯರ್ಸ್).

ಉದಯೋನ್ಮುಖ ವಿಕೆಟ್ ಕೀಪರ್: ಲವ್ನೀತ್ ಸಿಸೋಡಿಯಾ (ಹುಬ್ಬಳ್ಳಿ ಟೈಗರ್ಸ್).

ಉದಯೋನ್ಮುಖ ಆಲ್ರೌಂಡರ್: ಮನ್ವಂತ್ ಕುಮಾರ್ (ಹುಬ್ಬಳ್ಳಿ ಟೈಗರ್ಸ್).

ಉದಯೋನ್ಮುಖ ಬೌಲರ್: ಹಾರ್ದಿಕ್ ರಾಜ್ (ಗುಲ್ಬರ್ಗಾ ಮಿಸ್ಟಿಕ್ಸ್).

ಫೇರ್ ಪ್ಲೇಯರ್ ಆಫ್ ದಿ ಟೂರ್ನ್‌ಮೆಂಟ್: ಶ್ರೇಯಸ್ ಗೋಪಾಲ್ (ಶಿವಮೊಗ್ಗ ಲಯನ್ಸ್)

ಟೂರ್ನಿಯ ಬೆಸ್ಟ್ ಫೀಲ್ಡರ್: ಪ್ರವೀಣ್ ದುಬೆ (ಹುಬ್ಬಳ್ಳಿ ಟೈಗರ್ಸ್). ಎಲ್ಲ ಪ್ರಶಸ್ತಿಗಳು 25 ಸಾವಿರ ಬಹುಮಾನ ಮೊತ್ತ ಹೊಂದಿವೆ.

ಹಾವೇರಿಯಲ್ಲಿ ಪಟಾಕಿ ಗೋದಾಮಿಗೆ ಬೆಂಕಿ: ನಾಲ್ವರು ಸಜೀವ ದಹನ

5 ಲಕ್ಷ ರೂ. ಪರಿಹಾರ ಘೋಷಿಸಿದ ಮುಖ್ಯಮಂತ್ರಿ



ಹಾವೇರಿ: ಹಾವೇರಿ ಜಿಲ್ಲೆಯ ಆಲದ ಕಟ್ಟಿ ಗ್ರಾಮದ ಪಟಾಕಿ ಗೋದಾಮಿನಲ್ಲಿ ಮಂಗಳವಾರ ಸಂಭವಿಸಿದ ಭಾರೀ ಅಗ್ನಿ ಅವಘಡದಲ್ಲಿ ನಾಲ್ವರು ಕಾರ್ಮಿಕರು ಸಜೀವ ದಹನವಾಗಿದ್ದು, ಗೋದಾಮಿನ ಪಕ್ಕದಲ್ಲಿದ್ದ ಮಹಿಳೆ ಸೇರಿದಂತೆ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಹಾವೇರಿಯ ಹೊರವಲಯದ ಆಲದಕಟ್ಟಿ ಗ್ರಾಮದಲ್ಲಿ ಕುಮಾರ್ ಎಂಬುವವರಿಗೆ ಸೇರಿದ ಭೂಮಿಕಾ ಪಟಾಕಿ ಗೋದಾಮಿನಲ್ಲಿ ಈ ದುರಂತ ಸಂಭವಿಸಿದ್ದು, ಸುಮಾರು ಒಂದು ಕೋಟಿಗೂ ಹೆಚ್ಚು ಮೌಲ್ಯದ ಪಟಾಕಿ ದಾಸ್ತಾನು ಮಾಡಲಾಗಿತ್ತು ಎನ್ನಲಾಗಿದೆ.

ಮೃತರನ್ನು ಗೋದಾಮಿನಲ್ಲಿ ಕೆಲಸ ಮಾಡುತ್ತಿದ್ದ ಕಾಟೇನಹಳ್ಳಿ ಗ್ರಾಮದ 45 ವರ್ಷದ ದ್ಯಾಮಪ್ಪ ಓಲೇಕಾರ, 28 ವರ್ಷದ ರಮೇಶ್ ಬಾರ್ಕಿ, 28 ವರ್ಷದ ಶಿವಲಿಂಗ ಅಕ್ಕಿ ಮತ್ತು 45 ವರ್ಷದ ಜಯಣ್ಣ ಎಂದು ಗುರುತಿಸಲಾಗಿದೆ. ನಾಲ್ವರ ದೇಹಗಳು ಸುಟ್ಟು ಕರಕಲಾಗಿವೆ.

ಗೋದಾಮಿನ ಸಮೀಪದ ಮನೆಯ ನಿವಾಸಿ ಕಲಾವತಿ, ವಾಸಿಂ ಶಫಿ ಅಹಮದ್ ಮತ್ತು ಶೇರು ಮಾಳಪ್ಪ ಕಟ್ಟಿಮನಿ ಅವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಹಾವೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಪಟಾಕಿ ಅವಘಡದ ಬಗ್ಗೆ ಮಾಹಿತಿ ಪಡೆದುಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೃತರ ಕುಟುಂಬಸ್ಥರಿಗೆ ತಲಾ ಐದು ಲಕ್ಷ ರೂ. ಪರಿಹಾರ ಘೋಷಣೆ ಮಾಡಿದ್ದಾರೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಹರಸಾಹಸ ಪಟ್ಟು ಬೆಂಕಿ ನಂದಿಸಿದ್ದಾರೆ. ಪಟಾಕಿ ಇಟ್ಟಿದ್ದ ಕಟ್ಟಡದ ಬಳಿ ವೆಲ್ಡಿಂಗ್ ಕಾರ್ಯ ನಡೆಯುತ್ತಿತ್ತು. ಪರಿಣಾಮ ವೆಲ್ಡಿಂಗ್ ಮಾಡುವ ಸಂದರ್ಭದಲ್ಲಿ ಬೆಂಕಿ ಕಿಡಿ ತಗುಲಿರುವ ಶಂಕೆ ವ್ಯಕ್ತವಾಗಿದೆ.

ಮೂರನೇ ಪುಟದಿಂದ

ದಸರಾ ಉದ್ಘಾಟನೆ ಮಾಡ್ತೇನೆ...

ವೈಭವವನ್ನು ಈ ಬಾರಿಯ ದಸರಾ ಉದ್ಘಾಟಕರಾದ ಹಂಸಲೇಖ ಮೆಲುಕು ಹಾಕಿದ್ದಾರೆ.

ವಿಶ್ವ ಪ್ರಸಿದ್ಧ ಮೈಸೂರು ದಸರಾ ಮಹೋತ್ಸವವನ್ನು ಅಕ್ಟೋಬರ್ 15 ರಂದು ಉದ್ಘಾಟಿಸುತ್ತಿರುವ ಖ್ಯಾತ ಚಲನಚಿತ್ರ ಸಂಗೀತ ನಿರ್ದೇಶಕ ಹಂಸಲೇಖ ಅವರು ಮಹಾರಾಜರ ಕಾಲದಲ್ಲಿ ತಾವು ಕಂಡ ದಸರಾ ವೈಭವವನ್ನು ಕಣ್ಣಿಗೆ ಕಟ್ಟಿದಂತೆ ವರ್ಣಿಸಿದ್ದಾರೆ. ನಮ್ಮ ತಂದೆ ದಸರಾ ನೋಡಲು ನನ್ನ ಕರೆದುಕೊಂಡು ಬಂದಿದ್ದರು. ನನ್ನನ್ನು ಹೆಗಲ ಮೇಲೆ ಕೂರಿಸಿ ಕೊಂಡಿದ್ದ ನಮ್ಮ ಅಪ್ಪ, ಕಪ್ಪು ಕನ್ನಡಕ ಹಾಕಿರುವ ಮಹಾರಾಜರನ್ನು ನೋಡೋ ಎಂದು ತೋರಿಸಿದ್ದರು. ಅಂಬಾರಿ ಆನೆ ಮೇಲೆ ಆಸೀನರಾಗಿದ್ದ ಜಯಚಾಮರಾಜೇಂದ್ರ ಒಡೆಯರ್ ಅವರ ಠೀವಿ ನನಗೆ ಇನ್ನು ಕಣ್ಣ ಮುಂದೆ ಹಚ್ಚ ಹಸಿರಾಗಿದೆ ಎಂದು ಹಿಂದೆ ನೋಡಿದ ವೈಭವವನ್ನು ವಿವರಿಸಿದ್ದಾರೆ.

ವಿಜಯನಗರದ ಸಾಮ್ರಾಜ್ಯದಲ್ಲಿದ್ದ ದಸರಾ ವೈಭವವನ್ನು ಮೈಸೂರು ಮಹಾರಾಜರು ಇಲ್ಲಿಗೆ ತಂದರು. ಇದು ನೂರಾರು ವರ್ಷಗಳ ದೊಡ್ಡ ರಾಜಪರಂಪರೆಯ ವೈಭವವಾಗಿದೆ ಎಂದರು. ಇಷ್ಟೊಂದು ದೊಡ್ಡ ದೊಡ್ಡ ಲೇಖಕರಿದ್ದರೂ ದಸರಾ ಬಗ್ಗೆ ಯಾರೂ ಕೂಡ ಮಹಾ ಕಾವ್ಯ ರಚಿಸಲಿಲ್ಲವಲ್ಲ ಎಂಬ ಬೇಸರವಿದೆ. ಈ ಕನಸಿನ ಬಗ್ಗೆ ಮುಂದೆ ಚರ್ಚೆ ಮಾಡೋಣ ಎಂದು ಹಂಸಲೇಖ ಹೇಳಿದರು.

ದೇವೇಗೌಡರು ಹಾಸನ ಇಲ್ಲವೇ ಮಂಡ್ಯದಿಂದ ಸ್ಪರ್ಧೆ

ಪರಾಭವಗೊಂಡಿದ್ದರು. ಸೋಲಿನ ಸೇಡನ್ನು ತೀರಿಸಿಕೊಳ್ಳಲು ಮತ್ತು ಅವರಿಗೆ ಆಗಿರುವ ನೋವನ್ನು ಅಳಿಸಿ ಹಾಕಲು ಕುಟುಂಬದವರು ಈ ತೀರ್ಮಾನಕ್ಕೆ ಬಂದಿದ್ದಾರೆ ಎನ್ನಲಾಗಿದೆ. ರೇವಣ್ಣ ಹೊರತುಪಡಿಸಿ ಉಳಿದ ಕುಟುಂಬದ ಸದಸ್ಯರೆಲ್ಲರೂ ಹಾಸನದಿಂದಲೇ ಸ್ಪರ್ಧಿಸಬೇಕು ಎಂಬ ಅಪೇಕ್ಷೆ ಪಟ್ಟಿದ್ದಾರೆ. ಅಲ್ಲಿನ ಪಕ್ಷದ ಶಾಸಕರು ಹಾಗೂ ಕಾರ್ಯಕರ್ತರ ಅಭಿಪ್ರಾಯವೂ ಇದೇ ಆಗಿದೆ. ಆದರೆ, ರೇವಣ್ಣ ಅವರು ಮಂಡ್ಯದಿಂದ ಕಣಕ್ಕಿಳಿಸುವ ಯೋಚನೆಯಲ್ಲಿದ್ದಾರೆ. ಕಳೆದ ಚುನಾವಣೆಯಲ್ಲಿ ಗೌಡರು ತಮ್ಮ ಮೊಮ್ಮಗನಿಗಾಗಿ ಹಾಸನ ಕ್ಷೇತ್ರವನ್ನು ಬಿಟ್ಟುಕೊಟ್ಟು ತುಮಕೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿದ್ದರು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರನ್ನು ಮಂಡ್ಯದಿಂದ ಕಣಕ್ಕಿಳಿಸಬೇಕು ಎಂಬ ಅಭಿಲಾಷೆ ಕುಮಾರಸ್ವಾಮಿ ಅವರಲ್ಲಿದೆ. ಆದರೆ, ಪುಟ್ಟರಾಜು ಅವರಿಗೆ ಕಾಂಗ್ರೆಸ್ ಮುಖಂಡರು ಗಾಳ ಹಾಕುತ್ತಿದ್ದು, ಹಸ್ತದಡಿ ನಿಲ್ಲುವಂತೆ ಮನವೊಲಿಸುತ್ತಿದ್ದಾರೆ. ಇದಕ್ಕೆ ಪುಟ್ಟರಾಜು ಮಾತ್ರ ಇನ್ನೂ ಒಪ್ಪಿಲ್ಲ. ದೊಡ್ಡಮಟ್ಟದಲ್ಲಿ ಆಪರೇಷನ್ ಹಸ್ತಾ ಮಾಡುತ್ತಿರುವ ಕಾಂಗ್ರೆಸ್, ಕೇವಲ ಬಿಜೆಪಿ, ಜೆಡಿಎಸ್ ಶಾಸಕರಷ್ಟೇ ಅಲ್ಲ, ಮತಗಳಿಸುವ ಆ ಪಕ್ಷಗಳ ವರ್ಚಸ್ವಿ ನಾಯಕರನ್ನು ಸೆಳೆಯಲು ನಿರಂತರ ಪ್ರಯತ್ನ ನಡೆಸುತ್ತಿದ್ದಾರೆ. ಪುಟ್ಟರಾಜು ಪಕ್ಷಾಂತರಗೊಳ್ಳುವುದನ್ನು ತಪ್ಪಿಸಲು ಕುಮಾರಸ್ವಾಮಿ ಅವರು ಅವರೊಂದಿಗೆ ಎರಡು ಬಾರಿ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ. ಒಂದು ವೇಳೆ ಅವರು ಪಕ್ಷದಲ್ಲೇ ಉಳಿದುಕೊಂಡರೆ, ಗೌಡರನ್ನು ಹಾಸನದಿಂದಲೇ ಕಣಕ್ಕಿಳಿಸಲಿದ್ದಾರೆ ಎನ್ನಲಾಗಿದೆ. ಜೆಡಿಎಸ್ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಆರು ಕ್ಷೇತ್ರಗಳಿಗಷ್ಟೇ ಪಕ್ಷದ ಅಭ್ಯರ್ಥಿಗಳನ್ನು ಕಣಕ್ಕಿಳಿಸಿ ಹೋರಾಟ ನಡೆಸಲು ತೀರ್ಮಾನಿಸಿದೆ. ಈಗಾಗಲೇ ಸಂಭವನೀಯ ಅಭ್ಯರ್ಥಿಗಳನ್ನು ಗುರುತಿಸಿದ್ದರೂ ಇವರೇ ಅಭ್ಯರ್ಥಿ ಎಂಬ ಅಂತಿಮ ತೀರ್ಮಾನ ಮಾಡಿಲ್ಲ. ಮುಂದಿನ ತಿಂಗಳು ನಡೆಯಲಿರುವ ರಾಜಕೀಯ ಕ್ಷಿಪ್ರ ಕ್ರಾಂತಿಯ ನಂತರ ಜೆಡಿಎಸ್ ತನ್ನ ಅಭ್ಯರ್ಥಿಗಳನ್ನು ಘೋಷಣೆ ಮಾಡಲಿದೆ ಎನ್ನಲಾಗಿದೆ.


ತಮಿಳುನಾಡಿಗೆ ನಿತ್ಯ 5 ಸಾವಿರ ಕ್ಯುಸೆಕ್ ನೀರು

ಶಿಫಾರಸು ವಿರೋಧಿಸಿ ರಾಜ್ಯ ರೈತಸಂಘ ಪ್ರತಿಭಟನೆ

ಮೈಸೂರು,ಆ.29(ಪಿಎಂ)– ಕಾವೇರಿ ನೀರನ್ನು ತಮಿಳುನಾಡಿಗೆ ಬಿಡದಂತೆ ಒತ್ತಾಯಿಸಿ ಹಾಗೂ ತಮಿಳುನಾಡಿಗೆ ಪ್ರತಿನಿತ್ಯ 5 ಸಾವಿರ ಕ್ಯುಸೆಕ್ ನೀರು ಹರಿಸಬೇಕೆಂಬ ಕಾವೇರಿ ನೀರು ನಿಯಂತ್ರಣ ಸಮಿತಿಯ (ಸಿಡಬ್ಲ್ಯೂಆರ್‌ಸಿ) ಶಿಫಾರಸ್ಸು ವಿರೋಧಿಸಿ ಕರ್ನಾಟಕ ರಾಜ್ಯ ರೈತಸಂಘದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಕಾವೇರಿ ನೀರಾವರಿ ನಿಗಮದ ಮುಖ್ಯ ಇಂಜಿನಿಯರ್ ಕಚೇರಿ (ನೀರಾವರಿ ದಕ್ಷಿಣ ವಲಯ) ಇರುವ ಮೈಸೂರಿನ ಕಾಡಾ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ರಾಜ್ಯದಲ್ಲಿ ಮಳೆ ಕೊರತೆಯಿಂದ ಜಲಾಶಯಗಳಿಗೆ ಒಳಹರಿವು ಇಳಿಮುಖವಾಗಿದೆ. ಈವರೆಗೆ ಜಲಾಶಯಗಳ ನೀರಿನ ಶೇಖರಣೆ ಕಡಿಮೆ ಇದ್ದು, ಇದು ಕಳವಳಕಾರಿಯಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಕಾವೇರಿ ನೀರು ನಿಯಂತ್ರಣ ಸಮಿತಿ ನೀರು ಬಿಡಲು ಶಿಫಾರಸು ಮಾಡಿರುವುದು ಅವೈಜ್ಞಾನಿಕ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಲಾಶಯಗಳಲ್ಲಿ ಉಪಯೋಗಿಸಲು ಯೋಗ್ಯವಿರುವ ನೀರು ಅತ್ಯಂತ ಕಡಿಮೆ ಇದೆ. ಕಾವೇರಿ ನೀರು ನಿಯಂತ್ರಣ ಸಮಿತಿ ನಿರ್ದೇಶನದಂತೆ ರಾಜ್ಯದ ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಿಂದ 15 ದಿನಗಳವರೆಗೆ ಪ್ರತಿನಿತ್ಯ 5 ಸಾವಿರ ಕ್ಯುಸೆಕ್ ನೀರನ್ನು ತಮಿಳುನಾಡಿಗೆ ಹರಿಸಿದರೆ ರಾಜ್ಯದ ಅಚ್ಚುಕಟ್ಟಿನಲ್ಲಿ ಬೆಳೆದಿರುವ ಫಸಲು ಉಳಿಸುವುದಿರಲಿ, ಕುಡಿಯುವ ನೀರಿಗೆ ಸಮಸ್ಯೆ ಎದುರಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.



ರಾಜ್ಯ ಸರ್ಕಾರವು ತಮಿಳುನಾಡಿಗೆ ಕಾವೇರಿ ನೀರು ಹರಿಸದಿರಲು ಸ್ಪಷ್ಟ ತೀರ್ಮಾನ ಮಾಡಬೇಕು. ಜೊತೆಗೆ ಕಾನೂನು ಹೋರಾಟಕ್ಕೆ ಮುಂದಾಗಬೇಕು. ಸಾಧ್ಯವಿರುವ ಎಲ್ಲಾ ಅಗತ್ಯ ಕ್ರಮಗಳನ್ನು ಅನುಸರಿಸಿ ರಾಜ್ಯದ ರೈತರನ್ನು ರಕ್ಷಿಸಬೇಕೆಂದು ಒತ್ತಾಯಿಸಿದರು.

ಇದೇ ವೇಳೆ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ರಾಜ್ಯದಲ್ಲಿ 135ಕ್ಕೂ ಹೆಚ್ಚು ತಾಲೂಕುಗಳಲ್ಲಿ ಬರವಿದೆ. ಕಾವೇರಿ ಜಲಾನಯನ ಪ್ರದೇಶವೂ ಇದರಿಂದ ಹೊರತಾಗಿಲ್ಲ. ಫಸಲು ಒಣಗುತ್ತಿದ್ದು, ಇಂತಹ ಪರಿಸ್ಥಿತಿಯಲ್ಲಿ ತಮಿಳುನಾಡಿಗೆ ನೀರು ಬಿಡುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸು ಮಾಡಿರುವುದು ಅವೈಜ್ಞಾನಿಕ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾವೇರಿ ನಿರ್ವಹಣಾ ಪ್ರಾಧಿಕಾರದ ಸಭೆ ನಡೆಯುತ್ತಿದ್ದು, ಈ ಸಭೆಯಲ್ಲಿ ರಾಜ್ಯಕ್ಕೆ ವ್ಯತಿರಿಕ್ತವಾಗುವ ತೀರ್ಮಾನ ಬಂದಲ್ಲಿ ಕೂಡಲೇ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಬೇಕು. ಇಲ್ಲವಾದರೆ ರಾಜ್ಯಕ್ಕೆ ಸಂಕಷ್ಟ ಎದುರಾಗಲಿದೆ. ಈಗಾಗಲೇ ರಾಜ್ಯದಲ್ಲಿ ಬರದ ಛಾಯೆ ಇದ್ದು, ಮಳೆಯಾಗುವ ಸಾಧ್ಯತೆಯೂ ಕಡಿಮೆ ಇದೆ. ಹೀಗಾಗಿ ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ. ಇದನ್ನು ರಾಜ್ಯ ಸರ್ಕಾರ ಅರ್ಥ ಮಾಡಿಕೊಳ್ಳಬೇಕು. ಸರ್ಕಾರ ರಾಜ್ಯದ ಹಿತ ಕಾಯದಿದ್ದರೆ ತೀವ್ರತರದ ಹೋರಾಟ ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ಸ್ಥಳಕ್ಕಾಗಮಿಸಿದ ಕಾವೇರಿ ನೀರಾವರಿ ನಿಗಮದ ಮುಖ್ಯ ಇಂಜಿನಿಯರ್ ಆರ್.ಎಲ್.ವೆಂಕಟೇಶ್, ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ, ಕೂಡಲೇ ಸರ್ಕಾರಕ್ಕೆ ಕಳುಹಿಸಿ ತಮ್ಮ ಬೇಡಿಕೆ ಈಡೇರಿಸಲು ಕ್ರಮ ವಹಿಸಲು ಕೋರುತ್ತೇನೆಂದು ಭರವಸೆ ನೀಡಿದರು. ಬಳಿಕ ಪ್ರತಿಭಟನೆ ಕೈಬಿಡಲಾಯಿತು.

ರೈತಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೊಸಕೋಟೆ ಬಸವರಾಜು, ಮುಖಂಡರಾದ ಮರಂಕಯ್ಯ, ಮಂಡಕಳ್ಳಿ ಮಹೇಶ್, ಅತ್ತಹಳ್ಳಿ ಶಿವನಂಜು, ಶಿರಮಳ್ಳಿ ಸಿದ್ದಪ್ಪ, ಹುಚ್ಚೇಗೌಡ, ಬೊಕ್ಕಳ್ಳಿ ನಂಜುಂಡಸ್ವಾಮಿ, ಆನಂದೂರು ಪ್ರಭಾಕರ್, ವಿಜೇಂದ್ರ ನಾಗನಹಳ್ಳಿ, ಸಿದ್ದಪ್ಪ ಹೊಸಕೋಟೆ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಸೆ.5ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ

ತಮಿಳುನಾಡಿಗೆ ಕಾವೇರಿ ನೀರು ಹರಿಸದಂತೆ ಒತ್ತಾಯಿಸಿ, ರಾಜ್ಯದಲ್ಲಿ ಬರ ಘೋಷಿಸಲು ಹಾಗೂ ಲೋಡ್ ಶೆಡ್ಡಿಂಗ್ ಕೈಬಿಟ್ಟು ಪಂಪ್‌ಸೆಟ್‌ಗಳಿಗೆ ವಿದ್ಯುತ್ ನೀಡುವಂತೆ ಆಗ್ರಹಿಸಿ ಸೆ.5ರಂದು ರೈತ ಸಂಘವು ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಿದೆ. ಅಂದು ಬೆಳಗ್ಗೆ 11ರಿಂದ ಮಧ್ಯಾಹ್ನ 1ರವರೆಗೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ ನಡೆಸಲು ಉದ್ದೇಶಿಸಲಾಗಿದೆ.

-ಬಡಗಲಪುರ ನಾಗೇಂದ್ರ

ಕಾಲು ಕಳೆದುಕೊಂಡ ಪೌರಕಾರ್ಮಿಕನಿಗೆ 25 ಲಕ್ಷ ರೂ. ಪರಿಹಾರ ನೀಡಲು ಒತ್ತಾಯ



ಮೈಸೂರು, ಆ.29(ಜಿಎ)–ಇತ್ತೀಚೆಗೆ ನಗರದ ದೇವರಾಜ ಅರಸು ರಸ್ತೆಯಲ್ಲಿ ಅಪಘಾತದಿಂದ ಕಾಲು ಕಳೆದುಕೊಂಡಿರುವ ಪೌರಕಾರ್ಮಿಕನಿಗೆ ಪಾಲಿಕೆ ವತಿಯಿಂದ 25 ಲಕ್ಷ ರೂ. ಪರಿಹಾರ ನೀಡಬೇಕೆಂದು ಮೈಸೂರು ನಗರಪಾಲಿಕೆ ಖಾಯಂ ಪೌರಕಾರ್ಮಿಕರ ಹಾಗೂ ಗುತ್ತಿಗೆ ಪೌರ ಕಾರ್ಮಿಕರ ಮಹಾಸಂಘ ಒತ್ತಾಯಿಸಿದೆ.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಸಂಘದ ಗೌರವ ಅಧ್ಯಕ್ಷ ಎಂ.ವಡಿವೇಲು ಮಾತನಾಡಿ, ಕಳೆದ ಭಾನುವಾರ ಬೆಳಗ್ಗೆ ಪೌರಕಾರ್ಮಿಕ ಮಹದೇವ ದೇವರಾಜ ಅರಸು ರಸ್ತೆಯಲ್ಲಿ ಸ್ವಚ್ಛತಾ ಕೆಲಸದಲ್ಲಿ ನಿರತನಾಗಿದ್ದ ಸಂದರ್ಭದಲ್ಲಿ ಏಕಾಏಕಿ ಖಾಸಗಿ ವಾಹನ ಬಂದು ಗುದ್ದಿದ ಪರಿಣಾಮ ಒಂದು ಕಾಲು ಮುರಿದಿದೆ ಅವರಿಗೆ ಪಾಲಿಕೆ ವತಿಯಿಂದ ಸೂಕ್ತ ಚಿಕಿತ್ಸೆಯನ್ನು ನೀಡಲಾಗುತ್ತಿದ್ದು, ಜೀವಕ್ಕೆ ಯಾವುದೇ ತೊಂದರೆ ಇಲ್ಲ. ಆದರೆ, ಇನ್ನು ಮುಂದೆ ಜೀವನವನ್ನು ಸಾಗಿಸಲು ತುಂಬಾ ಕಷ್ಟಕರವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪಾಲಿಕೆಯಿಂದ 25 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಮಹದೇವರವರಿಗೆ ಪತ್ನಿ ಹಾಗೂ ಮೂವರು ಮಕ್ಕಳು ಇರುವುದರಿಂದ ಅವರ ಪತ್ನಿಗೆ ನಗರಪಾಲಿಕೆಯಲ್ಲಿ ಕೆಲಸ ನೀಡಬೇಕು ಮತ್ತು ಕೆಸರೆಯಲ್ಲಿ ನಿರ್ಮಾಣ ಮಾಡುತ್ತಿರುವ ಮನೆಗಳ ಪೈಕಿ ಒಂದು ಮನೆಯನ್ನು ಮಂಜೂರು ಮಾಡಿಕೊಡಬೇಕೆಂದು ಮತ್ತು ಕಾಲು ಕಳೆದುಕೊಂಡ ಮಹದೇವರವರ ಚಿಕಿತ್ಸಾ ಸಂಪೂರ್ಣ ವೆಚ್ಚವನ್ನು ಪಾಲಿಕೆಯೇ ಭರಿಸಬೇಕು. ಅಪಘಾತ ಮಾಡಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ನಗರಪಾಲಿಕೆ ಆಯುಕ್ತ ಮತ್ತು ಮೇಯರ್‌ಗೆ ಮನವಿ ಮಾಡಿದರು.

ನಂತರ ಸಂಘದ ಉನ್ನತ ಸಮಿತಿ ಅಧ್ಯಕ್ಷ ಮಾತನಾಡಿ, ಪೌರಕಾರ್ಮಿಕರಿಗೆ ಸಂಕಷ್ಟ ಭತ್ಯೆಯನ್ನು ನೀಡುವಂತೆ ಈಗಾಗಲೇ ಮನವಿ ಸಲ್ಲಿಸಲಾಗಿದೆ. ಆದರೆ, ಪಾವತಿಸಲು ಪಾಲಿಕೆಯಲ್ಲಿ ವಿಳಂಬ ಧೋರಣೆ ಅನುಸರಿಸಲಾಗುತ್ತಿದ್ದು, ಮೈಸೂರು ಮಹಾನಗರ ಪಾಲಿಕೆಯಲ್ಲಿ ಖಾಯಂ ಹಾಗೂ ನೇರಪಾವತಿಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರಿಗೆ ಎರಡು ಸಾವಿರ ರೂ.ಗಳಂತೆ ಸಂಕಷ್ಟ ಭತ್ಯೆಯನ್ನು ಮಂಜೂರು ಮಾಡಬೇಕಾಗಿದೆ ಎಂದರು.

ವಿಷಯವನ್ನು ಸೂಕ್ತ ತೀರ್ಮಾನಕ್ಕಾಗಿ ಸಮಿತಿ ಮುಂದೆ ಮಂಡಿಸಿದ್ದು, ಸಂಕಷ್ಟ ಭತ್ಯೆಯನ್ನು ಪಾವತಿಸಲು ಸರ್ಕಾರದಿಂದಲೇ ಅನುದಾನ ನೀಡುವುದಾಗಿ ಸಭೆಗೆ ಪಾಲಿಕೆ ಆರೋಗ್ಯಾಧಿಕಾರಿಗಳು ಮಾಹಿತಿ ನೀಡಿದ್ದರಿಂದ, ವಿಷಯವನ್ನು ಮುಂದಿನ ಕೌನ್ಸಿಲ್‌ನಲ್ಲಿ ಮಂಜೂರಾತಿಗಾಗಿ ಎಲ್ಲಾ ನಗರಪಾಲಿಕೆ ಸದಸ್ಯರು ಒಪ್ಪಿಗೆ ಸೂಚಿಸಬೇಕೆಂದು ಮತ್ತು ಸೆಪ್ಟೆಂಬರ್ 23ರಂದು ಆಚರಿಸಲಾಗುವ ಪೌರಕಾರ್ಮಿಕರ ದಿನಾಚರಣೆಯ ಅಂಗವಾಗಿ ವಿಶೇಷ ಭತ್ಯೆಯನ್ನು ತಲಾ 7 ಸಾವಿರ ರೂ.ಗಳನ್ನು ಒಟ್ಟು 37,87,00,000 ಗಳನ್ನು ನಗರಪಾಲಿಕೆ ನಿಧಿಯಿಂದ ಭರಿಸಬೇಕಾಗಿರುತ್ತದೆ. ಈ ವಿಷಯವನ್ನು ಕೌನ್ಸಿಲ್ ಸಭೆಯಲ್ಲಿ ತಂದು ಮಂಜೂರು ಮಾಡಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಉನ್ನತ ಸಮಿತಿ ಪ್ರಧಾನ ಕಾರ್ಯದರ್ಶಿ ಟಿ.ಶ್ರೀನಿವಾಸ್, ಗೌರವ ಕಾರ್ಯದರ್ಶಿ ಎಂ.ವಿ.ವೆಂಕಟೇಶ್, ಅಧ್ಯಕ್ಷ ಆರ್.ನರಸಿಂಹ, ಪ್ರಧಾನ ಕಾರ್ಯದರ್ಶಿ ಜಿ.ಮಂಜುನಾಥ್ ಮತ್ತು ದಿನೇಶ್ ಉಪಸ್ಥಿತರಿದ್ದರು.



ಕಾಂಗ್ರೆಸ್ ಸರ್ಕಾರ 100 ದಿನ ಪೂರೈಸಿದ ಸಂಭ್ರಮದ ಪ್ರಯುಕ್ತ ಕಾರ್ಯಕರ್ತರು ಸಿಹಿ ಹಂಚಿ, ಸಂಭ್ರಮಿಸಿದರು. ಚಿತ್ರದಲ್ಲಿ ರವಿ ಮಂಚೇಗೌಡನ ಕೊಪ್ಪಲು, ನಜರ್‌ಬಾದ್ ನಟರಾಜ್, ಬಸವರಾಜ್ ಬಸಪ್ಪ, ವರುಣಾ ಮಹದೇವ್ ಇತರರನ್ನು ಕಾಣಬಹುದು

ಸುನೀಲ್ ಬೋಸ್ ಜನ್ಮದಿನ: ಉದ್ಯೋಗ ಮೇಳ



ಮೈಸೂರು, ಆ.29(ಜಿಎ)–ಸುನೀಲ್ ಬೋಸ್ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರಿಂದ ಕಾಂಗ್ರೆಸ್ ಮುಖಂಡ ಸುನೀಲ್ ಬೋಸ್ ಹುಟ್ಟುಹಬ್ಬದ ಅಂಗವಾಗಿ ಆ.31 ರಂದು ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಸುನೀಲ್ ಬೋಸ್ ಅಭಿಮಾನಿ ಚೆಲುವರಾಜು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಮುಖಂಡ ಸುನೀಲ್ ಬೋಸ್ ಅವರ 41ನೇ ಹುಟ್ಟುಹಬ್ಬದ ಅಂಗವಾಗಿ ಟಿ.ನರಸೀಪುರದ ಎ.ಪಿ.ಎಂ.ಸಿ ಆವರಣದಲ್ಲಿ ಅಂದು ಬೆಳಗ್ಗೆ 10 ಗಂಟೆ ಬೃಹತ್ ಉದ್ಯೋಗ ಮೇಳ ಏರ್ಪಡಿಸಿದ್ದು, ಪಶುಸಂಗೋಪನ ಸಚಿವ ಕೆ.ವೆಂಕಟೇಶ್ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ವಹಿಸಲಿದ್ದಾರೆ ಎಂದರು.

ಉದ್ಯೋಗ ಮೇಳಕ್ಕೆ ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ಶಾಸಕರಾದ ತನ್ವೀರ್ ಸೇಠ್, ಅನಿಲ್ ಚಿಕ್ಕಮಾದು, ಪುಟ್ಟರಂಗಶೆಟ್ಟಿ ಮತ್ತು ದರ್ಶನ್ ಧ್ರುವನಾರಾಯಣ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಕಾರ್ಯಕ್ರಮಕ್ಕೂ ಮುನ್ನ ನಟ, ಸಂಗೀತ ನಿರ್ದೇಶಕ ಸಾಧುಕೋಕಿಲ ಅವರು ಮನರಂಜನೆ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ಉದ್ಯೋಗ ಮೇಳದಲ್ಲಿ ಇನ್‌ಫೋಸಿಸ್, ಐಸಿಐಸಿಐ ಬ್ಯಾಂಕ್, ಆಕ್ಸಿಸ್ ಬ್ಯಾಂಕ್ ಮುತ್ತೂಟ್ ಫೈನಾನ್ಸ್ ಸೇರಿದಂತೆ 100ಕ್ಕೂ ಅಧಿಕ ಕಂಪನಿಗಳು ಭಾಗವಹಿಸಲಿದ್ದು, ಐದು ಸಾವಿರಕ್ಕೂ ಅಧಿಕ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಇದೆ.

ಸುದ್ದಿಗೋಷ್ಠಿಯಲ್ಲಿ ಅಭಿಮಾನಿಗಳಾದ ವಜ್ರೇಗೌಡ, ರುಕ್ಮಾಂಗದ, ಮಾವಿನಹಳ್ಳಿ ರವಿ, ಚಾಮರಾಜು ಮಂಡಕಳ್ಳಿ, ಸಂಜೀವ್, ನಂಜುಂಡ ಉಪಸ್ಥಿತರಿದ್ದರು.

ನಾರಾಯಣ ಗುರು 169ನೇ ಜಯಂತಿ



ಮೈಸೂರು, ಆ.29(ಜಿಎ)–ಬ್ರಹ್ಮಶ್ರೀ ನಾರಾಯಣ ಗುರುಗಳ 169ನೇ ಜಯಂತಿ ಆಚರಣೆ ಮತ್ತು ಪ್ರತಿಭಾ ಪುರಸ್ಕಾರವನ್ನು ಆ.31ರಂದು ಏರ್ಪಡಿಸಲಾಗಿದೆ ಎಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಆರ್ಯ ಈಡಿಗರ ಸಂಘದ ಅಧ್ಯಕ್ಷ ಡಾ.ಎಂ.ಕೆ.ಪೋತರಾಜು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿವರ್ಷ ಜಿಲ್ಲಾಡಳಿತದ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿಯನ್ನು ಆಚರಿಸಲಾಗುತ್ತಿದ್ದು, ಅದರಂತೆ ಈ ಬಾರಿಯೂ ನಗರದ ಕಲಾಮಂದಿರದಲ್ಲಿ ಅಂದು ಮಧ್ಯಾಹ್ನ 3 ಗಂಟೆಗೆ ಸಂಘದ ವತಿಯಿಂದ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಗುವುದು ಎಂದರು.

ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುನಲ್ಲಿ ಶೇ.80ರಷ್ಟು ಅಂಕ ಗಳಿಸಿರುವ 70 ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಿ ಅಭಿನಂದಿಸಲಾಗುತ್ತಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷ ರಾಜಶೇಖರ್ ಕದಂಬ, ಪ್ರಧಾನ ಕಾರ್ಯದರ್ಶಿ ಕೆ.ಎಸ್.ಕೃಷ್ಣಮೂರ್ತಿ ಮತ್ತು ಖಜಾಂಚಿ ಹೆಚ್.ಟಿ.ಗೋವಿಂದರಾಜು ಉಪಸ್ಥಿತರಿದ್ದರು.

ಗ್ಯಾರಂಟಿಗೆ ಎಸ್‌ಸಿಎಸ್‌ಪಿ–ಟಿಎಸ್‌ಪಿ ಅನುದಾನ ಬಳಸದಂತೆ ಆಗ್ರಹಿಸಿ ದಸಂಸ ಪ್ರತಿಭಟನಾ ಮೆರವಣಿಗೆ

ಮೈಸೂರು,ಆ.29(ಪಿಎಂ)– ಪರಿಶಿಷ್ಟ ಜಾತಿ ಉಪಯೋಜನೆ/ಪರಿಶಿಷ್ಟ ಪಂಗಡ ಉಪಯೋಜನೆ ಕಾಯ್ದೆಯ (ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಾಯ್ದೆ) 'ಸೆಕ್ಷನ್ 7ಡಿ' ರದ್ದುಪಡಿಸಬೇಕು ಹಾಗೂ ಗ್ಯಾರಂಟಿ ಯೋಜನೆಗಳಿಗೆ ಈ ಕಾಯ್ದೆಯಡಿಯ ಮೀಸಲು ಅನುದಾನ ಬಳಕೆ ಮಾಡಬಾರದು ಎಂದು ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ (ದಸಂಸ) ವತಿಯಿಂದ ಮಂಗಳವಾರ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಮೈಸೂರಿನ ಪುರಭವನದ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಆವರಣದ ಬಳಿ ಜಮಾಯಿಸಿದ ಪ್ರತಿಭಟನಾಕಾರರು, ಪರಿಶಿಷ್ಟರಲ್ಲದವರೂ ಫಲಾನುಭವಿಗಳಾಗುವ ಯಾವುದೇ ಯೋಜನೆಗಳಿಗೆ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅನುದಾನ ಬಳಸಬಾರದು. ಈ ಅನುದಾನ ದುರುಪಯೋಗಪಡಿಸುವ ಅಧಿಕಾರಿಗಳನ್ನು ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಅಂತೆಯೇ ತಮ್ಮ ಶಿಫಾರಸು ಮೂಲಕ ದುರುಪಯೋಗಕ್ಕೆ ಅವಕಾಶವಾಗುವಂತೆ ಮಾಡುವ ಜನಪ್ರತಿನಿಧಿಗಳ ಸದಸ್ಯತ್ವ ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

2013ರಲ್ಲಿ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಾಯ್ದೆ ಜಾರಿ ಮಾಡಿದ ರಾಜ್ಯ ಕಾಂಗ್ರೆಸ್ ಸರ್ಕಾರವೇ ಅನಗತ್ಯವಾಗಿ 'ಸೆಕ್ಷನ್ 7ಡಿ' ಅಳವಡಿಸಿ ಅನ್ಯ ಕಾರ್ಯಗಳಿಗೆ ಮೀಸಲು ಹಣ ಬಳಸಿಕೊಳ್ಳಲು ಅವಕಾಶ ಕಲ್ಪಿಸಿತು. ಇದರಿಂದ ಕಾಯ್ದೆಯ ಉದ್ದೇಶ ಈಡೇರದೇ ಪರಿಶಿಷ್ಟರ ಪ್ರಗತಿ ಕುಂಠಿತಗೊಂಡಿತು ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಂತರ ಬಂದ ಬಿಜೆಪಿ ಸರ್ಕಾರವು ಎಸ್‌ಸಿಎಸ್‌ಪಿ–ಟಿಎಸ್‌ಪಿ ಅನುದಾನ ಕಡಿತ ಮಾಡಿದ್ದಲ್ಲದೆ, ಸೆಕ್ಷನ್ 7ಡಿ ಅನ್ನು ಹೆಚ್ಚು ದುರ್ಬಳಕೆ ಮಾಡಿಕೊಂಡಿತು. ಇದರ ವಿರುದ್ಧದ ಹೋರಾಟದ ಫಲವಾಗಿ ಈಗಿರುವ ಕಾಂಗ್ರೆಸ್ ಸರ್ಕಾರವು ತನ್ನ ಬಜೆಟ್ ಭಾಷಣದಲ್ಲಿ ಸೆಕ್ಷನ್ 7ಡಿ ಅನ್ನು ರದ್ದುಗೊಳಿಸುವುದಾಗಿ ಹೇಳಿತ್ತು. ಆದರೆ ತದನಂತರದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಮೀಸಲು ಹಣ ಬಳಸಿಕೊಳ್ಳಲು ಸೆಕ್ಷನ್ 7ಡಿ ಅನ್ನು ರದ್ದುಗೊಳಿಸದೇ ದಲಿತ ಸಮುದಾಯಕ್ಕೆ ದ್ರೋಹವೆಸಗಿದೆ ಎಂದು ಆರೋಪಿಸಿದರು.



ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದ್ದ ಸಾರ್ವತ್ರಿಕ ಯೋಜನೆಗಳಾದ 5 ಗ್ಯಾರಂಟಿಗಳಿಗೆ ಹಣ ಪೂರೈಸುವ ಸಲುವಾಗಿ ಎಸ್‌ಸಿಎಸ್‌ಪಿ–ಟಿಎಸ್‌ಪಿ ಮೀಸಲು ನಿಧಿಯಿಂದ 11,114 ಕೋಟಿ ರೂ. ಅನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ತೆಗೆದುಕೊಂಡಿದೆ. ಇದನ್ನು ಪರಿಶಿಷ್ಟರಿಗೆ ಮಾತ್ರ ಬಳಸುತ್ತೇವೆಂದು ಸುಳ್ಳು ಹೇಳುತ್ತಿದೆ. ಇದು ನಿಜವೇ ಆಗಿದ್ದರೆ ಅಂಕಿಅಂಶಗಳ ಪ್ರಕಾರ ಅಂದಾಜು 8,150 ಕೋಟಿ ಹಣ ಸಾಕಾಗುತ್ತಿತ್ತು. ಆದರೆ 3 ಸಾವಿರ ಕೋಟಿ ಹೆಚ್ಚುವರಿಯಾಗಿ ಪಡೆದಿರುವ ಉದ್ದೇಶವೇನು? 5 ಗ್ಯಾರಂಟಿಗಳು ಕೇವಲ ಪರಿಶಿಷ್ಟರಿಗೆ ಸೀಮಿತವಾಗಿಲ್ಲ. ಅಲ್ಲದೆ, ಇವು ಪರಿಶಿಷ್ಟರ ಕಲ್ಯಾಣ ಕಾರ್ಯಕ್ರಮಗಳೂ ಅಲ್ಲ. ಹಾಗಾಗಿ ಈ ಗ್ಯಾರಂಟಿಗಳಿಗೆ ಎಸ್‌ಸಿಎಸ್‌ಪಿ–ಟಿಎಸ್‌ಪಿ ಮೀಸಲು ಅನುದಾನ ಬಳಸಲು ಬರುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ತ್ವರಿತ ಕ್ರಮ ವಹಿಸಬೇಕು. ಪರಿಶಿಷ್ಟ ಜಾತಿ, ಪಂಗಡದ ಪಟ್ಟಿಗೆ ಬೇರೆ ಬೇರೆ ಸಮುದಾಯಗಳನ್ನು ಸೇರ್ಪಡೆ ಮಾಡುವ ಮೂಲಕ ನೋವು ಅನುಭವಿಸಿದ ಸಮುದಾಯಗಳನ್ನು ವಂಚಿಸುವ ಅನ್ಯಾಯ ತಡೆಗಟ್ಟಬೇಕು. ಪರಿಶಿಷ್ಟ ಜಾತಿ–ಪಂಗಡಕ್ಕೆ ಪ್ರಸ್ತುತವಿರುವ ಆದಾಯ ಮಿತಿಯನ್ನು ಕನಿಷ್ಠ 10 ಲಕ್ಷ ರೂ.ಗೆ ಹೆಚ್ಚಿಸುವ ಜೊತೆಗೆ ಶಿಕ್ಷಣ, ಉದ್ಯೋಗ, ವಸತಿ, ಭೂಮಿ, ಮೂಲಸೌಕರ್ಯಗಳ ಕಲ್ಯಾಣ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಖಾಸಗೀಕರಣ ಮತ್ತು ಹೊರಗುತ್ತಿಗೆ ಪದ್ಧತಿ ರದ್ದುಪಡಿಸಬೇಕು. ಸಾರ್ವಜನಿಕ ಉದ್ದಿಮೆಗಳನ್ನು ಸ್ಥಾಪಿಸುವ ಮೂಲಕ ಪರಿಶಿಷ್ಟರಿಗೆ ಉದ್ಯೋಗ ಒದಗಿಸಿ ಅವರ ಘನತೆಯ ಬದುಕಿಗೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಬಳಿಕ ಚಾಮರಾಜ ಒಡೆಯರ್ ವೃತ್ತ, ಜಯಚಾಮರಾಜ ಒಡೆಯರ್ ವೃತ್ತ, ಮಲೆ ಮಹದೇಶ್ವರ ರಸ್ತೆ ಮಾರ್ಗದಲ್ಲಿ ಸಾಗಿದ ಪ್ರತಿಭಟನಾ ಮೆರವಣಿಗೆಯು ಸಿದ್ಧಾರ್ಥನಗರದ ನೂತನ ಜಿಲ್ಲಾಧಿಕಾರಿ ಕಚೇರಿ ತಲುಪಿತು. ಇಲ್ಲಿಯೂ ಕೆಲಕಾಲ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಕಚೇರಿಗೆ ಮನವಿ ಸಲ್ಲಿಸಿ ಪ್ರತಿಭಟನೆ ಅಂತ್ಯಗೊಳಿಸಲಾಯಿತು.

ಪ್ರಗತಿಪರ ಚಿಂತಕರಾದ ನಾ.ದಿವಾಕರ್, ಪ್ರೊ.ಕಾಳಚನ್ನೇಗೌಡ, ಹೊರೆಯಾಲ ದೊರೆಸ್ವಾಮಿ, ದೇವನೂರು ಪುಟ್ಟನಂಜಯ್ಯ, ದಸಂಸ ಮುಖಂಡರಾದ ಚೋರನಹಳ್ಳಿ ಶಿವಣ್ಣ, ಕೆ.ವಿ.ದೇವೇಂದ್ರ, ಅರಸನಕೆರೆ ಶಿವರಾಜ್, ಸೋಮನಾಯಕ, ಕೆಂಪಯ್ಯನಹುಂಡಿ ರಾಜು, ಹಾರೋಹಳ್ಳಿ ನಟರಾಜು, ಶಿವಮೂರ್ತಿ, ಆಲಗೂಡು ಚಂದ್ರಶೇಖರ್ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಲಿಂಗಾಂಬುದಿ ಕೆರೆಗೆ ಕಲುಷಿತ ನೀರು ಸೇರ್ಪಡೆ: ಮೀನುಗಳ ಮಾರಣಹೋಮ



ಕಲುಷಿತಗೊಂಡಿರುವ ಲಿಂಗಾಂಬುದಿ ಕೆರೆಯಲ್ಲಿ ಮೀನುಗಳ ಮಾರಣಹೋಮದಿಂದಾಗಿ ತೇಲುತ್ತಿರುವ ಮೀನುಗಳು

- ಮೂರು ರಾಜಕಾಲುವೆಯಲ್ಲೂ ಒಳಚರಂಡಿ ನೀರು ಸೇರ್ಪಡೆ
- ಮಹಾನಗರ ಪಾಲಿಕೆ, ಮುಡಾ ಅಧಿಕಾರಿಗಳ ನಡುವೆ ಸಮನ್ವಯದ ಕೊರತೆ
- ರಾಜರ ಆಳ್ವಿಕೆಯಲ್ಲಿ ನಿರ್ಮಾಣಗೊಂಡ ಮೈಸೂರಿನ ಸುಂದರ ಕೆರೆ ರಕ್ಷಣೆಗೆ ಆಗ್ರಹ

ಎಂ.ಟಿ.ಯೋಗೇಶ್ ಕುಮಾರ್

ಮೈಸೂರು,ಆ.29– ಸಾಂಸ್ಕೃತಿಕ ನಗರಿ ಮೈಸೂರಿನ ಪ್ರಮುಖ ಹಾಗೂ ವಲಸೆ ಪಕ್ಷಿಗಳ ಏಕೈಕ ಆವಾಸಸ್ಥಾನವಾಗಿರುವ ಲಿಂಗಾಂಬುದಿ ಕೆರೆಗೆ ಒಳಚರಂಡಿ ನೀರು ಯಥೇಚ್ಛವಾಗಿ ಸೇರುತ್ತಿರುವುದರಿಂದ ಕೆರೆ ಪರಿಸರ ಮಲಿನಗೊಂಡಿದ್ದು, ಮಂಗಳವಾರ ಬೆಳಗ್ಗೆ ನೂರಾರು ಮೀನುಗಳ ಮಾರಣಹೋಮವಾಗಿದೆ. ಇದು ಸ್ಥಳೀಯರಲ್ಲಿ ಆತಂಕವುಂಟು ಮಾಡಿದ್ದು, ಕೆರೆ ರಕ್ಷಣೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಮೈಸೂರು ನಗರಕ್ಕೆ ಹೊಂದಿಕೊಂಡಂತೆ ಇರುವ ಅತಿ ದೊಡ್ಡ ಕೆರೆಯೂ ಹಾಗೂ ನೈಸರ್ಗಿಕವಾಗಿ ಬೆಳೆದಿರುವ ಅರಣ್ಯ ಪ್ರದೇಶ ಹೊಂದಿರುವ ಲಿಂಗಾಂಬುದಿ ಕೆರೆಗೆ ಪ್ರತಿ ವರ್ಷ ಡಿಸೆಂಬರ್‌ನಲ್ಲಿ ಯುರೋಪ್ ರಾಷ್ಟ್ರಗಳಿಂದ 'ನಾರ್ಥನ್ ಶಾವೆಲ್ಲರ್' ಪಕ್ಷಿಗಳು ವಲಸೆ ಬರುತ್ತವೆ. ನಗರದ ಪ್ರಮುಖ ನಾಲ್ಕು ಕೆರೆಗಳಲ್ಲಿ ಮುಂಚೂಣಿ ಹಾಗೂ ದೊಡ್ಡ ಕೆರೆಯಾಗಿರುವ ಲಿಂಗಾಂಬುದಿ ಕೆರೆ ರಕ್ಷಣೆಗೆ ಯಾವುದೇ ಕ್ರಮ ಕೈಗೊಳ್ಳದ ಕಾರಣ ಇದೀಗ ಒಳಚರಂಡಿ ನೀರಿನ ಸಂಗ್ರಹಗಾರದಂತೆ ಮಾರ್ಪಾಡಾಗುತ್ತಿದ್ದು, ಇದರಿಂದ ಕೆರೆ ಪರಿಸರವನ್ನೇ ಅವಲಂಬಿಸಿದ್ದ ಪ್ರಾಣಿ–ಪಕ್ಷಿ ಹಾಗೂ ಜಲಚರಗಳಿಗೆ ಕುತ್ತು ಬಂದಂತಾಗಿದೆ. ಸುಂದರ ಕೆರೆಯೊಂದು ಕೊಳಚೆ ನೀರಿನಿಂದ ದುರ್ನಾತ ಬೀರುವಂತಾಗುತ್ತಿರುವುದು ವಿಪರ್ಯಾಸ.

ಮೀನುಗಳ ಮಾರಣಹೋಮ: ಕಳೆದ ಕೆಲವು ತಿಂಗಳಿಂದ ಭಾರಿ ಪ್ರಮಾಣದ ಒಳಚರಂಡಿ ನೀರು ಕೆರೆಗೆ ಸೇರುತ್ತಿದೆ. ಕಳೆದ ಎರಡು ವರ್ಷದ ಹಿಂದೆ ಮಳೆ ನೀರಿನಿಂದ ತುಂಬಿದ್ದ ಲಿಂಗಾಂಬುದಿ ಕೆರೆ ಉತ್ತಮ ಜೀವವೈವಿಧ್ಯತೆ ಹೊಂದಿತ್ತು. ಆದರೆ, ವಿವಿಧ ಬಡಾವಣೆಗಳ ಒಳಚರಂಡಿ ನೀರು ಕೆರೆ ಮಡಿಲು ಸೇರುತ್ತಿರುವುದರಿಂದ ನೀರು ಮಲಿನಗೊಳ್ಳಲಾರಂಭಿಸಿದ್ದು, ಇದರ ಪರಿಣಾಮ ನೂರಾರು ಮೀನುಗಳು ಮೃತಪಟ್ಟಿವೆ. ಕೆರೆ ತುಂಬ ಮೀನುಗಳ ಕಳೇಬರ ತೇಲಲಾರಂಭಿಸಿವೆ.

ಮೂರು ರಾಜಕಾಲುವೆ ಸಂಪರ್ಕ: ಲಿಂಗಾಂಬುದಿ ಕೆರೆಗೆ ಮಳೆ ನೀರು ಹರಿದು ಬರಲೆಂದು ಮೂರು ರಾಜಕಾಲುವೆ ನಿರ್ಮಿಸಲಾಗಿದೆ. ವಿವಿಧ ಬಡಾವಣೆಗಳ ಒಳಚರಂಡಿ ಮಾರ್ಗವನ್ನು ರಾಜಕಾಲುವೆಗೆ ಲಿಂಕ್ ಮಾಡಿರುವುದರಿಂದ ಕೆರೆ ಮಲಿನಗೊಳ್ಳುತ್ತಿದೆ. ದಟ್ಟಗಳ್ಳಿ ಭಾಗದಿಂದ ಕೆರೆ ಸಂಪರ್ಕಿಸುವ ರಾಜಕಾಲುವೆಯಲ್ಲಿ ಬೋಗಾದಿ, ಜನತಾನಗರ, ಶಾರದಾದೇವಿನಗರದಿಂದ ಒಳಚರಂಡಿ ನೀರು ಹರಿದು ಬರುತ್ತಿದೆ. ಲಿಂಗಾಂಬುದಿ ಪಾಳ್ಯದ ಕಡೆಯಿಂದ ಸಂಪರ್ಕ ಹೊಂದಿರುವ ರಾಜಕಾಲುವೆಯಲ್ಲಿ ಲಿಂಗಾಂಬುದಿ ಪಾಳ್ಯ, ಆರ್.ಟಿ.ನಗರ, ರಿಂಗ್‌ರಸ್ತೆ ಸುತ್ತಮುತ್ತಲಿನಿಂದ ಬಡಾವಣೆಗಳ ಒಳಚರಂಡಿ ನೀರು ಕೆರೆ ಸೇರುತ್ತಿದೆ. ಬೊಟಾನಿಕಲ್ ಗಾರ್ಡನ್ ಸಮೀಪ ಕೆರೆಗೆ ಸಂಪರ್ಕ ಹೊಂದಿರುವ ರಾಜಕಾಲುವೆಯಲ್ಲಿ ಶ್ರೀರಾಮಪುರ, ವಿವೇಕಾನಂದನಗರ, ರಾಮಕೃಷ್ಣನಗರ ಸೇರಿದಂತೆ ಇನ್ನಿತರ ಬಡಾವಣೆಗಳ ಒಳಚರಂಡಿ ನೀರು ಸೇರುತ್ತಿದೆ.

ಪ್ಲಾಸ್ಟಿಕ್ ತ್ಯಾಜ್ಯ, ಸ್ಯಾನಿಟರಿ ಪ್ಯಾಡ್ ರಾಶಿ: ಇದಲ್ಲದೇ ಪ್ಲಾಸ್ಟಿಕ್ ತ್ಯಾಜ್ಯ, ಬಳಸಿದ ಸ್ಯಾನಿಟರಿ ಪ್ಯಾಡ್, ಡೈಪರ್‌ಗಳು ರಾಜಕಾಲುವೆ ಮೂಲಕ ಲಿಂಗಾಂಬುದಿ ಕೆರೆ ಸೇರುವ ಮೂಲಕ ಅಲ್ಲಿನ ಜಲಚರಗಳಿಗೆ ಮಾರಕವಾಗಿ ಪರಿಣಮಿಸಿದೆ. ಜನರಲ್ಲಿ ಜಾಗೃತಿ ಮೂಡಿಸಿದರೂ, ಕೆಲವರು ಉದ್ಧಟತನ ಪ್ರದರ್ಶಿಸುತ್ತಿದ್ದಾರೆ. ನಿರುಪಯುಕ್ತ ವಸ್ತುಗಳನ್ನು ಪ್ಲಾಸ್ಟಿಕ್ ಕವರ್‌ನಲ್ಲಿ ಕಟ್ಟಿ ರಾಜಕಾಲುವೆಗೆ ಎಸೆದು ಹೋಗುತ್ತಿದ್ದಾರೆ. ಈ ತ್ಯಾಜ್ಯ ಲಿಂಗಾಂಬುದಿ ಕೆರೆ ಒಡಲಿಗೆ ಸೇರುತ್ತಿದ್ದು, ವಾತಾವರಣವನ್ನು ಇನ್ನಷ್ಟು ಹದಗೆಡಿಸುತ್ತಿದೆ.

ಡಿಸೆಂಬರ್‌ನಲ್ಲಿ ವಲಸೆ ಪ್ರಕ್ರಿಯೆ ಆರಂಭ: ಪ್ರತಿ ವರ್ಷವೂ ಲಿಂಗಾಂಬುದಿ ಕೆರೆಗೆ ಡಿಸೆಂಬರ್‌ನಲ್ಲಿ ಯುರೋಪ್ ದೇಶದಿಂದ ನಾರ್ಥನ್ ಶಾವೆಲ್ಲರ್ ಪಕ್ಷಿಗಳು ವಲಸೆ ಬರುತ್ತವೆ. 2–3 ತಿಂಗಳು ಲಿಂಗಾಂಬುದಿ ಕೆರೆ ಆವರಣದಲ್ಲೇ ಬೀಡು ಬಿಡುವ ಈ ಪಕ್ಷಿಗಳು ಪಕ್ಷಿ ಪ್ರಿಯರ ಆಕರ್ಷಣೀಯ ಕೇಂದ್ರಬಿಂದುವಾಗಿದೆ. ನೈಸರ್ಗಿಕವಾಗಿಯೇ ಬೆಳೆದ ಕಾಡಿನ ಪರಿಸರ ಲಿಂಗಾಂಬುದಿ ಕೆರೆಗೆ ಮುಕುಟದಂತೆ ಇದ್ದು, ವಲಸೆ ಪಕ್ಷಿಗಳ ಆವಾಸ ಸ್ಥಾನವಾಗಿ ಕೆರೆ ಮೈದಳೆದಿದೆ. ವಲಸೆ ಪ್ರಕ್ರಿಯೆ ಆರಂಭಕ್ಕೂ ಮೂರು ತಿಂಗಳ ಮುನ್ನವೇ ಕೆರೆ ನೀರು ಮಲಿನಗೊಂಡಿರುವುದು ಪಕ್ಷಿ ಪ್ರಿಯರಲ್ಲಿ ಆತಂಕವುಂಟು ಮಾಡಿದೆ. 2019ರಲ್ಲಿ ಕಲುಷಿತ ನೀರಿನ ಸೇವನೆಯಿಂದಾಗಿ ವಲಸೆ ಪಕ್ಷಿ ನಾರ್ಥನ್ ಶಾವೆಲ್ಲರ್ ಪಕ್ಷಿಯೂ ಸೇರಿದಂತೆ ಕೆಲ ಪಕ್ಷಿಗಳು ಮೃತಪಟ್ಟಿದ್ದವು. ಆ ಕರಾಳ ಇತಿಹಾಸ ಮತ್ತೆ ಮರುಕಳಿಸದಂತೆ ಕಟ್ಟೆಚ್ಚರ ವಹಿಸುವ ಅಗತ್ಯವಿದೆ.

ಬೊಟಾನಿಕಲ್ ಗಾರ್ಡನ್: ಲಿಂಗಾಂಬುದಿ ಕೆರೆಯ ಒಂದು ಭಾಗದಲ್ಲಿ ತೋಟಗಾರಿಕಾ ಇಲಾಖೆ ವತಿಯಿಂದ ಸುಂದರವಾದ ಬೊಟಾನಿಕಲ್ ಗಾರ್ಡನ್ ನಿರ್ಮಿಸಲಾಗಿದೆ. ಹಲವು ವೈವಿಧ್ಯಮಯ ಸಸ್ಯ ಸಂಪತ್ತಿನೊಂದಿಗೆ ಹಚ್ಚ ಹಸಿರಿನಿಂದ ಕೂಡಿರುವ ಕೆರೆ ಆವರಣ ಹವ್ಯಾಸಿಗಳಿಗೆ ಮತ್ತು ವೃತ್ತಿಪರ ಪಕ್ಷಿ ವೀಕ್ಷಕರಿಗೆ ಸುಂದರ ತಾಣವಾಗಿದೆ. ವಿದೇಶದ ಪಕ್ಷಿ ಪ್ರಭೇದಗಳು ಕೆರೆ ಆವರಣಕ್ಕೆ ಬರುತ್ತವೆ. ಕೆರೆಯಲ್ಲಿ ಮಂಗಟ್ಟೆ, ನವಿಲುಗಳು, ಸಣ್ಣಚಿತ್ರಪಕ್ಷಿ, ಎಪಿಎಫ್ಲಿ (ಬಿಳಿ ಮತ್ತು ಕಂದು ಬಣ್ಣದ ಮಾರ್ಫ್), ನೀಲಿ ಟಿಕೆಲ್ಸ್, ಐಬಿಸ್, ಬಾತುಕೋಳಿಗಳು, ನೀಲಿ ಕೆನ್ನೆಯ ಜೇನುನೊಣ ತಿನ್ನುವ ಪಕ್ಷಿಗಳು ನೋಡಬಹುದಾಗಿದೆ.

ಶಾಶ್ವತ ಪರಿಹಾರಕ್ಕೆ ಮನವಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಜಿಲ್ಲೆಯಾಗಿರುವ ಮೈಸೂರಲ್ಲಿ ಕೆರೆಗಳ ಸಂರಕ್ಷಣೆಗೆ ಶಾಶ್ವತ ಪರಿಹಾರ ಕಂಡುಹಿಡಿಯಲು ಕ್ರಮ ಕೈಗೊಳ್ಳಬೇಕು. ಲಿಂಗಾಂಬುದಿ ಕೆರೆಗೆ ಒಳಚರಂಡಿ ನೀರು ಸೇರುತ್ತಿರುವುದನ್ನು ತಡೆಗಟ್ಟಲು ಅರಣ್ಯ ಇಲಾಖೆ ಈಗಾಗಲೇ ಮೈಸೂರು ಮಹಾನಗರ ಪಾಲಿಕೆಗೆ ಪತ್ರ ಬರೆದಿದ್ದರೂ, ಇದುವರೆಗೂ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ. ಕೆರೆ ಸುತ್ತಮುತ್ತಲಿನ ಬಡಾವಣೆಗಳ ಒಳಚರಂಡಿ ನೀರು ಪ್ರತ್ಯೇಕವಾಗಿ ಬೇರೆಡೆ ಹರಿದುಹೋಗಲು ಪೈಪ್‌ಲೈನ್ ವ್ಯವಸ್ಥೆ ಮಾಡಬೇಕು. ಇಲ್ಲದಿದ್ದರೆ ಕೆರೆಗೆ ಸೇರುವ ಮುನ್ನ ನೀರನ್ನು ಶುದ್ಧೀಕರಿಸುವ ಘಟಕ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು. ಜಿಲ್ಲಾಡಳಿತ ವಿವಿಧ ಇಲಾಖಾ ಅಧಿಕಾರಿಗಳ ನಡುವೆ ಸಮನ್ವಯತೆ ಸಾಧಿಸಿ ಲಿಂಗಾಂಬುದಿ ಕೆರೆ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಮನವಿ ಮಾಡಿದ್ದಾರೆ.

ನೀರಿನ ಉಷ್ಣತೆ, ಆಮ್ಲಜನಕದ ವ್ಯತ್ಯಾಸವೇ ಕಾರಣ

ಮೈಸೂರು,ಆ.29(ಎಂಟಿವೈ)–ಮೈಸೂರಿನ ಲಿಂಗಾಂಬುದಿ ಕೆರೆಯಲ್ಲಿ ಮೀನುಗಳ ಮಾರಣಹೋಮಕ್ಕೆ ಕೆರೆ ನೀರಿನ ಉಷ್ಣತೆ ಹಾಗೂ ಆಮ್ಲಜನಕದ ವ್ಯತ್ಯಾಸವೇ ಕಾರಣ ಎಂದು ಡಿಸಿಎಫ್ ಬಸವರಾಜು ಸ್ಪಷ್ಟಪಡಿಸಿದ್ದಾರೆ.

ಮೈಸೂರು ಅರಣ್ಯ ವಿಭಾಗಕ್ಕೆ ಸೇರಿದ ಲಿಂಗಾಂಬುದಿ ಕೆರೆಯ ಸೆಕ್ಷನ್4ರಲ್ಲಿ ಮೀನುಗಳು ಸಾವನ್ನಪ್ಪಿದ್ದು, ಪ್ರಕರಣ ಗಮನಕ್ಕೆ ಬಂದ ಕೂಡಲೇ ಅರಣ್ಯ ಇಲಾಖೆ, ಮೀನುಗಾರಿಕೆ ಇಲಾಖೆ ಹಾಗೂ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದ್ದೇವೆ. ಆ.27ರಂದು ಮೈಸೂರು ವ್ಯಾಪ್ತಿಯ ಬೆಳವಾಡಿ, ವಿಜಯನಗರ, ದಟ್ಟಗಳ್ಳಿ ಹಾಗೂ ಬೋಗಾದಿ ಸೇರಿದಂತೆ ಇನ್ನಿತರ ಪ್ರದೇಶಗಳಲ್ಲಿ ಮಳೆಯಾಗಿದ್ದು, ಆ ಭಾಗದಿಂದ ರಾಜಕಾಲುವೆಗಳಲ್ಲಿ ಕೆರೆಗೆ ನೀರು ಹರಿದುಬಂದಿದೆ. ಇದರಿಂದ ಕೆರೆ ನೀರಿನ ಉಷ್ಣತೆ ಹಾಗೂ ಆಮ್ಲಜನಕದಲ್ಲಿ ವ್ಯತ್ಯಾಸವಾಗಿದೆ. ಇದರ ಪರಿಣಾಮ ಬಹುತೇಕ ದೊಡ್ಡ ಮೀನುಗಳು ಸಾವನ್ನಪ್ಪಿರುವುದು ಮೇಲ್ನೋಟಕ್ಕೆ ದೃಢಪಟ್ಟಿದೆ ಎಂದು ತಿಳಿಸಿದ್ದಾರೆ.

ಮೀನುಗಳ ಸಾವಿನ ಕಾರಣ ಪತ್ತೆ ಮಾಡಲು ವೈಜ್ಞಾನಿಕ ತನಿಖೆಗಾಗಿ ಸತ್ತ ಮೀನಿನ ಮಾದರಿಗಳನ್ನು ಮಂಗಳೂರಿನ ಮೀನುಗಾರಿಕಾ ಕಾಲೇಜಿಗೆ ಕಳುಹಿಸಲು ಕ್ರಮ ಕೈಗೊಳ್ಳಲಾಗಿದೆ. ಅಲ್ಲದೆ, ಕೆರೆಯಲ್ಲಿ ತೇಲುತ್ತಿರುವ ಮೀನುಗಳ ಕಳೇಬರ ಸಂಗ್ರಹಿಸಲು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಬುಧವಾರ (ಆ.30) ಸಂಜೆ ವೇಳೆಗೆ ಎಷ್ಟು ಪ್ರಮಾಣದ ಮೀನು ಸಾವನ್ನಪ್ಪಿವೆ ಎಂದು ನಿಖರವಾಗಿ ತಿಳಿಯುತ್ತದೆ. ಕೆರೆ ನೀರನ್ನು ಪರೀಕ್ಷೆ ಮಾಡಲು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಕ್ರಮ ಕೈಗೊಂಡಿದೆ ಎಂದು ಸ್ಪಷ್ಟಪಡಿಸಿದ್ದಾರೆ.



ಮೈಸೂರಿನ ಲಿಂಗಾಂಬುದಿ ಕೆರೆಯಲ್ಲಿ ಮೃತಪಟ್ಟಿರುವ ಮೀನುಗಳ ಕಳೇಬರ ಸಂಗ್ರಹಿಸುತ್ತಿರುವ ಅರಣ್ಯ ಸಿಬ್ಬಂದಿ.

ಲಿಂಗಾಂಬುದಿ ಕೆರೆ ರೂಪುಗೊಂಡ ಇತಿಹಾಸ

ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ಲಿಂಗಾಂಬುಧಿ ಕೆರೆ ಅಭಿವೃದ್ಧಿಪಡಿಸಲಾಗಿದೆ ಇದು 250 ಎಕರೆ ವಿಸ್ತೀರ್ಣ ಹೊಂದಿದ್ದು, ಇದರಲ್ಲಿ ಲಿಂಗಾಬುದಿ ಸರ್ವೆ ನಂ 23ರಲ್ಲಿ 51.3 ಎಕರೆ, ದಟ್ಟಗಳ್ಳಿ ಸರ್ವೆ ನಂ. 82ರಲ್ಲಿ 136.11 ಎಕರೆ ಮತ್ತು ಅಯ್ಯಜ್ಜಯ್ಯನ ಹುಂಡಿ ಸರ್ವೆ ನಂ.11ರಲ್ಲಿ 28.23 ಎಕರೆ ಒಳಗೊಂಡಿದೆ. ಕೆರೆಯ 150 ಎಕರೆ ಪ್ರದೇಶ ನೀರಿನಿಂದ ಆವೃತವಾಗಿದ್ದರೆ, ಉಳಿದ 100 ಎಕರೆ ಪ್ರದೇಶವನ್ನು ಮೀಸಲು ಅರಣ್ಯ ಪ್ರದೇಶ ಎಂದು ಘೋಷಿಸಲಾಗಿದೆ.

ಮೈಸೂರಲ್ಲಿ 'ಗೃಹಲಕ್ಷ್ಮಿ' ಯೋಜನೆಗೆ ಚಾಲನೆ

ಮೂರನೇ ಪುಟದಿಂದ

ಸೇರಿದಂತೆ ಸಚಿವ ಸಂಪುಟದ ಸದಸ್ಯರು, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ, ಸಹಕಾರ ಸಚಿವ ಕೆ.ಎನ್. ರಾಜಣ್ಣ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಸ್.ಎಸ್.ಭೋಸರಾಜು, ಮೈಸೂರು ಮಹಾನಗರ ಪಾಲಿಕೆ ಮಹಾ ಪೌರ ಶಿವಕುಮಾರ್ ಭಾಗವಹಿಸುವರು.


ವಿಶೇಷ ಆಹ್ವಾನಿತರಾಗಿ ರಾಜ್ಯಸಭಾ ಸದಸ್ಯರಾದ ಕೆ.ಸಿ ವೇಣುಗೋಪಾಲ್, ರಣದೀಪ್ ಸುರ್ಜೆವಾಲ, ಸಮಾರಂಭದ ಅತಿಥಿಗಳಾಗಿ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕ ತನ್ವೀರ್ ಸೇಠ್, ಹೆಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ಅನಿಲ್ ಕುಮಾರ್.ಸಿ, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಡಿ.ಹರೀಶ್‌ಗೌಡ, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ, ಹನೂರು ವಿಧಾನಸಭಾ ಕ್ಷೇತ್ರದ ಶಾಸಕ ಎಂ.ಆರ್.ಮಂಜುನಾಥ್, ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ರವಿಕುಮಾರ್ ಗೌಡ, ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್, ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕ ಪುಟ್ಟರಂಗಶೆಟ್ಟಿ, ಮದ್ದೂರು ವಿಧಾನಸಭಾ ಕ್ಷೇತ್ರದ ಶಾಸಕ ಉದಯ್ ಕೆ.ಎಂ., ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ, ಕೃಷ್ಣರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕ ರವಿಶಂಕರ್ ಡಿ., ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ಎನ್.ಶ್ರೀವತ್ಸ, ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಪಿ.ಎಂ.ನರೇಂದ್ರಸ್ವಾಮಿ, ಕೆ.ಆರ್.ಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎಚ್.ಟಿ. ಮಂಜು, ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕ ಮಂತರ್‌ಗೌಡ ಹಾಗೂ ವಿಧಾನಪರಿಷತ್ ಸದಸ್ಯರಾದ ಸಿ.ಎನ್. ಮಂಜೇಗೌಡ, ಎಂ.ಪಿ.ಸುಜಾ ಕುಶಾಲಪ್ಪ, ಎಚ್.ವಿಶ್ವನಾಥ್, ಮರಿತಿಬ್ಬೇಗೌಡ, ಮಧು ಜಿ.ಮಾದೇಗೌಡ, ಎಸ್.ಎಲ್. ಭೋಜೇಗೌಡ, ಡಿ.ತಿಮ್ಮಯ್ಯ, ದಿನೇಶ್ ಗೂಳಿಗೌಡ ಪ್ರಮುಖರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ನವದೆಹಲಿಯಿಂದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ವಿಶೇಷ ವಿಮಾನದಲ್ಲಿ ಬುಧವಾರ ಬೆಳಗ್ಗೆ 11.30ರಿಂದ 12 ಗಂಟೆಯೊಳಗೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸುವರು. ಅಲ್ಲಿಂದ ಕಾರಿನಲ್ಲಿ ನಂಜನಗೂಡು ರಸ್ತೆ, ಗನ್‌ಹೌಸ್ ಸರ್ಕಲ್, ಚಾಮರಾಜ ಜೋಡಿ ರಸ್ತೆ ಮೂಲಕ ರಾಮಸ್ವಾಮಿ ಸರ್ಕಲ್, ಜೆಎಲ್‌ಬಿ ರಸ್ತೆ, ಮುಡಾ ಸರ್ಕಲ್ ಮಾರ್ಗ ಸಾಗಿ ಕ್ರಾಫರ್ಡ್ ಹಾಲ್ ಬಳಿಯ ವಿಶೇಷ ದ್ವಾರದಲ್ಲಿ ಮಹಾರಾಜ ಕಾಲೇಜು ಮೈದಾನ ತಲುಪುವರು.

ಕಾರ್ಯಕ್ರಮ ಮುಗಿದ ಬಳಿಕ ಅವರು ಅದೇ ಮಾರ್ಗವಾಗಿ ಮಂಡಕಳ್ಳಿ ವಿಮಾನ ನಿಲ್ದಾಣ ತಲುಪಿ ಮಧ್ಯಾಹ್ನ 2.30ರಿಂದ 3 ಗಂಟೆಯೊಳಗೆ ವಿಶೇಷ ವಿಮಾನದಲ್ಲಿ ನವದೆಹಲಿಗೆ ಪ್ರಯಾಣ ಬೆಳೆಸುವರು ಎಂದು ಪೊಲೀಸರು ತಿಳಿಸಿದ್ದಾರೆ. ರಾಹುಲ್ ಗಾಂಧಿ ಆಗಮನದ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣ, ಸಾಗುವ ಮಾರ್ಗ ಹಾಗೂ ಮಹಾರಾಜ ಕಾಲೇಜು ಮೈದಾನದಲ್ಲಿ ಇನ್ನಿಲ್ಲದ ಭಾರಿ ಭದ್ರತೆ ಒದಗಿಸಿ ಕಟ್ಟೆಚ್ಚರ ವಹಿ ಸಲಾಗಿದೆ. ಕಾರ್ಯಕ್ರಮಕ್ಕೆ ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ, ಹಾಸನ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದಲೂ ಅಪಾರ ಸಂಖ್ಯೆಯಲ್ಲಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳನ್ನು ಕರೆತರುವುದರಿಂದ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಹಿಂದೆಂದೂ ಕಂಡಿರದ ವಿಶಾಲ ಮಂಟಪ, ಬೃಹತ್ ವೇದಿಕೆಯನ್ನು ಅಳವಡಿಸಲಾಗಿದೆ.

ಸುಮಾರು ಒಂದೂವರೆ ಲಕ್ಷ ಮಂದಿ ಆಗಮಿಸುವ ನಿರೀಕ್ಷೆ ಇರುವುದರಿಂದ ಜಿಲ್ಲಾಡಳಿತವು ಆಸನದ ವ್ಯವಸ್ಥೆ ಕಲ್ಪಿಸಲಾಗಿದ್ದು, ಪ್ರತ್ಯೇಕ ಎನ್‌ಕ್ಲೋಷರ್, ಗಣ್ಯರು, ಅತೀ ಗಣ್ಯರು ಕುಳಿತುಕೊಳ್ಳಲು ಸೌಲಭ್ಯ ಕಲ್ಪಿಸಲಾಗಿದೆ. ಕಾರ್ಯಕ್ರಮದ ಸ್ಥಳದಲ್ಲಿ ಕುಡಿಯುವ ನೀರು, ತಾತ್ಕಾಲಿಕ ಮೊಬೈಲ್ ಶೌಚಾಲಯ, ಆಂಬುಲೆನ್ಸ್, ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ಇನ್ನಿತರ ಸೌಲಭ್ಯವನ್ನು ಜಿಲ್ಲಾಡಳಿತ ಕಲ್ಪಿಸಿದೆ.

ಬೇರೆ ಬೇರೆ ಕಡೆಯಿಂದ ಜನರನ್ನು ಕರೆತರುವ ಕೆಎಸ್‌ಆರ್‌ಟಿಸಿ ಬಸ್ಸುಗಳಿಗೆ ಬೇರೆ ಬೇರೆ ಕಡೆಗಳಲ್ಲಿ ನಿಲುಗಡೆ ವ್ಯವಸ್ಥೆ ಕಲ್ಪಿಸಲಾಗಿದ್ದು, ಸಂಚಾರ ಮತ್ತು ವಾಹನ ನಿಲುಗಡೆ ನಿರ್ಬಂಧಿಸಲಾಗಿದೆ. ಕಾರ್ಯಕ್ರಮ ನಡೆಯುವ ಸ್ಥಳದ ಪ್ರವೇಶ ದ್ವಾರಗಳಲ್ಲಿ ಮೆಟಲ್ ಡೋರ್ ಡಿಟೆಕ್ಟರ್‌ಗಳನ್ನು ಅಳವಡಿಸಿ ವೇದಿಕೆಯಲ್ಲೂ ಮುಂಜಾಗ್ರತೆ ಕ್ರಮವಾಗಿ ಶ್ವಾನದಳ, ಹ್ಯಾಂಡ್‌ಮೇಡ್ ಮೆಟಲ್ ಡಿಟೆಕ್ಟರ್‌ಗಳಿಂದ ತಪಾಸಣೆ ನಡೆಸಿ ಸರ್ವರೀತಿಯಲ್ಲೂ ಸಜ್ಜುಗೊಳಿಸಲಾಗಿದೆ. ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಡಿಸಿಪಿಗಳಾದ ಎಂ. ಮುತ್ತುರಾಜ್, ಎಸ್. ಜಾಹ್ನವಿ, ಎಸ್ಪಿ ಸೀಮಾ ಲಾಟ್ಕರ್, ಎಎಸ್ಪಿ ಡಾ.ಎನ್. ನಂದಿನಿ ನೇತೃತ್ವದಲ್ಲಿ ಕಾರ್ಯಕ್ರಮಕ್ಕೆ ಹೆಚ್ಚಿನ ಸಿಬ್ಬಂದಿ ನಿಯೋಜಿಸಿ ಭಾರಿ ಪೊಲೀಸ್ ಭದ್ರತೆ ಒದಗಿಸಲಾಗಿದೆ.



ಫಲಾನುಭವಿಗಳಿಗೆ 2000 ಬಸ್; ಸಂಚಾರದಲ್ಲಿ ವ್ಯತ್ಯಯ

ಮೈಸೂರು,ಆ.29– ಕರ್ನಾಟಕ ಸರ್ಕಾರದ ವತಿಯಿಂದ ಆಗಸ್ಟ್ 30 ರಂದು ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯಲಿರುವ ಗೃಹಲಕ್ಷ್ಮಿ ಯೋಜನೆಯ ಉದ್ಘಾಟನೆ ಸಮಾರಂಭಕ್ಕೆ ವಿವಿಧ ಸ್ಥಳಗಳಿಂದ ಫಲಾನುಭವಿಗಳನ್ನು ಕರೆ ತರುವ ಸಂಬಂಧ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ 2000 ವಾಹನಗಳನ್ನು ನೀಡಿರುವುದರಿಂದ ಬುಧವಾರ ದೈನಂದಿನ ಬಸ್ ಸಂಚಾರದಲ್ಲಿ ವ್ಯತ್ಯಯ ಉಂಟಾಗಲಿದೆ. ಪ್ರಯಾಣಿಕರು ಸಹಕರಿಸಬೇಕೆಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಊಟೋಪಚಾರದ ಹೊಣೆ ಪಂಚಾಯ್ತಿ ಪಿಡಿಓಗಳದ್ದು

ಮೈಸೂರು, ಆ.29– ಪಂಚಾಯ್ತಿಯೊಂದಕ್ಕೆ ಮೂರು ಬಸ್ ನೀಡಲಾಗಿದ್ದು, ಆ ಬಸ್‌ಗಳಲ್ಲಿ ಬರುವಂತಹ ಫಲಾನುಭವಿಗಳ ಊಟ, ನೀರು ಇನ್ನಿತರೆ ಅಗತ್ಯಗಳನ್ನು ಪೂರೈಸುವ ಜವಾಬ್ದಾರಿಯನ್ನು ಆಯಾಯ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳಿಗೆ ವಹಿಸಲಾಗಿದೆ. ಹಾಗಾಗಿ ಕಾರ್ಯಕ್ರಮ ಸ್ಥಳದಲ್ಲಿ ಯಾವುದೇ ಊಟದ ವ್ಯವಸ್ಥೆ ಮಾಡಲಾಗಿಲ್ಲ. ಆದರೆ ನೀರು ಹಾಗೂ ತಾತ್ಕಾಲಿಕ ಶೌಚಾಲಯದ ವ್ಯವಸ್ಥೆ ಮಾಡಲಾಗಿದೆ.



ಉಜ್ವಲ ಬಳಕೆದಾರರಿಗೆ 400 ರೂ, ಉಳಿದ ಗ್ರಾಹಕರಿಗೆ 200 ರೂ. ಎಲ್‌ಪಿಜಿ ಸಬ್ಸಿಡಿ

ನವದೆಹಲಿ, ಆ.29– ಹಲವಾರು ವರ್ಷಗಳ ಹಿಂದೆ ಅಡುಗೆ ಅನಿಲದ ಮೇಲಿನ ಸಬ್ಸಿಡಿಯನ್ನು ಹಿಂತೆಗೆದುಕೊಂಡಿದ್ದ ಕೇಂದ್ರ ಸರ್ಕಾರ ಇದೀಗ ಸಿಲಿಂಡರ್‌ಗೆ 200 ರೂಪಾಯಿ ಸಬ್ಸಿಡಿ ಕೊಡಲು ನಿರ್ಧರಿಸಿದೆ.

ಕೇಂದ್ರ ಸಚಿವ ಸಂಪುಟ ಪುನಃ ಸಬ್ಸಿಡಿಯನ್ನು ಕೊಡುವ ನಿರ್ಧಾರ ತೆಗೆದುಕೊಂಡಿದ್ದು, ದೇಶದ ಎಲ್ಲಾ 33 ಕೋಟಿ ಎಲ್‌ಪಿಜಿ ಗ್ರಾಹಕರಿಗೆ ಇದು ಅನ್ವಯಿಸುತ್ತದೆ. ಇದರಿಂದ ವಾರ್ಷಿಕ ಒಟ್ಟು ಸುಮಾರು 10,000 ಕೋಟಿ ರೂ. ಆರ್ಥಿಕ ಹೊರೆಯಾಗಲಿದ್ದು ಈ ವರ್ಷದ ಉಳಿಕೆ ಅವಧಿಗೆ 7,680 ಕೋಟಿ ರೂಪಾಯಿ ವೆಚ್ಚವಾಗಲಿದೆ. ಅಡುಗೆ ಅನಿಲ ಸಿಲಿಂಡರ್ ಬೆಲೆಯನ್ನು ಎಲ್ಲಾ ಗ್ರಾಹಕರಿಗೆ 200 ರೂಪಾಯಿಯಷ್ಟು ಇಳಿಸಲಾಗಿದೆ ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅನುರಾಗ್ ಠಾಕೂರ್ ಇಂದು ಕೇಂದ್ರ ಸಂಪುಟದ ನಿರ್ಧಾರಗಳನ್ನು ವಿವರಿಸಿದರು. ಸಬ್ಸಿಡಿಯನ್ನು ಬ್ಯಾಂಕ್ ಖಾತೆಗಳಿಗೆ ಕಳುಹಿಸಲಾಗುತ್ತದೆಯೇ



ಅಥವಾ ಸಿಲಿಂಡರ್ ಬೆಲೆಯಲ್ಲಿ ಫ್ಲಾಟ್ ರಿಯಾಯಿತಿಯನ್ನು ನೀಡಲಾಗುತ್ತದೆಯೇ ಎಂದು ಉತ್ತರಿಸಲು ಠಾಕೂರ್ ನಿರಾಕರಿಸಿದರು. ಇದಲ್ಲದೆ, ಉಜ್ವಲ ಯೋಜನೆಯಡಿ ಇನ್ನೂ 75 ಲಕ್ಷ ಮಂದಿಗೆ ಉಚಿತ ಅನಿಲ ಸಂಪರ್ಕವನ್ನು ಕಲ್ಪಿಸಿಕೊಡಲಾಗುತ್ತದೆ. ಉಜ್ವಲ ಗ್ರಾಹಕರು ಪ್ರತಿ ಸಿಲಿಂಡರ್‌ಗೆ ಒಟ್ಟು 400 ರೂಪಾಯಿ ಸಬ್ಸಿಡಿ ಪಡೆಯಲಿದ್ದಾರೆ ಎಂದು ಅನುರಾಗ್ ಠಾಕೂರ್ ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು ಕೆಲ ವರ್ಷಗಳ ಹಿಂದೆ ಗ್ರಾಹಕರ ಬ್ಯಾಂಕ್ ಖಾತೆಗೆ LPG ಸಬ್ಸಿಡಿ ಹಣ ಪಾವತಿಸುವುದನ್ನು ನಿಲ್ಲಿಸಿತ್ತು. ಕಳೆದ ವರ್ಷ ಮೇ ತಿಂಗಳಲ್ಲಿ ಪ್ರತಿ ಬ್ಯಾರೆಲ್‌ಗೆ ಬೆಲೆ ಸುಮಾರು 118 ಡಾಲರ್ ತಲುಪಿದ ನಂತರ ಕಚ್ಚಾ ತೈಲ ಬೆಲೆಗಳು ಗಣನೀಯವಾಗಿ ಇಳಿದಿದ್ದರೂ ಸಹ ಎಲ್‌ಪಿಜಿ ಸಿಲಿಂಡರ್ ಬೆಲೆಗಳನ್ನು ಏಕೆ ಕಡಿತಗೊಳಿಸುತ್ತಿಲ್ಲ ಎಂದು ಕಳೆದ ತಿಂಗಳು ಸರ್ಕಾರವನ್ನು ಪ್ರಶ್ನಿಸಲಾಗಿತ್ತು. ಕಳೆದ ಏಳು ತಿಂಗಳಿನಿಂದ ಕಚ್ಚಾ ತೈಲ ಬೆಲೆಯು 60 ರಿಂದ 80 ಡಾಲರ್ ವ್ಯಾಪ್ತಿಯಲ್ಲಿದೆ. ಸಬ್ಸಿಡಿಯನ್ನು ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗುತ್ತದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಕಳೆದ ತಿಂಗಳು ರಾಜ್ಯಸಭೆಯಲ್ಲಿ ಹೇಳಿದ್ದರು.

ಆಗಸ್ಟ್ ಮೊದಲ ದಿನಾಂಕದಂದು ರಾಜಧಾನಿ ದೆಹಲಿಯಲ್ಲಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ 1103 ರೂ. ಅದೇ ಸಮಯದಲ್ಲಿ ಎಲ್‌ಪಿಜಿ ಸಿಲಿಂಡರ್ ಬೆಲೆ ಮುಂಬೈನಲ್ಲಿ 1102.50 ಮತ್ತು ಕರ್ನಾಟಕದಲ್ಲಿ 1,105.50 ರೂ. ಇತ್ತು. ಪೆಟ್ರೋಲಿಯಂ ಕಂಪನಿಗಳು ಪ್ರತಿ ತಿಂಗಳ ಮೊದಲನೇ ದಿನದಂದು ಎಲ್‌ಪಿಜಿ ಬೆಲೆಯನ್ನು ಬದಲಾಯಿಸುತ್ತವೆ.


ಸಿಇಟಿ, ನೀಟ್: ಇಂದಿನಿಂದ ಎರಡನೇ ಸುತ್ತಿನ ಸೀಟು ಹಂಚಿಕೆ

ಬೆಂಗಳೂರು, ಆ.29– ವೈದ್ಯಕೀಯ, ಇಂಜಿನಿಯರಿಂಗ್ ಸೇರಿದಂತೆ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಆ.30ರಿಂದ ಎರಡನೇ ಸುತ್ತಿನ ಸೀಟು ಹಂಚಿಕೆ ಪ್ರಕ್ರಿಯೆ ಆರಂಭವಾಗಲಿದೆ.

ಆಸಕ್ತ ಅಭ್ಯರ್ಥಿಗಳು ಆದ್ಯತೆಗಳನ್ನು ನಮೂದಿಸಲು ಸೆ.2ರ ಮಧ್ಯಾಹ್ನ 2ರವರೆಗೆ ಅವಕಾಶ ನೀಡಲಾಗಿದೆ. ಸೆ.4ರಂದು ಈ ಸುತ್ತಿನ ಸೀಟು ಹಂಚಿಕೆ ಫಲಿತಾಂಶ ಪ್ರಕಟಿಸಲಾಗುವುದು. ಸೀಟು ಹಂಚಿಕೆಯ ಫಲಿತಾಂಶ ಪ್ರಕಟವಾದ ನಂತರ ಅಭ್ಯರ್ಥಿಗಳಿಗೆ ತಮ್ಮ ಆದ್ಯತೆ ಆಯ್ಕೆ ಮಾಡಲು ಅವಕಾಶ ಇರುವುದಿಲ್ಲ. ಹಂಚಿಕೆಯಾದ ಸೀಟುಗಳಿಗೆ ಪ್ರವೇಶ ಪಡೆಯುವುದು. ಹೆಚ್ಚಿನ ಮಾಹಿತಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ವೀಕ್ಷಿಸಬಹುದು ಎಂದು ಕಾರ್ಯನಿರ್ವಾಹಕ ನಿರ್ದೇಶಕಿ ಎಸ್. ರಮ್ಯಾ ಹೇಳಿದ್ದಾರೆ.

ಜಮ್ಮು–ಕಾಶ್ಮೀರ ಮಾಜಿ ಮುಖ್ಯಮಂತ್ರಿ ಡಾ.ಫಾರೂಕ್ ಅಬ್ದುಲ್ಲಾ ಮೈಸೂರು ಅರಮನೆಗೆ ಭೇಟಿ





ಮೈಸೂರು ಅರಮನೆಗೆ ಸೋಮವಾರ ಜಮ್ಮು–ಕಾಶ್ಮೀರದ ಮಾಜಿ ಸಿಎಂ ಡಾ.ಫಾರೂಕ್ ಅಬ್ದುಲ್ಲಾ (ಮಧ್ಯದಲ್ಲಿರುವವರು) ಭೇಟಿ ನೀಡಿದ್ದರು. ಅವರ ಜೊತೆಯಲ್ಲಿ ಶ್ರೀ ಆಚಾರ್ಯ ಪ್ರಮೋದ್ ಕೃಷ್ಣಂ ಸ್ವಾಮೀಜಿ (ಎಡ ತುದಿ), ಮಾಜಿ ಸಚಿವ ರೋಷನ್ ಬೇಗ್ (ಬಲ ತುದಿ) ಅವರ ಜೊತೆಗಿದ್ದರು. ಮತ್ತೊಂದು ಚಿತ್ರದಲ್ಲಿ ಶ್ರೀರಂಗಪಟ್ಟಣದಲ್ಲಿ ಟಿಪ್ಪು ಸುಲ್ತಾನ್ ಸಮಾಧಿಗೆ ಗೌರವ ಸಲ್ಲಿಸುತ್ತಿರುವುದನ್ನು ಕಾಣಬಹುದು.

ಮೈಸೂರು,ಆ.29(ಪಿಎಂ)– ಜಮ್ಮು–ಕಾಶ್ಮೀರದ ಮಾಜಿ ಮುಖ್ಯಮಂತ್ರಿಗಳೂ ಆದ ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ಅಧ್ಯಕ್ಷ ಡಾ.ಫಾರೂಕ್ ಅಬ್ದುಲ್ಲಾ ಸೋಮವಾರ ಮೈಸೂರು ಅರಮನೆಗೆ ಭೇಟಿ ನೀಡಿದ್ದರು. ಮಾಜಿ ಸಚಿವ ರೋಷನ್ ಬೇಗ್ ಹಾಗೂ ಶ್ರೀ ಆಚಾರ್ಯ ಪ್ರಮೋದ್ ಕೃಷ್ಣಂ ಸ್ವಾಮೀಜಿ ಅವರೊಂದಿಗೆ ಮೈಸೂರು ಅರಮನೆಯನ್ನು ವೀಕ್ಷಿಸಿದರು. ಡಾ.ಫಾರೂಕ್ ಅಬ್ದುಲ್ಲಾ ಅವರು ರಾಜ್ಯ ಅತಿಥಿಯಾಗಿರುವ ಹಿನ್ನೆಲೆಯಲ್ಲಿ ಶಿಷ್ಟಾಚಾರದಂತೆ ಅವರಿಗೆ ಸೂಕ್ತ ಭದ್ರತೆ ಕಲ್ಪಿಸಲಾಗಿತ್ತು.

ಜಮ್ಮು–ಕಾಶ್ಮೀರದಿಂದ ಕರ್ನಾಟಕ ಪ್ರವಾಸಕ್ಕೆ ಬಂದಿದ್ದ ಅವರು, ಭಾನುವಾರ ಬೆಂಗಳೂರಿನಲ್ಲಿ ನಡೆದ ಹುಸೇನ್ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು. ಅಂತೆಯೇ ಸೋಮವಾರ ಶ್ರೀರಂಗಪಟ್ಟಣಕ್ಕೆ ಭೇಟಿ ನೀಡಿ, ಇಲ್ಲಿನ ಟಿಪ್ಪು ಸುಲ್ತಾನ್ ಸಮಾಧಿ ಸ್ಥಳದ ಗುಂಬಸ್ ವೀಕ್ಷಣೆ ಮಾಡಿದರಲ್ಲದೆ, ಸಮಾಧಿಗೆ ಗೌರವ ನಮನ ಸಲ್ಲಿಸಿದರು. ಅಲ್ಲದೆ, ಇಲ್ಲಿನ ಹಲವು ಪ್ರವಾಸಿ ಸ್ಥಳಗಳನ್ನು ವೀಕ್ಷಿಸಿದರು. ಬಳಿಕ ಮೈಸೂರು ನಗರಕ್ಕೆ ಆಗಮಿಸಿದ ಅವರು, ಮೈಸೂರು ಅರಮನೆಗೆ ಭೇಟಿ ನೀಡಿ, ಮರಳಿದರು.

ಭೂ ವಿವಾದ: ಗುದ್ದಲಿಯಿಂದ ಹೊಡೆದು ಅಣ್ಣ-ಅತ್ತಿಗೆ ಕೊಂದು ಪೊಲೀಸರಿಗೆ ಶರಣಾದ ವ್ಯಕ್ತಿ

ತಿ.ನರಸೀಪುರ, ಆ.29- ಬೇಸಾಯ ಮಾಡುತ್ತಿರುವ ಸರ್ಕಾರಿ ಗೋಮಾಳದ ಜಾಗದಲ್ಲಿ ತನಗೂ ಪಾಲು ಕೊಡುವಂತೆ ಜಗಳ ತೆಗೆದ ವ್ಯಕ್ತಿಯೋರ್ವ ಸ್ವಂತ ತನ್ನ ಅಣ್ಣ ಮತ್ತು ಅತ್ತಿಗೆಯ ತಲೆಗೆ ಗುದ್ದಲಿಯಿಂದ ಹೊಡೆದು ಬರ್ಬರವಾಗಿ ಕೊಲೆಗೈದು ಪೊಲೀಸರಿಗೆ ಶರಣಾಗಿರುವ ಘಟನೆ ತಾಲೂಕಿನ ಜೀನಗುಡ್ಡೆ ಬಳಿ ಮಂಗಳವಾರ ಮಧ್ಯಾಹ್ನ ಸಂಭವಿಸಿದೆ.

ತಾಲೂಕಿನ ನುಗ್ಗೇನಹಳ್ಳಿಕೊಪ್ಪಲು ವಾಸಿ ಶಿವಲಿಂಗು(62) ಮತ್ತು ಇವರ ಪತ್ನಿ ಭಾರತಿ(55) ಕೊಲೆಯಾದ ದಂಪತಿ. ಶಿವಲಿಂಗು ಅವರ ಸಹೋದರ ಹನುಮಂತು (60) ಅಣ್ಣ-ಅತ್ತಿಗೆಯನ್ನು ಕೊಂದು, ನಂತರ ಪೊಲೀಸರಿಗೆ ಶರಣಾಗಿದ್ದಾನೆ.

ನುಗ್ಗೇನಹಳ್ಳಿಕೊಪ್ಪಲು ಗ್ರಾಮದ ಸಮೀಪವಿರುವ ಜೀನಗುಡ್ಡದಲ್ಲಿ ಸುಮಾರು 170 ಎಕರೆ ಗೋಮಾಳವಿದ್ದು, ಗ್ರಾಮಸ್ಥರು ಇಲ್ಲಿ ಬೇಸಾಯ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಇದರಲ್ಲಿ ಈ ದಂಪತಿ 15 ಗುಂಟೆ ಜಾಗದಲ್ಲಿ ಬೇಸಾಯ ಮಾಡುತ್ತಿದ್ದರು. ಈ ಜಾಗದಲ್ಲಿ ತನಗೂ ಪಾಲು ಕೊಡುವಂತೆ ಹನುಮಂತು, ಶಿವಲಿಂಗು ಜೊತೆ ಕಳೆದ ಏಳೆಂಟು ವರ್ಷಗಳಿಂದ ಜಗಳ ಮಾಡುತ್ತಿದ್ದನಂತೆ.

ಈ ಸಂಬಂಧ ಗ್ರಾಮದ ಯಜಮಾನರು ಹಲವಾರು ಬಾರಿ ರಾಜೀ ಪಂಚಾಯಿತಿ




ಕೊಲೆಯಾದ ಶಿವಲಿಂಗು ಮತ್ತು ಭಾರತಿ ದಂಪತಿ



ಹತ್ಯೆಗೆ ಬಳಸಲಾದ ಗುದ್ದಲಿ



ಕೊಲೆ ಆರೋಪಿ ಹನುಮಂತು

ನಡೆಸಿದ್ದರು. ಆದರೆ ಯಾವುದೇ ಪ್ರಯೋಜನವಾಗದೆ, ಆಗಾಗ ಜಗಳ ನಡೆಯುತ್ತಿತ್ತು. ಈ ದಂಪತಿ ಸಣ್ಣಪುಟ್ಟ ಗಲಾಟೆ ಬಗ್ಗೆ ತಲೆ ಕೆಡಿಸಿಕೊಳ್ಳದೆ ತಮ್ಮ ಪಾಡಿಗೆ ಕೆಲಸ ಮಾಡಿಕೊಂಡು ಹೋಗುತ್ತಿದ್ದರು.

ಇಂದು ಮಧ್ಯಾಹ್ನ ಶಿವಲಿಂಗು ಮತ್ತು ಭಾರತಿ ದಂಪತಿ ಎಂದಿನಂತೆ ತಮ್ಮ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ಅಲ್ಲಿಗೆ ಬಂದ ಹನುಮಂತು ಜಗಳ ತೆಗೆದು ತನಗೂ ಈ ಜಮೀನಿನಲ್ಲಿ ಪಾಲು ಕೊಡಿ, ಇಲ್ಲವೇ ಪೂರ್ಣ ಜಮೀನು ಬಿಟ್ಟು ಕೊಡಿ ಎಂದು ಕೂಗಾಡಲಾರಂಭಿಸಿದ್ದಾನೆ. ಈ ವೇಳೆ ಇಬ್ಬರಿಗೂ ಜೋರು-ಜೋರಾಗಿ ಜಗಳ ನಡೆದು, ಅದು ವಿಕೋಪಕ್ಕೆ ತಿರುಗಿದೆ. ಯಾವುದೇ ಕಾರಣಕ್ಕೂ ಜಮೀನು ಬಿಟ್ಟುಕೊಡುವುದಿಲ್ಲ ಎಂದು ಶಿವಲಿಂಗು ತಿಳಿಸಿದ್ದಾರೆ.

ಇದರಿಂದ ಕುಪಿತಗೊಂಡ ಹನುಮಂತು ಅಲ್ಲೇ ಬಿದ್ದಿದ್ದ ಗುದ್ದಲಿಯಿಂದ ತನ್ನ ಅಣ್ಣ ಶಿವಲಿಂಗು ತಲೆಗೆ ಬಲವಾಗಿ ಹೊಡೆದಿದ್ದಾನೆ. ತಡೆಯಲು ಬಂದ ತನ್ನ ಅತ್ತಿಗೆ ತಲೆಗೂ ಗುದ್ದಲಿಯಿಂದ ಹೊಡೆದು ಗಾಯಗೊಳಿಸಿದ್ದಾನೆ. ದಂಪತಿ ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.

ನಂತರ ಆರೋಪಿ ಹನುಮಂತು ತನ್ನ ಮೊಬೈಲ್ ಮೂಲಕ ಪೊಲೀಸ್ ಠಾಣೆಗೆ ಕರೆ ಮಾಡಿ, ತಾನು ತನ್ನ ಅಣ್ಣ-ಅತ್ತಿಗೆಯನ್ನು ಕೊಂದಿದ್ದು, ಠಾಣೆಗೆ ಬಂದು ಶರಣಾಗುತ್ತಿರುವುದಾಗಿ ತಿಳಿಸಿದ್ದಾನೆ. ಸ್ವಲ್ಪ ಹೊತ್ತಿನ ನಂತರ ಠಾಣೆಗೆ ತೆರಳಿ ಶರಣಾಗಿದ್ದಾನೆ.

ವಿಷಯ ತಿಳಿದು ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಅಡಿಷನಲ್ ಎಸ್ಪಿ ನಂದಿನಿ, ಸರ್ಕಲ್ ಇನ್ಸ್‌ಪೆಕ್ಟರ್ ಮನೋಜ್ ಕುಮಾರ್ ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಊರಿನವರ ಪ್ರಕಾರ ಜೀನಗುಡ್ಡದಲ್ಲಿ 170 ಎಕರೆ ಗೋಮಾಳದಲ್ಲಿ ನುಗ್ಗೇನಹಳ್ಳಿ ಗ್ರಾಮಸ್ಥರು ಬೇಸಾಯ ಮಾಡಿಕೊಂಡಿದ್ದು, ಶಿವಲಿಂಗು ಮತ್ತು ಭಾರತಿ ದಂಪತಿ 15 ಗುಂಟೆ ಜಾಗದಲ್ಲಿ ವ್ಯವಸಾಯ ಮಾಡಿಕೊಂಡಿದ್ದರು. ಹನುಮಂತು ತನಗೂ ಪಾಲು ಕೊಡುವಂತೆ ಆಗಾಗ ಗಲಾಟೆ ಮಾಡುತ್ತಿದ್ದ ಎಂದು ತಿಳಿಸಿದ್ದಾರೆ.

ಬನ್ನೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದು, ಮೃತದೇಹಗಳನ್ನು ಸರ್ಕಾರಿ ಆಸ್ಪತ್ರೆ ಶವಾಗಾರಕ್ಕೆ ಸ್ಥಳಾಂತರಿಸಿದ್ದಾರೆ.

10 ಆಸ್ಪತ್ರೆ ನಿರ್ಮಾಣಕ್ಕಿಂತ ಒಂದು ಕ್ರೀಡಾಂಗಣ ಮುಖ್ಯ

ವಲಯ ಮಟ್ಟದ ಕ್ರೀಡಾಕೂಟದಲ್ಲಿ ಬಿಇಓ ಅಭಿಪ್ರಾಯ




ಮಲ್ಕುಂಡಿ, ಆ.29- ಕ್ರೀಡೆಯಿಂದ ಮನುಷ್ಯನ ಆರೋಗ್ಯ ಸದೃಢವಾಗಿರುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಲಿಂಗಯ್ಯ ಅಭಿಪ್ರಾಯಪಟ್ಟರು.

ಸಮೀಪದ ಹುರ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಆವರಣದಲ್ಲಿ ವಲಯ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಗಳಿಂದ ಆರೋಗ್ಯ ಸುಧಾರಿಸಲಿದೆ. ಹೀಗಾಗಿ 10 ಆಸ್ಪತ್ರೆ ನಿರ್ಮಾಣಕ್ಕಿಂತ ಒಂದು ಕ್ರೀಡಾಂಗಣ ನಿರ್ಮಿಸುವುದು ಸೂಕ್ತವೆನ್ನುವ ಮಾತಿದೆ ಆಟೋಟಗಳಿಂದ ನಮ್ಮ ಆರೋಗ್ಯ ಚೆನ್ನಾಗಿರಲಿದೆ. ಇದರಿಂದ ಆಸ್ಪತ್ರೆಗೆ ಹೋಗುವುದು ತಪ್ಪುತ್ತದೆ. ಪ್ರತಿಯೊಬ್ಬರೂ ಶಿಕ್ಷಣದ ಜೊತೆಗೆ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಗ್ರಾಪಂ ಅಧ್ಯಕ್ಷೆ ದೇವಮ್ಮ ಚಲುವರಾಜು, ಉಪಾಧ್ಯಕ್ಷ ರೆಹಮಾತ್ ಉಲ್ಲಾ, ಗ್ರಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಸದಸ್ಯರಾದ ಕೃಷ್ಣನಾಯಕ, ಲಕ್ಷ್ಮಿ, ಎಸ್‌ಡಿಎಂಸಿ ಅಧ್ಯಕ್ಷ ಮಹದೇವಯ್ಯ, ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಧರ್ಮ ರತ್ನಕರ, ಶಿಕ್ಷಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್, ಮುಖಂಡರುಗಳಾದ ಅಬ್ದುಲ್ ರಜಾಕ್, ಎಂ.ಪುಟ್ಟಸ್ವಾಮಿ, ಮಹದೇವಪ್ಪ, ಸಿಇಓ ರಮೇಶ್, ಸಿಆರ್‌ಪಿ ರವೀಶ್, ಸಿದ್ದೇಶ್, ಪ್ರಾಂಶುಪಾಲ ಮಂಜುನಾಥ್, ಹಲ್ಲರೆ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಬಸವರಾಜ್ ಸೇರಿದಂತೆ ಪ್ರಮುಖರು ಹಾಜರಿದ್ದರು.

ನನ್ನ ವಿರುದ್ಧ ಕೆಲಸ ಮಾಡಿ, ಟಿಕೆಟ್ ಕೇಳ್ತಾ ಇದ್ದಾರೆ



ನಂಜನಗೂಡು, ಆ.29- ಕಳೆದ ಚುನಾವಣೆಯಲ್ಲಿ ನನ್ನ ವಿರುದ್ಧ ಕೆಲಸ ಮಾಡಿ ಪಕ್ಷವನ್ನು ಸೋಲಿಸಿದವರು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಆಕಾಂಕ್ಷಿಗಳಾಗಿದ್ದಾರೆ, ಯಾವ ನೈತಿಕತೆ ಇಟ್ಟುಕೊಂಡು ಟಿಕೆಟ್ ಕೇಳುತ್ತಾರೆ ಎಂದು ತಿಳಿಯುತ್ತಿಲ್ಲ ಎಂದು ಮಾಜಿ ಶಾಸಕ ಬಿ.ಹರ್ಷವರ್ಧನ್ ವಾಗ್ದಾಳಿ ನಡೆಸಿದ್ದಾರೆ.

ನಗರದ ಯಾತ್ರಿಭವನ್ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ಬಿಜೆಪಿ ಬೆಂಬಲಿತ ನೂತನ ಗ್ರಾಪಂ ಅಧ್ಯಕ್ಷ ಹಾಗೂ ಉಪಾಧ್ಯಕ್ಷರುಗಳಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷದಲ್ಲಿದ್ದುಕೊಂಡು ನನ್ನ ವಿರುದ್ಧ ಯಾರು ಕೆಲಸ ಮಾಡಿದ್ದಾರೆ ಎಂದು ಗೊತ್ತಿದೆ, ಮುಂದಿನ ತಾಪಂ ಹಾಗೂ ಜಿಪಂ ಚುನಾವಣೆಯಲ್ಲಿ ಯಾರಿಗೆ ಟಿಕೆಟ್ ಕೊಡಬೇಕು ಎಂಬುದನ್ನು ನಾನೇ ಖುದ್ದು ತೀರ್ಮಾನ ಮಾಡುವವನಿದ್ದೇನೆ, ಮುಂದಿನ ಚುನಾವಣೆಗಳಲ್ಲಿ ತಪ್ಪನ್ನು ತಿದ್ದಿಕೊಂಡು ಜೊತೆಗೆ ಕೆಲಸ ಮಾಡುವಂತಹವರು ಸಿದ್ಧರಿದ್ದರೆ ಸ್ವಾಗತಿಸುತ್ತೇನೆ ಎಂದು ಹೇಳಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದು 100 ದಿನಗಳಾಗಿದೆ, ಸ್ಥಳೀಯ ಶಾಸಕರ 100 ದಿನಗಳ ಸಾಧನೆಗಳ ಬಗ್ಗೆ ಚರ್ಚೆಗಳಾಗುತ್ತಿವೆ, ಜನ ಭ್ರಮನಿರಶನಗೊಂಡಿದ್ದಾರೆ. ನನ್ನ ಅವಧಿಯಲ್ಲಿ ನಮ್ಮ ಭಾಗದ ರೈತರ ಮೂರು ದಶಕಗಳ ಬೇಡಿಕೆಯಾಗಿದ್ದ ನುಗು ಏತನೀರಾವರಿ ಯೋಜನೆಗೆ ಮಂಜೂರಾತಿ ಪಡೆದಿದ್ದೆ, ಕವಲಂದೆ ಭಾಗದ ಕುಡಿಯುವ ನೀರಿನ ಯೋಜನೆಗಾಗಿ 8 ಕೋಟಿ ಅನುದಾನ ಪಡೆದು ಕಾಮಗಾರಿ ಪೂರ್ಣಗೊಳಿಸಿದ್ದೆ, ಕ್ಷೇತ್ರದಾದ್ಯಂತ 800 ಕೋಟಿ ಅನುದಾನ ತಂದು ಸಮಗ್ರವಾಗಿ ಅಭಿವೃದ್ಧಿ ಕಾರ್ಯ ನಡೆಸಿದ್ದೆ, ಆದರೂ ಮತದಾರ ಕೈಹಿಡಿಯಲಿಲ್ಲ. ಕ್ಷೇತ್ರದ 10 ಗ್ರಾ.ಪಂಗಳಲ್ಲಿ ಬಿಜೆಪಿ ಬೆಂಬಲಿತರು ಅಧಿಕಾರಕ್ಕೆ ಬಂದಿದ್ದಾರೆ, ಅವರನ್ನು ಅಭಿನಂದಿಸಲು ಸಂತೋಷವಾಗಿದೆ, ಮುಂದಿನ ಚುನಾವಣೆಗಳಲ್ಲಿ ಪಕ್ಷದ ಗೆಲುವಿಗಾಗಿ ಒಟ್ಟಾಗಿ ದುಡಿಯೋಣ ಎಂದು ಹೇಳಿದರು.

ಸಮಾರಂಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ತಾಲೂಕು ಅಧ್ಯಕ್ಷ ಹೊರಳವಾಡಿ ಪಿ.ಮಹೇಶ್, ನಗರಾಧ್ಯಕ್ಷ ಶ್ರೀನಿವಾಸರೆಡ್ಡಿ, ಜಿಪಂ ಮಾಜಿ ಸದಸ್ಯರಾದ ಸಿ.ಚಿಕ್ಕರಂಗನಾಯಕ, ಎಸ್.ಎಂ.ಕೆಂಪಣ್ಣ, ಬಿಜೆಪಿ ಮುಖಂಡ ಕುಂಬ್ರಳ್ಳಿ ಸುಬ್ಬಣ್ಣ, ನಗರಸಭಾಧ್ಯಕ್ಷ ಹೆಚ್.ಎಸ್. ಮಹದೇವಸ್ವಾಮಿ, ತಾಪಂ ಮಾಜಿ ಅಧ್ಯಕ್ಷ ಬಿ.ಎಸ್.ಮಹದೇವಪ್ಪ, ಹಿಂದುಳಿದ ವರ್ಗ ಮೋರ್ಚಾ ಪ್ರಧಾನ ಕಾರ್ಯದರ್ಶಿ ಹೆಮ್ಮರಗಾಲಸೋಮಣ್ಣ, ಮುಖಂಡರಾದ ಬಾಲಚಂದ್ರು, ಹುಲ್ಲಹಳ್ಳಿ ಮೋಹನ್, ಚಂದ್ರು, ನಗರಸಭಾ ಸದಸ್ಯರಾದ ಕಪಿಲೇಶ್, ಮಹದೇವಪ್ರಸಾದ್, ಸಿದ್ದರಾಜು ಸೇರಿದಂತೆ ಹಲವಾರು ಪ್ರಮುಖರು ಇದ್ದರು.

ಆದಿವಾಸಿಗಳಿಗೆ ಮಾರಕವಾಗಿರುವ ಮಸೂದೆ ಕೈಬಿಡಲು ಆಗ್ರಹಿಸಿ ಪ್ರತಿಭಟನೆ

ಹೆಚ್.ಡಿ.ಕೋಟೆ, ಆ.29- ಆದಿವಾಸಿಗಳ ಹಿತಕ್ಕೆ ಮಾರಕವಾಗಿರುವ ಅರಣ್ಯ ಸಂರಕ್ಷಣಾ ತಿದ್ದುಪಡಿ ಮಸೂದೆ ಅನ್ನು ಹಿಂಪಡೆಯುವಂತೆ ಆಗ್ರಹಿಸಿ ತಾಲೂಕು ಕಚೇರಿ ಎದುರು ಅಖಿಲ ಭಾರತ ಜನ ಅಧಿಕಾರ ಸುರಕ್ಷಾ ಸಮಿತಿಯ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರನ್ನು ಕುರಿತು ಮಾತನಾಡಿದ ಟಿ.ಆರ್.ಸುನೀಲ್, ಸುಸ್ಥಿರ ಅಭಿವೃದ್ಧಿ ಮಾದರಿಯನ್ನು ಕೈಬಿಟ್ಟು, ಬಂಡವಾಳಶಾಹಿಗಳು ಅತಿ ವೇಗವಾಗಿ ಲಾಭಗಳಿಸುವ ಉದ್ದೇಶದಿಂದ ಇತ್ತೀಚಿನ ವರ್ಷಗಳಲ್ಲಿ ರೂಪಿಸಿರುವ ಯೋಜನೆಗಳು ಮಾರಕವಾಗಿವೆ. ತೀವ್ರ ಹವಾಮಾನ ವೈಪರೀತ್ಯವನ್ನು ಅನುಭವಿಸುತ್ತಿದ್ದೇವೆ. ಇಂತಹ ಪರಿಸ್ಥಿತಿಯಲ್ಲಿ ಅಳಿದುಳಿದ ಅರಣ್ಯವನ್ನು ಕಾಪಾಡುವಂತಹ ನೀತಿಗಳ ಅಗತ್ಯತೆ ಇದೆ ಎಂದರು.

2022ರ ಜೂನ್ ತಿಂಗಳಲ್ಲಿ ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆ ಜಾರಿಗೆ ತಂದ ಹೊಸ ಅರಣ್ಯ ಸಂರಕ್ಷಣಾ ನಿಯಮಾವಳಿ 2022 ಈ ಆಶಯಕ್ಕೆ ವ್ಯತಿರಿಕ್ತವಾಗಿದೆ. ಇದೇ ರೀತಿ ಕೇಂದ್ರ ಸರ್ಕಾರ ರೂಪಿಸಿರುವ ಅರಣ್ಯ ಸಂರಕ್ಷಣಾ ತಿದ್ದುಪಡಿ ಮಸೂದೆ 2023 ಕೂಡ ಆಘಾತಕಾರಿಯಾಗಿದೆ. ಇದುವರೆಗೆ ಇದ್ದ ನಿಯಮದ ಪ್ರಕಾರ ಯಾವುದೇ ಅರಣ್ಯವನ್ನು ಪರಭಾರೆ ಮಾಡುವ ಮುನ್ನ ಸ್ಥಳೀಯ ಗ್ರಾಮ ಪಂಚಾಯಿತಿಯ ಮತ್ತು



ಅರಣ್ಯವಾಸಿಗಳ ಸಮ್ಮತಿ ಬೇಕಿತ್ತು ಎಂದರು.

ಈ ಹೊಸ ಅಧಿನಿಯಮದಲ್ಲಿ ಅದನ್ನು ತೆಗೆದು ಹಾಕಲಾಗಿದೆ. ಸರ್ಕಾರ ಬಯಸಿದರೆ ಅರಣ್ಯವನ್ನು ಯಾವುದೇ ಉದ್ದೇಶಕ್ಕಾಗಿ ಖಾಸಗಿಯವರಿಗೆ ವಹಿಸಬಹುದಾಗಿದೆ. ಗಣಿಗಾರಿಕೆ, ಪ್ರವಾಸೋದ್ಯಮ, ಜಂಗಲ್ ರೆಸಾರ್ಟ್, ಅಭಿವೃದ್ಧಿ ಯೋಜನೆಗಳಿಂದ ಆಗಿರುವ ಅರಣ್ಯ ಮತ್ತು ನಾಶದ ಪರಿಣಾಮವನ್ನು ಈಗಾಗಲೇ ದೇಶದ ಬಡ ಜನತೆ ಅನುಭವಿಸುತ್ತಿದ್ದಾರೆ ಎಂದು ಅವರು ಹೇಳಿದರು.

ಈ ಹಿನ್ನೆಲೆಯಲ್ಲಿ ಅಖಿಲ ಭಾರತ ಜನ ಅಧಿಕಾರ ಸುರಕ್ಷಾ ಸಮಿತಿ (ಎಐಜೆಎಎಸ್‌ಸಿ) ಯ ವತಿಯಿಂದ ದೇಶವ್ಯಾಪಿ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಮನವಿ ನೀಡುತ್ತಿದ್ದೇವೆ. ನ್ಯಾಯಯುತವಾದ ನಮ್ಮ ಆಗ್ರಹವನ್ನು ಈಡೇರಿಸಬೇಕೆಂದು ಕೋರುತ್ತಿದ್ದೇವೆ ಎಂದು ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿ, ಪ್ರತಿಭಟನೆಯನ್ನು ಕೈಬಿಟ್ಟರು. ಪ್ರತಿಭಟನೆಯಲ್ಲಿ ಸೀಮಾ ಜಿ ಎಸ್ ಪುಷ್ಪ, ಸುಬ್ರಹ್ಮಣ್ಯಿ, ಚಿಕ್ಕಯ್ಯ, ಬಸಮ್ಮ, ನಾಗಮ್ಮ ಕುಮಾರಿ, ನಿಂಗಮ್ಮ, ಮಾದಯ್ಯ, ಶೀರಮ್ಮ, ಶಾಂತಮ್ಮ, ಗೌರಮ್ಮ, ನಂಜುಂಡ, ಕಾವ್ಯ, ಸುಮತಿ, ಶಿವಬಸಮ್ಮ, ಪುಟ್ಟಿ, ರತ್ನಮ್ಮ, ರಮೇಶ್ ಸೇರಿದಂತೆ ವಿವಿಧ ಆದಿವಾಸಿ ಹಾಡಿಗಳಿಂದ ನೂರಾರು ಜನ ಭಾಗವಹಿಸಿದ್ದರು.

ಶ್ರೀಕಂಠೇಶ್ವರ ಸ್ವಾಮಿ ದೇವಾಲಯ ಹುಂಡಿಯಲ್ಲಿ 1. 68 ಕೋಟಿ ಸಂಗ್ರಹ

ನಂಜನಗೂಡು, ಆ.29- ನಗರದ ಶ್ರೀಕಂಠೇಶ್ವರ ದೇವಾಲಯದ 34 ಹುಂಡಿಗಳಲ್ಲಿ 1. 68 ಕೋಟಿ ಹಣ ಸಂಗ್ರಹವಾಗಿದೆ. ದೇವಾಲಯದ ದಾಸೋಹ ಭವನದಲ್ಲಿ ಮಂಗಳವಾರ ಹುಂಡಿಗಳನ್ನು



ತೆರೆದು ಎಣಿಕೆ ಕಾರ್ಯ ನಡೆಸಲಾಯಿತು.

ನಗದು 1,68,75992, ಚಿನ್ನ 88 ಗ್ರಾಂ, ಬೆಳ್ಳಿ 4.45 ಕೆ.ಜಿ ಹಾಗೂ 67 ವಿದೇಶಿ ಕರೆನ್ಸಿಗಳು ದೊರೆತಿವೆ. ಬ್ಯಾಂಕ್ ಆಫ್ ಬರೋಡ ಹಾಗೂ ದೇವಾಲಯದ ಸಿಬ್ಬಂದಿ, ನೂರಕ್ಕೂ ಹೆಚ್ಚು ಸ್ವಸಹಾಯ ಸಂಘದ ಮಹಿಳಾ ಸದಸ್ಯೆಯರು ಹುಂಡಿ ಹಣ ಎಣಿಕೆಯಲ್ಲಿ ಭಾಗಿಯಾಗಿದ್ದರು.

ದೇವಾಲಯದ ಇಓ ಜಗದೀಶ್ ಕುಮಾರ್, ಲೆಕ್ಕಾಧಿಕಾರಿ ಗುರುಮಲ್ಲಯ್ಯ, ಬ್ಯಾಂಕ್ ಆಫ್ ಬರೋಡ ವ್ಯವಸ್ಥಾಪಕ ಟಿ.ಕೆ.ನಾಯಕ್ ಉಪಸ್ಥಿತರಿದ್ದರು.

ಸೆ.1ರಂದು ವೀರನಹೊಸಹಳ್ಳಿಯಿಂದ ಗಜಪಯಣ ಆರಂಭ

15ಕ್ಕೂ ಹೆಚ್ಚು ಕಲಾತಂಡಗಳೊಂದಿಗೆ ಅದ್ಧೂರಿ ಸ್ವಾಗತಕ್ಕೆ ಸಿದ್ಧತೆ

ಹುಣಸೂರು, ಆ.29- ಸೆ.1ರಂದು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಗಳಲ್ಲೊಂದಾದ ಗಜಪಯಣ ಆರಂಭವಾಗಲಿದ್ದು, ಅರಣ್ಯ ಇಲಾಖೆ ಪೂರ್ವ ತಯಾರಿ ಜೋರಾಗಿ ನಡೆಯುತ್ತಿದೆ.

ಪ್ರತಿ ವರ್ಷದಂತೆ ಗಜಪಯಣ ಕಾರ್ಯಕ್ರಮ ನಾಗರಹೊಳೆ ರಾಷ್ಟ್ರೀಯ ಉದ್ಯಾನವನದ ವ್ಯಾಪ್ತಿಯ ವೀರನಹೊಸಳ್ಳಿಯ ಮುಖ್ಯದ್ವಾರದ ಮುಂಭಾಗ ನಡೆಯಲಿದ್ದು, ಗಜಪಡೆಗೆ ಅಭೂತಪೂರ್ವ ಸ್ವಾಗತದೊಂದಿಗೆ ಬರಮಾಡಿಕೊಳ್ಳಲು ಪ್ರವಾಸಿಗರು ಹಾಗೂ 15ಕ್ಕೂ ಹೆಚ್ಚು ಜಾನಪದ ಕಲಾತಂಡಗಳನ್ನು ಬಳಸಿಕೊಳ್ಳಲಾಗುತ್ತಿದೆ.

ಜಿಲ್ಲಾ ಉಸ್ತುವಾರಿ ಸಚಿವರಿಂದ ಪೂಜೆ ನೆರವೇರಿಸಿ ಮೈಸೂರಿಗೆ ಆನೆಗಳನ್ನು ಕರೆತರಲಾಗುತ್ತಿತ್ತು. ಆದರೆ, ಈ ಸಾಲಿನಿಂದ



ಹೊಸ ರೂಪ ನೀಡಲಾಗುತ್ತಿದೆ. ಸುಮಾರು 5 ಸಾವಿರ ಜನರನ್ನು ಸೇರಿಸಿ ಆನೆಗಳಿಗೆ ಸ್ವಾಗತ ಕೋರಿ ಬರಮಾಡಿಕೊಳ್ಳಲಾಗುತ್ತಿದೆ. ಈಗಾಗಲೇ ಪ್ರವಾಸೋದ್ಯಮ ಇಲಾಖೆ, ಶಾಲಾ ಕಾಲೇಜುಗಳು, ಮಹಿಳಾ ಸಂಘಗಳಿಗೂ ಮಾಹಿತಿ ನೀಡಿ, ಗಜ ಪಯಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಲಾಗಿದೆ.

15ಕ್ಕೂ ಹೆಚ್ಚು ಕಲಾ ತಂಡಗಳು: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್ ಸಿ ಮಹದೇವಪ್ಪ ಅವರು ಸೆ.1ರಂದು ಗಜಪಡೆಯ ನಾಯಕ ಅಭಿಮನ್ಯುಗೆ ಪುಷ್ಪಾರ್ಚನೆ ಮಾಡಿ ಚಾಲನೆ ನೀಡಲಿದ್ದಾರೆ. ಬಳಿಕ ಕಂಸಾಳೆ, ಡೊಳ್ಳು ಕುಣಿತ, ವೀರಗಾಸೆ ಕುಣಿತ, ಪೂಜಾ ಕುಣಿತ, ಆದಿವಾಸಿಗಳ ನೃತ್ಯ, ಟಿಬೆಟ್ ನೃತ್ಯ, ಗೊರವರ ಕುಣಿತ, ಜೇನ ಕುರುಬರ, ಕಾಡು ಕುರುಬರು ಸ್ಥಳೀಯ ಜನರಿಂದ ಕುಣಿತ ಸೇರಿದಂತೆ ಸುಮಾರು 15ಕ್ಕೂ ಹೆಚ್ಚಿನ ಕಲಾತಂಡಗಳು ಗಜಪಡೆಯ ಮುಂದೆ ಪ್ರದರ್ಶನ ನೀಡಲಿವೆ. ಅಲ್ಲದೆ ಆನೆಗಳನ್ನು ಮೆರವಣಿಗೆಯಲ್ಲಿ ಕೆಲ ದೂರ ಕರೆದೊಯ್ಯಲಾಗುತ್ತದೆ.

ಪ್ರಚಾರಕ್ಕೆ ಹೆಚ್ಚು ಒತ್ತು: ಈ ಬಾರಿ ಗಜಪಯಣಕ್ಕೆ ಹೆಚ್ಚು ಪ್ರಚಾರ ನೀಡಲಾಗುತ್ತದೆ. ಪ್ರಚಾರದ ಬಗ್ಗೆ ಜಾಹೀರಾತು ನೀಡುವುದರೊಂದಿಗೆ ಮೈಸೂರಿನ ವಿವಿಧೆಡೆ ಹಾಗೂ ಹುಣಸೂರು ಮುಖ್ಯ ರಸ್ತೆಯಲ್ಲಿ ಸುಮಾರು 20 ಸ್ಥಳಗಳಲ್ಲಿ ದೊಡ್ಡ-ದೊಡ್ಡ ಫಲಕಗಳನ್ನು ಪ್ರದರ್ಶಿಸಿ, ಸೆಪ್ಟೆಂಬರ್ 1ರಂದು ನಡೆಯುವ ಗಜಪಯಣಕ್ಕೆ ಸರ್ವರಿಗೂ ಸ್ವಾಗತ ಕೋರಲು ಅರಣ್ಯ ಇಲಾಖೆ ಕಾರ್ಯಕ್ರಮ ರೂಪಿಸಿದೆ. ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಮೊದಲ ತಂಡದಲ್ಲಿ ಒಂಬತ್ತು ಆನೆಗಳು ಆಗಮಿಸುತ್ತಿವೆ. ಎರಡನೇ ಬಾರಿ ಮಹೇಂದ್ರ, ಗೋಪಿ ಸೇರಿದಂತೆ ಏಳು ಆನೆಗಳನ್ನು ಕರೆತರಲಾಗುತ್ತಿದೆ. ಗಜಪಡೆಯ ನಾಯಕ, ಅಭಿಮನ್ಯು ಸಾರಥ್ಯದಲ್ಲಿ ವಿಜಯ ಮತ್ತು ಆನೆಗಳು ಆಗಮಿಸಲಿದ್ದು, ಇದರೊಂದಿಗೆ ಹೊಸ ಆನೆಗಳಾದ ಭೀಮ ಹಾಗೂ ವರಲಕ್ಷ್ಮಿಯನ್ನು ಹೆಚ್ಚುವರಿಯಾಗಿ ಕರೆತರಲು ನಿರ್ಧರಿಸಲಾಗಿದೆ. ಸುಮಾರು 3000 ಜನರಿಗೆ ಭೋಜನದ ಜೊತೆಗೆ ವೀರನಹೊಸಹಳ್ಳಿ ಆಶ್ರಮ ಶಾಲೆಯಲ್ಲಿ ಗಣ್ಯರಿಗೆ ಊಟದ ವ್ಯವಸ್ಥೆ ಮಾಡಲಾಗಿದೆ ಎಂದು ಗಜಪಯಣದ ಉಸ್ತುವಾರಿ ವಹಿಸಿರುವ ಡಿಸಿಎಫ್ ತಿಳಿಸಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಬೆದುರುಲಂಕ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಜೈಲರ್(ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಗದರ್-2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಬೇಬಿ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಜೈಲರ್ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಕಿಂಗ್ ಆಫ್ ಕೋತ (ತ)	4 ಪ್ರದರ್ಶನಗಳು
ಸಂಗಂ	
ಟೋಬಿ (ಕ)	4 ಪ್ರದರ್ಶನಗಳು
ಲಿಡೋ	
ಕೌಸಲ್ಯ ಸುಪ್ರಜಾ ರಾಮ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗಾಂಡೀವಧಾರಿ ಅರ್ಜುನ (ತೆ)	4 ಪ್ರದರ್ಶನಗಳು
ಪ್ರಭಾ	
ನಮೋ ಭೂತಾತ್ಮ-2 (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10ಕ್ಕೆ, ಜೈಲರ್ (ತ): ಮ.12.50ಕ್ಕೆ, ಸಂ.4ಕ್ಕೆ, ರಾ.7.10ಕ್ಕೆ, ಕಿಂಗ್ ಆಫ್ ಕೋಥಾ (ಮ): ರಾ.10.25ಕ್ಕೆ.
ಸ್ಕ್ರೀನ್ 2	ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಬೆ.9.50ಕ್ಕೆ, ಜೈಲರ್ (ಕ): ಮ.1ಕ್ಕೆ, ಗದರ್ 2 (ಹಿಂ): ಸಂ.4.10ಕ್ಕೆ, ಡ್ರೀಂ ಗರ್ಲ್ (ಹಿಂ): ರಾ.7.25ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 3	ರಾಮಚಂದ್ರ ಬಾಸ್ & ಕೋ (ಮ): ಬೆ.10ಕ್ಕೆ, ಗ್ರ್ಯಾನ್ ಟುರಿಸ್ಮೋ (ಇಂ): ಮ.1.30ಕ್ಕೆ, ರಾ.7.20ಕ್ಕೆ, ಗಾಂಡೀವಧಾರಿ ಅರ್ಜುನ (ತೆ): ಸಂ.4.30ಕ್ಕೆ, ಅಖೇಲಿ (ಹಿಂ): ರಾ.10ಕ್ಕೆ.
ಸ್ಕ್ರೀನ್ 4	ಟೋಬಿ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4.05ಕ್ಕೆ, ರಾ.7.10ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಜೈಲರ್ (ಕ): ಬೆ.11.20ಕ್ಕೆ, ರಾ.9.50ಕ್ಕೆ, ಜೈಲರ್ (ತ): ಮ.2.50ಕ್ಕೆ, ಸಂ.6.20ಕ್ಕೆ.
ಸ್ಕ್ರೀನ್ 2	ಗೂಮರ್ (ಹಿಂ): ಬೆ.9.55ಕ್ಕೆ, ಓಎಂಜಿ 2 (ಹಿಂ): ಮ.12.55ಕ್ಕೆ, ರಾ.7.15ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಸಂ.4.10ಕ್ಕೆ, ಬ್ಲೂ ಬೀಟಲ್ (ಇಂ): ರಾ.10.30ಕ್ಕೆ.
ಸ್ಕ್ರೀನ್ 3	ಗದರ್ 2 (ಹಿಂ): ಬೆ.9.55ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಮ.1.25ಕ್ಕೆ, ಬ್ಲೂ ಬೀಟಲ್ (ಇಂ): ಸಂ.4.55ಕ್ಕೆ, ಆಚಾರ್ & ಕೋ (ಕ): ರಾ.7.45ಕ್ಕೆ, ಗೂಮರ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಜೈಲರ್ (ತ): ಬೆ.10.30ಕ್ಕೆ, ಗದರ್ 2(ಹಿಂ): ಮ.2ಕ್ಕೆ, ಸಂ.6.10ಕ್ಕೆ, ಓಎಂಜಿ 2 (ಹಿಂ): ರಾ.9.40ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ.
ಸ್ಕ್ರೀನ್ 3	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 4	ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, ಗದರ್ 2 (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.9.45ಕ್ಕೆ, ಆಚಾರ್ & ಕೋ (ಕ): ಮ.3.55ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.3.25ಕ್ಕೆ, ರಾ.10.30ಕ್ಕೆ, ನಮೋ ಭೂತಾತ್ಮ (ಕ): ಬೆ.11.55ಕ್ಕೆ, ರಾಖಿ ಔರ್ ರಾಣಿ (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, ಓಪನ್‌ಹೈಮರ್ (ಇಂ): ಸಂ.6.35ಕ್ಕೆ, ಭೋಳಾ ಶಂಕರ್ (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, ಮೆಗ್ 2 (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮಾನಸಿಕ ಅಸ್ವಸ್ಥ ಆತ್ಮಹತ್ಯೆ

ನಂಜನಗೂಡು, ಆ.29- ನಗರದ ಚಾಮಲಾಪುರಹುಂಡಿ ಬಡಾವಣೆಯಲ್ಲಿ ಮಾನಸಿಕವಾಗಿ ಅಸ್ವಸ್ಥಗೊಂಡಿದ್ದ ವ್ಯಕ್ತಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.


ನಂಜನಗೂಡು ಕೈಗಾರಿಕಾ ಪ್ರದೇಶದಲ್ಲಿರುವ ರಿಷಿ ಕಾರ್ಖಾನೆಯ ಕಾರ್ಮಿಕ ನವಪ್ರಸನ್ನ(40) ಮೃತ ವ್ಯಕ್ತಿ. ಇವರು ಮೂಲತಃ ತಮಿಳುನಾಡಿನ ತಿರುಪೂರಿನವರಾಗಿದ್ದು, ನಂಜನಗೂಡಿನಲ್ಲಿ ಬಾಡಿಗೆ ಮನೆಯಲ್ಲಿ ನೆಲೆಸಿದ್ದರು. ಮೃತರಿಗೆ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಕೌಟುಂಬಿಕ ಕಲಹದಿಂದ ಮಾನಸಿಕ ಖಿನ್ನತೆಗೆ ಒಳಗಾಗಿದ್ದ ಇವರು ಸೋಮವಾರ ಮಧ್ಯಾಹ್ನ ಮನೆಯಲ್ಲಿ ಯಾರೂ ಇಲ್ಲದ ಸಮಯದಲ್ಲಿ ನೇಣಿಗೆ ಶರಣಾಗಿದ್ದಾರೆ ಎಂದು ಅವರ ಕುಟುಂಬದವರು ಪೊಲೀಸರಿಗೆ ದೂರು ನೀಡಿದ್ದಾರೆ.

ಘಟನಾ ಸ್ಥಳಕ್ಕೆ ಪಟ್ಟಣ ಠಾಣೆಯ ಪೊಲೀಸರು ತೆರಳಿ ಮಹಜರು ನಡೆಸಿದರು. ಮೃತದೇಹವನ್ನು ತಾಲೂಕು ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ, ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

ಈ ಸಂಬಂಧ ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

ಜಿನ್ನಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಹಂಪಾಪುರ, ಆ.29- ಹೆಚ್.ಡಿ.ಕೋಟೆ ತಾಲೂಕು ಹಂಪಾಪುರ ಹೋಬಳಿಯ ಜಿನ್ನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಯ ಅಧ್ಯಕ್ಷರಾಗಿ ಅಣ್ಣೆಗೌಡ, ಉಪಾಧ್ಯಕ್ಷರಾಗಿ ರತ್ನಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಜಿನ್ನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಚುನಾವಣಾಧಿಕಾರಿ ರಾಜು ಫಲಿತಾಂಶ ಘೋಷಿಸಿದರು. ನಿರ್ದೇಶಕರಾದ ಜಯರಾಮು, ರಾಜನಾಯಕ, ರಾಮು, ಕುಮಾರ ಸ್ವಾಮಿ, ಶಿವಮ್ಮ, ಮೋಹನ, ಕೃಷ್ಣ, ಶಿವಯ್ಯ, ಮರಳೂರು ನಾಯಕ, ಶಂಕರೇಗೌಡ, ಸೋಮಶೇಖರ್, ಸಿಇಓ ಗಿರೀಗೌಡ, ಇತರರು ಹಾಜರಿದ್ದರು.


"ಗೃಹಲಕ್ಷ್ಮಿ ಯೋಜನೆ"
ಚಾಲನೆ ನೀಡಲು ಆಗಮಿಸುತ್ತಿರುವ ಗಣ್ಯರಿಗೆ ಹೃತ್ಪೂರ್ವಕ ಸ್ವಾಗತ
ಮೈಸೂರು ಮತ್ತು ಕೊಡಗು ಜಿಲ್ಲೆಯ ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಗಳು
ಕಾಂಗ್ರೆಸ್ ಗ್ಯಾರಂಟಿ
ಗೃಹಲಕ್ಷ್ಮಿ
ಪ್ರತಿ ಯಜಮಾನಿಗೆ ಪ್ರತಿ ತಿಂಗಳು
₹2,000
ದಿನಾಂಕ
30-08-2023ರ
ಬೆಳಗ್ಗೆ 11.00ಕ್ಕೆ
ಸ್ಥಳ :
ಮಹಾರಾಜ ಕಾಲೇಜು
ಮೈದಾನ
ಮೈಸೂರು
ಗುರುಪಾದಸ್ವಾಮಿ
ಕೆಪಿಸಿಸಿ ಕಾರ್ಯದರ್ಶಿ
ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಆಕಾಂಕ್ಷಿ
Mob. 94482 93548, 95918 13339